₹ 4 ಪುಟ: 4 ಸಂಪುಟ: 4 ಸಂಚಿಕೆ 47 newsbelagavi@gmail.com 9900332089 9900332089



# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ

Volume : 4 Issue: 47 Tuesday, 04, APRIL, 2023 RNI: KARKAN/2020/79084 Regn,No:G-2/PMG/KA/NK/BM/139/2021-23 24

## ಭಾರತವನ್ನು ಭ್ರಷ್ಟಾಚಾರದಿಂದ ಮುಕ್ತಗೊಳಿಸುವುದು ಸಿಬಿಐನ ಪ್ರಮುಖ ಜವಾಬ್ದಾರಿ: ಪಿಎಂ ಮೋದಿ



ನವದೆಹಲಿ: 'ವೃತ್ತಿಪರ ಮತ್ತು ದಕ್ಷ ಸಂಸ್ಥೆಗಳಿಲ್ಲದೆ ಅಭಿವೃದ್ಧಿ ಹೊಂದಿದ ಭಾರತವನ್ನು ನಿರ್ಮಿಸುವುದು ಸಾಧ್ಯವಿಲ್ಲ ಮತ್ತು ಸಿಬಿಐಗೆ ದೊಡ್ಡ ಜವಾಬ್ದಾರಿ ಇದೆ' ಎಂದು ಪ್ರಧಾನಿ ನರೇಂದ್ರ ಮೋದಿ ಸೋಮವಾರ ಹೇಳಿದ್ದಾರೆ.

ಕೇಂದ್ರೀಯ ತನಿಖಾ ದಳದ(ಸಿಬಿಐ) ವಜ್ರ ಮಹೋತ್ಸವ ಸಮಾರಂಭವನ್ನು ಉದ್ದೇಶಿಸಿ ಮಾತನಾಡಿ, ಭ್ರಷ್ಟಾಚಾರವು ಪ್ರಜಾಪ್ರಭುತ್ವ ಮತ್ತು ನ್ಯಾಯಕ್ಕೆ ದೊಡ್ಡ ತಡೆಯಾಗಿದೆ ಎಂದರು.

ಭಾರತವನ್ನು ಭ್ರಷ್ಟಾಚಾರದಿಂದ ಮುಕ್ತಗೊಳಿಸುವುದು ಸಿಬಿಐನ ಪ್ರಮುಖ ಜವಾಬ್ದಾರಿಯಾಗಿದೆ. ಸರಕಾರವು ಮಿಷನ್ ಮೋಡ್‌ನಲ್ಲಿ ಕಪ್ಪು ಹಣ ಮತ್ತು ಬೇನಾಮಿ ಆಸ್ತಿಯ ವಿರುದ್ಧ ಕ್ರಮವನ್ನು ಪ್ರಾರಂಭಿಸಿದೆ.ಭ್ರಷ್ಟರ ಹೊರತಾಗಿ, ನಾವು ಭ್ರಷ್ಟಾಚಾರದ ಕಾರಣಗಳ ವಿರುದ್ಧ ಹೋರಾಡುತ್ತಿದ್ದೇವೆ ಎಂದು ಪ್ರಧಾನಿ ಹೇಳಿದರು.

ಇಂದಿಗೂ ಒಂದು ಪ್ರಕರಣ ಇತ್ಯರ್ಥವಾಗದೇ ಉಳಿದಿರುವಾಗ ಅದನ್ನು ಸಿಬಿಐಗೆ ವಹಿಸಬೇಕು ಎಂಬ ಬೇಡಿಕೆಗಳಿವೆ. ಸಿಬಿಐ, ತನ್ನ ಕೆಲಸ ಮತ್ತು ತಂತ್ರಗಳ ಮೂಲಕ ಜನರಿಗೆ ನಂಬಿಕೆಯನ್ನು ನೀಡಿದೆ ಎಂದು ಪ್ರಧಾನಿ ಪ್ರತಿಪಾದಿಸಿದರು.

## ಕತ್ತೆ ಹಾಲಿನ ಸಾಬೂನಿನಿಂದ ಮಹಿಳೆಯರು ಸುಂದರವಾಗುತ್ತಾರೆ: ಮೇನಕಾ ಗಾಂಧಿ



ಲಕ್ನೋ: ಮಹಿಳೆಯರ ಸೌಂದರ್ಯವರ್ಧನೆಯ ಬಗ್ಗೆ ಮೇನಕಾ ಗಾಂಧಿ ಮಾತನಾಡಿದ್ದು, ಕತ್ತೆಯ ಹಾಲಿನ ಸಾಬೂನು ಯಾವಾಗಲೂ ಮಹಿಳೆಯರ ದೇಹವನ್ನು ಸುಂದರವಾಗಿ ಇಡುತ್ತದೆ ಎಂದು ಹೇಳಿದ್ದಾರೆ.

ಮಾಜಿ ಕೇಂದ್ರ ಸಚಿವೆ ಹಾಗೂ ಬಿಜೆಪಿ ಸಂಸದೆ ಮೇನಕಾ ಗಾಂಧಿ ಅವರ ಹೇಳಿಕೆಯೊಂದು ಸಾಮಾಜಿಕ ಜಾಲತಾಣದಲ್ಲಿ ಭಾರೀ ಸದ್ದು ಮಾಡುತ್ತಿದೆ. ಅದಲ್ಲದೇ ಈಜಿಪ್ಟ್ ರಾಣಿ ಕ್ಲಿಯೋಪಾತ್ರಾ ಕೂಡ ಕತ್ತೆಯ ಹಾಲಿನಿಂದ ಸ್ನಾನ ಮಾಡುತ್ತಿದ್ದರು ಎಂದು ಹೇಳಿರುವ ವಿಡಿಯೋ ಈಗ ಎಲ್ಲೆಡೆ ವೈರಲ್ ಆಗಿದೆ.

ಉತ್ತರ ಪ್ರದೇಶದ ಸುಲ್ತಾನ್‌ಪುರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಈಜಿಪ್ಟ್ ಪ್ರಸಿದ್ಧ ರಾಣಿ ಕ್ಲಿಯೋಪಾತ್ರಾ ಕತ್ತೆ ಹಾಲಿನಲ್ಲಿ ಸ್ನಾನ ಮಾಡುತ್ತಿದ್ದರು. ಕತ್ತೆ ಹಾಲಿನಿಂದ ತಯಾರಿಸಿದ ಸೋಪುಗಳಿಗೆ ದಿಲ್ಲಿಯಲ್ಲಿ 500 ರೂ. ಬೆಲೆ ಇದೆ. ನಾವು ಮೇಕೆ ಹಾಲು ಮತ್ತು ಕತ್ತೆಯ ಹಾಲಿನೊಂದಿಗೆ ಸಾಬೂನು ತಯಾರಿಸಲು ಏಕೆ ಪ್ರಾರಂಭಿಸಬಾರದು? ಎಂದು ಮೇನಕಾ ಗಾಂಧಿ ಹೇಳಿದ್ದಾರೆ.

ಇದಷ್ಟೇ ಅಲ್ಲದೇ, ಲಡಾಖ್ ಸಮುದಾಯವು ಸಾಬೂನು ತಯಾರಿಸಲು ಕತ್ತೆಯ ಹಾಲನ್ನು ಬಳಸುತ್ತದೆ ಎಂದು ಮೇನಕಾ ಗಾಂಧಿ ತಮ್ಮ ಭಾಷಣದಲ್ಲಿ ಉಲ್ಲೇಖಿಸಿದ್ದಾರೆ. ಇದರ ಜೊತೆಯೇ ನೀವು ಕತ್ತೆಯನ್ನು ನೋಡಿ ಎಷ್ಟು ದಿನವಾಯಿತು? ಅವುಗಳ ಸಂಖ್ಯೆ ಕುಸಿಯುತ್ತಿದೆ. ದೋಬಿಗಳು ಕೂಡ ಕತ್ತೆಗಳನ್ನು ಬಳಸುವುದನ್ನು ನಿಲ್ಲಿಸಿದ್ದಾರೆ ಎಂದು ಹೇಳಿದ್ದಾರೆ.

# ಸಂವಿಧಾನ ಬದ್ಧವಾಗಿ ಮೀಸಲಾತಿ

## ಕಾಂಗ್ರೆಸ್ ಮುಖಂಡ ಸುರ್ಜೇವಾಲ ಹೇಳಿಕೆಗೆ ಸಿಎಂ ತಿರುಗೇಟು



ಬೆಂಗಳೂರು: ಮೀಸಲಾತಿ ಕುರಿತು ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ನೀಡಿರುವ ಹೇಳಿಕೆಗೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಸೋಮವಾರ ತಿರುಗೇಟು ನೀಡಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಸಿಎಂ, ಮೀಸಲಾತಿ ನೀಡಿರುವುದಕ್ಕೆ ಕಾಂಗ್ರೆಸ್ ನಾಯಕರು ಅಕ್ರಮ, ಸಂವಿಧಾನ ವಿರೋಧಿ ಪದ ಬಳಸಿದ್ದಾರೆ ಎಂದು ಕಿಡಿಕಾರಿದರು.

ಕಾಂಗ್ರೆಸ್ ವಕ್ತಾರ ಮತ್ತು ರಾಜ್ಯ ಉಸ್ತುವಾರಿ ಸುರ್ಜೇವಾಲ ಟ್ವೀಟ್ ಕುರಿತು ಪ್ರತಿಕ್ರಿಯಿಸಿದ ಬೊಮ್ಮಾಯಿ, ಜನಸಂಖ್ಯೆ ಆಧಾರದ ಮೇಲೆ ಮೀಸಲಾತಿ ನೀಡಲು ಡಾ.ಅಂಬೇಡ್ಕರ್ ಅವರು ಸಂವಿಧಾನದಲ್ಲಿ ಅವಕಾಶ ಕಲ್ಪಿಸಿದ್ದರು. ಅದರಂತೆ, ರಾಜ್ಯ ಸರ್ಕಾರ ಎಸ್‌ಸಿ/ಎಸ್‌ಟಿ ಸಮುದಾಯಗಳ ಬಹುಕಾಲದ ಬೇಡಿಕೆಯನ್ನು ಈಡೇರಿಸಿದ್ದು, ಸಂವಿಧಾನದ ಒಂಬತ್ತನೇ ಶೆಡ್ಯೂಲ್‌ಗೆ ಸೇರಿಸಲು ಶಿಫಾರಸು ಮಾಡಿದೆ. ಕಾಂಗ್ರೆಸ್ ಪಕ್ಷಕ್ಕೆ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಮತ್ತು ಅವರು ಬರೆದಿರುವ ಸಂವಿಧಾನದ ಮೇಲೆ ನಂಬಿಕೆ ಇಲ್ಲ ಎಂದರು.

ಬಿಜೆಪಿ ಈಗ ಜನರಿಗೆ ದ್ರೋಹ ಬಗೆದ ಪಕ್ಷವಾಗಿದೆ. 420 ಬಿಜೆಪಿ ಬೊಮ್ಮಾಯಿ ಸರ್ಕಾರದ ಮೀಸಲಾತಿ ದ್ವೇಷ, ವೈಷಮ್ಯ ಮತ್ತು ಘರ್ಷಣೆಯನ್ನು ಸೃಷ್ಟಿಸುವ ಕುಶಲ ರಾಜಕೀಯವನ್ನು ಮತ್ತಷ್ಟು ಸ್ಪಷ್ಟಪಡಿಸುತ್ತದೆ ಎಂದು ಸುರ್ಜೇವಾಲ ಟ್ವೀಟ್ ಮಾಡಿದ್ದರು.

ಕಾಂಗ್ರೆಸ್ ತನ್ನ ಅಧಿಕಾರಾವಧಿಯಲ್ಲಿ ಎಸ್‌ಸಿ/ಎಸ್‌ಟಿ ಸಮುದಾಯಗಳಿಗೆ ಏನನ್ನೂ ಮಾಡಿಲ್ಲ ಮತ್ತು ಅವರನ್ನು ಮತ ಬ್ಯಾಂಕ್‌ಗಾಗಿ ಬಳಸಿಕೊಂಡಿದೆ. ನ್ಯಾಯಮೂರ್ತಿ ನಾಗಮೋಹನ್ ದಾಸ್ ಆಯೋಗದ ವರದಿಯನ್ನು ನಾಲ್ಕು ವರ್ಷಗಳ ಹಿಂದೆ ಸಲ್ಲಿಸಲಾಗಿದೆ ಎಂದು ಸುಳ್ಳು ಹೇಳುತ್ತಿದ್ದಾರೆ. ಬಿಎಸ್ ಯಡಿಯೂರಪ್ಪ ಸರ್ಕಾರ ಆಯೋಗದ ಅವಧಿಯನ್ನು ಆರು ತಿಂಗಳು ವಿಸ್ತರಿಸಿದೆ ಎಂಬುದು ಸತ್ಯ ಎಂದು ಮುಖ್ಯಮಂತ್ರಿ ತಿಳಿಸಿದರು.

"ತಮ್ಮ ಆಡಳಿತಾವಧಿಯಲ್ಲಿ ಸರ್ವಪಕ್ಷ ಸಭೆ ಕರೆದು ಒಪ್ಪಿಗೆ ನೀಡಲಾಯಿತು. ನಂತರ ರಾಜ್ಯ ಸಚಿವ ಸಂಪುಟದಲ್ಲಿ ಎಸ್‌ಸಿ/ಎಸ್‌ಟಿ ಸಮುದಾಯಗಳ ಪರವಾಗಿ ನಿರ್ಣಯ ಕೈಗೊಳ್ಳಲಾಯಿತು. ಶೆಡ್ಯೂಲ್ 9 ಸೇರ್ಪಡೆ ಶಿಫಾರಸ್ಸನ್ನೂ ಮಾಡಲಾಗಿದೆ ಎಂದು ಬಸವರಾಜ ಬೊಮ್ಮಾಯಿ ಹೇಳಿದರು.

## ಜಮ್ಮು ಮತ್ತು ಕಾಶ್ಮೀರ: ಡ್ರೋನ್‌ನಿಂದ ಬಿದ್ದಿದ್ದ ಪ್ಯಾಕೆಟ್‌ನಿಂದ ಶಸ್ತ್ರಾಸ್ತ್ರ ಸ್ಫೋಟಕಗಳನ್ನು ವಶಪಡಿಸಿಕೊಂಡ ಪೊಲೀಸರು



ಸಾಂಬಾ/ಜಮ್ಮು: ಜಮ್ಮು ಮತ್ತು ಕಾಶ್ಮೀರದ ಸಾಂಬಾ ಜಿಲ್ಲೆಯ ಅಂತರರಾಷ್ಟ್ರೀಯ ಗಡಿ ಬಳಿ ಡ್ರೋನ್‌ನಿಂದ ಬೀಳಿಸಲಾಗಿದೆ ಎಂದು ಶಂಕಿಸಲಾದ ಪ್ಯಾಕೇಜ್‌ನಿಂದ ಶಸ್ತ್ರಾಸ್ತ್ರಗಳು ಮತ್ತು ಸ್ಫೋಟಕ ಸಾಮಗ್ರಿಗಳ ಸಂಗ್ರಹವನ್ನು ಪೊಲೀಸರು ಸೋಮವಾರ ವಶಪಡಿಸಿಕೊಂಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಸೋಮವಾರ ಮುಂಜಾನೆ ರಖ್ ಬರೋತಿಯ ರೈಲ್ವೆ ಮಾರ್ಗದ ಬಳಿ ಪತ್ತೆಯಾದ ಪ್ಯಾಕೇಜ್‌ನಲ್ಲಿ ಚೀನಾ ನಿರ್ಮಿತ ಮೂರು ಪಿಸ್ತೂಲ್ ಮತ್ತು 4 ಗ್ರೆನೇಡ್‌ಗಳಿವೆ ಎಂದು ಅವರು ಹೇಳಿದರು.

ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ (ಸಾಂಬಾ) ಸುರೀಂದರ್ ಚೌಧರಿ ಸುದ್ದಿಗಾರರೊಂದಿಗೆ ಮಾತನಾಡಿ, 'ವಿಜಯಪುರ ಭಾಗದ ರಖ್ ಬರೋತಿಯ ಹೊಲದಲ್ಲಿ ಶಂಕಿತ ಪ್ಯಾಕೇಜ್ ಇರುವ ಬಗ್ಗೆ ನಮಗೆ ಮಾಹಿತಿ ಬಂದಿತು. ನಾವು ತಕ್ಷಣ ಪೊಲೀಸರು, ಬಾಂಬ್ ನಿಷ್ಕ್ರಿಯ ದಳ ಮತ್ತು ಎಫ್‌ಎಸ್‌ಎಲ್ (ವಿಧಿ ವಿಜ್ಞಾನ ಪ್ರಯೋಗಾಲಯ) ತಂಡಗಳೊಂದಿಗೆ ಸ್ಥಳಕ್ಕೆ ಧಾವಿಸಿದ್ದೇವೆ' ಎಂದರು.

ಪೊಟ್ಟಣದಲ್ಲಿ ಐಇಡಿ (ಸುಧಾರಿತ ಸ್ಫೋಟಕ ಸಾಧನ) ಇದೆಯೇ ಎಂದು ಮೊದಲು ನಾವು ನೋಡಿದೆವು. ಪೊಟ್ಟಣದಿಂದ ವಶಪಡಿಸಿಕೊಂಡ ಶಸ್ತ್ರಾಸ್ತ್ರಗಳಲ್ಲಿ ಮೂರು ಚೀನಾ ನಿರ್ಮಿತ ಪಿಸ್ತೂಲ್‌ಗಳು, ಆರು ಮ್ಯಾಗಜೀನ್‌ಗಳು, 48 ರೌಂಡ್ಸ್‌ಗಳು ಮತ್ತು ನಾಲ್ಕು ಹ್ಯಾಂಡ್ ಗ್ರೆನೇಡ್‌ಗಳು ಸೇರಿವೆ ಎಂದು ಅಧಿಕಾರಿ ತಿಳಿಸಿದ್ದಾರೆ.

ಗಡಿಯಾಚೆಯಿಂದ ಡ್ರೋನ್ ಮೂಲಕ ಈ ಪೊಟ್ಟಣವನ್ನು ಇಲ್ಲಿ ಬೀಳಿಸಲಾಗಿದೆ ಎಂದು ಪೊಲೀಸರು ಶಂಕಿಸಿದ್ದಾರೆ.

ಡ್ರೋನ್ ಮೂಲಕ (ಅಂತರರಾಷ್ಟ್ರೀಯ ಗಡಿಯುದ್ದಕ್ಕೂ) ಶಸ್ತ್ರಾಸ್ತ್ರಗಳನ್ನು ಬೀಳಿಸಲಾಗಿದೆ ಎಂದು ತೋರುತ್ತಿದೆ. ಈ ಪೊಟ್ಟಣದಲ್ಲಿ ಬಾಕ್ಸ್ ಮತ್ತು 50 ಮೀಟರ್ ಅಳತೆಯ ಪ್ಲಾಸ್ಟಿಕ್‌ನ ಉದ್ದನೆಯ ದಾರವನ್ನು ಹೊಂದಿತ್ತು. ತನಿಖೆಯ ನಂತರವೇ ನಿಖರವಾದ ವಿವರಗಳನ್ನು ಕಂಡುಹಿಡಿಯಬಹುದು ಎಂದು ಹಿರಿಯ ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ.

## ಶಿಗ್ಗಾಂವಿ ಕ್ಷೇತ್ರದಿಂದ ಸ್ಪರ್ಧೆ ಸಿಎಂ ಬೊಮ್ಮಾಯಿ ಸ್ಪಷ್ಟನೆ



ಬೆಂಗಳೂರು: ಈ ಬಾರಿಯ ಚುನಾವಣೆಯಲ್ಲಿ ಕ್ಷೇತ್ರ ಬದಲಾವಣೆ ಮಾಡುವುದಿಲ್ಲ ಶಿಗ್ಗಾಂವಿ ಕ್ಷೇತ್ರದಿಂದಲೇ ಸ್ಪರ್ಧೆ ಮಾಡುತ್ತೇನೆ ಎಂದು ಸಿಎಂ ಬಸವರಾಜ ಬೊಮ್ಮಾಯಿ ಸ್ಪಷ್ಟನೆ ನೀಡಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿ ಅವರು, ಶಿಕ್ಷಣ ಮತ್ತು ಆರೋಗ್ಯಕ್ಕೆ ನಮ್ಮ ಸರ್ಕಾರ ವಿಶೇಷ ಆದ್ಯತೆ ನೀಡಿದೆ.

ದುಡ್ಡೇ ದೊಡ್ಡಪ್ಪ ಬದಲಾಗಿ, ದುಡಿಮೆಯೇ ದೊಡ್ಡಪ್ಪ ಆಗಿದೆ. ನಾವು ಮಾಡಿದ ಸಾಧನೆಯ ರಿಪೋರ್ಟ್ ಹಿಡಿದು ಮತ ಕೇಳುತ್ತಿದ್ದೇವೆ ಎಂದು ಹೇಳಿದ್ದಾರೆ. ಕೊರೊನಾ ಮತ್ತು ಪ್ರವಾಹದ ಸಂದರ್ಭದಲ್ಲೂ ಅಭಿವೃದ್ಧಿ ಮಾಡಿದ್ದೇವೆಎಂದು ಹೇಳಿದರು.



## ಟ್ರಾಲಿ ಬ್ಯಾಗ್‌ಗಳಲ್ಲಿ 34 ಕೆಜಿ ಗಾಂಜಾ ಸಾಗಿಸುತ್ತಿದ್ದ ಇಬ್ಬರ ಬಂಧನ

ಕಲಬುರಗಿ: ಟ್ರಾಲಿ ಬ್ಯಾಗ್‌ಗಳಲ್ಲಿ 34 ಕೆಜಿ ಗಾಂಜಾ ಸಾಗಿಸಲು ಯತ್ನಿಸುತ್ತಿದ್ದ ಇಬ್ಬರು ಆರೋಪಿಗಳು ಕಲಬುರಗಿ ರೈಲು ನಿಲ್ದಾಣದಲ್ಲಿ ರೆಡ್ ಹ್ಯಾಂಡ್ ಆಗಿ ಸಿಕ್ಕಿಬಿದ್ದಿದ್ದಾರೆ.

ಆರೋಪಿಗಳಿಂದ ವಶಪಡಿಸಿಕೊಳ್ಳಲಾಗಿರುವ 34 ಕೆಜಿ ಗಾಂಜಾದ ಮೌಲ್ಯ 25.5 ಲಕ್ಷ ರೂಪಾಯಿ ಆಗಿದೆ ಎಂದು ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಹುಸೇನ್ ಸಾಗರ್ ಎಕ್ಸ್ ಪ್ರೆಸ್ ರೈಲಿನಲ್ಲಿ ಗಾಂಜಾ ಸಾಗಾಟ ನಡೆಯುತ್ತಿರುವ ಬಗ್ಗೆ ಖಚಿತ ಮಾಹಿತಿ ಲಭ್ಯವಾದ ಹಿನ್ನೆಲೆಯಲ್ಲಿ ಸರ್ಕಾರಿ ರೈಲ್ವೆ ಪೊಲೀಸರು ಮತ್ತು ರೈಲ್ವೆ ರಕ್ಷಣಾ ಪಡೆ ಮಾರ್ಚ್ 28ರಂದು ಜಂಟಿ ಕಾರ್ಯಾಚರಣೆ ನಡೆಸಿ ಪ್ಲಾಟ್ ಫಾರಂ 2 ಮತ್ತು 3ರಲ್ಲಿ ಆರೋಪಿಗಳನ್ನು ಬಂಧನಕ್ಕೊಳಪಡಿಸಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಆರೋಪಿಗಳಿಬ್ಬರೂ ಮಹಾರಾಷ್ಟ್ರ ಮತ್ತು ತೆಲಂಗಾಣ ಮೂಲದವರಾಗಿದ್ದು, ಇಬ್ಬರ ವಿರುದ್ಧ ಎನ್‌ಡಿಪಿಎಸ್ ಕಾಯ್ದೆಯಡಿ ಪ್ರಕರಣ ದಾಖಲಿಸಲಾಗಿದೆ. ಇಬ್ಬರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ರಾಹುಲ್ ಗಾಂಧಿ ಜಾಮೀನ: ವಿಸ್ತರಿಸಿದ ಸೂರತ್ ಸೆಷನ್ಸ್ ಕೋರ್ಟ್



ಸೂರತ್:ಮಾನನಷ್ಟ ಪ್ರಕರಣದಲ್ಲಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರಿಗೆ ಸೂರತ್‌ನ ಸೆಷನ್ಸ್ ನ್ಯಾಯಾಲಯ ಸೋಮವಾರ ಎಪ್ರಿಲ್ 13 ರವರೆಗೆ ಜಾಮೀನು ವಿಸ್ತರಿಸಿದೆ ಮತ್ತು ಮೇ 3 ರಂದು ಶಿಕ್ಷೆಯ ವಿರುದ್ಧದ ಅವರ ಮನವಿಯನ್ನು ಆಲಿಸಲು ಒಪ್ಪಿಕೊಂಡಿದೆ.

ಎ 13 ರಂದು ನಡೆಯುವ ಜಾಮೀನು ವಿಚಾರಣೆಗೆ ರಾಹುಲ್ ಗಾಂಧಿ ಖುದ್ದಾಗಿ ಹಾಜರಾಗುವ ಅಗತ್ಯವಿಲ್ಲ ಎಂದು ರಾಹುಲ್ ಗಾಂಧಿ ಅವರ ವಕೀಲರ ತಂಡದ ವಕೀಲ ರೋಹನ್ ಪನ್ವಾಲಾ ಹೇಳಿದ್ದಾರೆ. ಅವರಿಗೆ ಜಾಮೀನು ಸಿಗುತ್ತದೆ ಎಂಬ ವಿಶ್ವಾಸ ನಮಗಿದೆ. ಸಾಮಾನ್ಯವಾಗಿ ಈ ಪ್ರಕರಣಗಳು ದೀರ್ಘಕಾಲದವರೆಗೆ ನಡೆಯುತ್ತವೆ. ಆದ್ದರಿಂದ, ಜಾಮೀನು ಸಾಮಾನ್ಯವಾಗಿ ನೀಡಲಾಗುತ್ತದೆ ಎಂದು ಪನ್ವಾಲಾ ಹೇಳಿದರು.

ಮ್ಯಾಜಿಸ್ಟ್ರೇಟ್ ತೀರ್ಪನ್ನು ಪ್ರಶ್ನಿಸಿ ರಾಹುಲ್ ಗಾಂಧಿ ಅವರ ಕಾನೂನು ತಂಡವು ಸೂರತ್ ಸೆಷನ್ಸ್ ನ್ಯಾಯಾಲಯಕ್ಕೆ ಮೇಲ್ಮನವಿ ಸಲ್ಲಿಸಿದ್ದು, ಜೊತೆಗೆ ರಾಹುಲ್ ಗಾಂಧಿ ಅವರು ನ್ಯಾಯಾಲಯಕ್ಕೆ ಎರಡು ಅರ್ಜಿಗಳನ್ನು ಸಲ್ಲಿಸಿದ್ದರು. ರಾಹುಲ್ ಗಾಂಧಿ ಅವರು ಹಿರಿಯ ಕಾಂಗ್ರೆಸ್ ನಾಯಕರೊಂದಿಗೆ ಸೂರತ್‌ಗೆ ಆಗಮಿಸಿದ್ದರು. ಕೋರ್ಟ್ ಆದೇಶದ ನಂತರ ರಾಹುಲ್ ಗಾಂಧಿ ಮತ್ತು ಹಲವು ಕಾಂಗ್ರೆಸ್ ನಾಯಕರು ಸೂರತ್‌ನಿಂದ ನಿರ್ಗಮಿಸುತ್ತಿದ್ದಾರೆ.

2019 ರ ಕ್ರಿಮಿನಲ್ ಮಾನನಷ್ಟ ಮೊಕದ್ದಮೆಯಲ್ಲಿ ಮೋದಿ ಉಪನಾಮ ಟೀಕೆಗಳಿಗೆ ಸಂಬಂಧಿಸಿದಂತೆ ದೋಷಿ ಮತ್ತು ಎರಡು ವರ್ಷಗಳ ಜೈಲು ಶಿಕ್ಷೆಗೆ ಗುರಿಯಾಗಿದ್ದರು.

## ಪಂಚಮಸಾಲಿ ಶ್ರೀಗಳಿಗೆ ಪೊಲೀಸ್ ಭದ್ರತೆ



ಬೆಂಗಳೂರು: ಪಂಚಮಸಾಲಿ ಮೀಸಲಾತಿ ಹೋರಾಟದ ನೇತೃತ್ವ ವಹಿಸಿಕೊಂಡಿದ್ದ ಪಂಚಮಸಾಲಿ ಪೀಠದ ಜಗದ್ಗುರು ಬಸವ–ಜಯ ಮೃತ್ಯುಂಜಯ ಸ್ವಾಮಿಗಳಿಗೆ ಪೊಲೀಸ್ ಭದ್ರತೆ ಒದಗಿಸುವಂತೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಸೂಚಿಸಿದ್ದಾರೆ.

ಸ್ವಾಮಿಗಳಿಗೆ ಜೀವಬೆದರಿಕೆ ಬಂದಿದೆ ಎನ್ನುವ ಹಿನ್ನೆಲೆಯಲ್ಲಿ ರಾಜ್ಯ ಪೊಲೀಸ್ ಮಹಾ ನಿರ್ದೇಶಕರಿಗೆ ಬೊಮ್ಮಾಯಿ ಈ ಸೂಚನೆ ನೀಡಿದ್ದಾರೆ. ಸರಕಾರದ ಮೀಸಲಾತಿ ನೀತಿಯನ್ನು ಒಪ್ಪಿ ಕೊಂಡಿರುವ ಹಿನ್ನೆಲೆಯಲ್ಲಿ ಸ್ವಾಮಿಗಳಿಗೆ ಕೆಲವರಿಂದ ಬೆದರಿಕೆ ಕರೆಗಳು ಬರುತ್ತಿವೆ.

ಮೀಸಲಾತಿ ಹೋರಾಟದ ಮುಂಚೂಣಿಯಲ್ಲಿದ್ದ ಕೆಲವು ಕಾಂಗ್ರೆಸ್ ನಾಯಕರು ಕಿರುಕುಳ ನೀಡುತ್ತಿದ್ದಾರೆ ಎಂದು ಶಾಸಕ ಅರವಿಂದ ಬೆಲ್ಲದ ಮತ್ತು ಸಚಿವ ಸಿ.ಸಿ.ಪಾಟೀಲ ಆರೋಪಿಸಿದ್ದರು.

ಈ ಹಿನ್ನೆಲೆಯಲ್ಲಿ ಸ್ವಾಮಿಗಳಿಗೆ ಭದ್ರತೆ ಒದಗಿಸುವಂತೆ ಬೊಮ್ಮಾಯಿ ಸೂಚನೆ ನೀಡಿದ್ದಾರೆ. ಮೀಸಲಾತಿ ಹೋರಾಟ ವಿಷಯವನ್ನು ಈ ಬಾರಿಯ ಚುನಾವಣೆ ವಿಷಯವಾಗಿ ಬಳಸಿಕೊಳ್ಳುವ ಎಲ್ಲ ಸೂಚನೆಗಳು ಕಂಡುಬರುತ್ತಿವೆ.

## ಸಿದ್ದರಾಮಯ್ಯ ಮತ್ತೆ ಸಿಎಂ ಆಗಬೇಕೆಂದು ದೇವರ ಮೊರೆ ಹೋದ ಅಭಿಮಾನಿ



ಯಾದಗಿರಿ: ಯಾದಗಿರಿಯ ಯುವ ಉದ್ಯಮಿಯೊಬ್ಬರು ಸಿದ್ದರಾಮಯ್ಯನವರ ಫೋಟೊ ಹಿಡಿದುಕೊಂಡು ಅಯ್ಯಪ್ಪ ಸ್ವಾಮಿ ಮಾಲೆ ಹಾಕಿಕೊಂಡು ಶಬರಿಮಲೆಗೆ ಯಾತ್ರೆ ಹೊರಟಿದ್ದಾರೆ.

ಅಚ್ಚರಿ ಎಂದರೆ ಅವರ ಹೆಸರು ಕೂಡಾ ಗುರುಮಣಿಕಂಠ ಎಂದು. ಅಯ್ಯಪ್ಪನ ಮೇಲೆ ಅಪರಿಮಿತ ನಂಬಿಕೆ ಹೊಂದಿರುವ ಗುರುಮಣಿಕಂಠ ಅವರು ಅಯ್ಯಪ್ಪ ಸ್ವಾಮಿ ತನ್ನ ಆಸೆ ಈಡೇರಿಸಿಬಿಡುತ್ತಾನೆ ಎನ್ನುವ ನಂಬಿಕೆಯಲ್ಲಿದ್ದಾರೆ.

ಸಿದ್ದರಾಮಯ್ಯ ಮತ್ತೆ ಪ್ರಚಂಡ ಬಹುಮತದಿಂದ ಗೆದ್ದು ಮತ್ತೆ ರಾಜ್ಯದಲ್ಲಿ ಸಿಎಂ ಆಗಬೇಕು ಎನ್ನುವುದು ಶಹಾಪುರದ ನಿವಾಸಿಯಾಗಿರುವ ಗುರುಮಣಿಕಂಠ ಅವರ ಪ್ರಮುಖ ಬೇಡಿಕೆ. ಅದರ ಜತೆಗೆ ಶಹಾಪುರದ ಕಾಂಗ್ರೆಸ್ ಶಾಸಕ ಶರಣಬಸಪ್ಪ ಗೌಡ ದರ್ಶನಾಪುರ ಅವರು ಮತ್ತೆ ಎಂಎಲ್‌ಎ ಆಗಬೇಕು. ಕಾಂಗ್ರೆಸ್ ಗೆದ್ದು ಅಧಿಕಾರಕ್ಕೆ ಬಂದು ಶರಣಬಸಪ್ಪ ಅವರು ಮಂತ್ರಿಯಾಗಬೇಕು ಎನ್ನುವುದು ಗುರುಮಣಿಕಂಠ ಅವರ ಬೇಡಿಕೆ.

ಅವರೀಗ ಕೈಯಲ್ಲಿ ಸಿದ್ದರಾಮಯ್ಯ ಹಾಗೂ ಶಾಸಕ ಶರಣಬಸ್ಸಪ್ಪಗೌಡ ದರ್ಶನಾಪುರ ಅವರ ಭಾವ ಚಿತ್ರ ಹಿಡಿದು ಕೇರಳದ ಅಯ್ಯಪ್ಪ ಸ್ವಾಮಿಯ ಮೊರೆ ಹೊಕ್ಕು ನಡೆಯುತ್ತಿದ್ದಾರೆ. ಇರುಮುಡಿ ಕಟ್ಟಿ ಹೊರಟಿರುವ ಅವರು ಅಷ್ಟಾಭೀಷಕ, ಪುಷ್ಪ ಅಭಿಷೇಕ ಪೂಜೆ ನಡೆಸಲಿದ್ದಾರೆ.

ಉದ್ಯಮಿ ಗುರು ಮಣಿಕಂಠ ಅವರಂತೆಯೇ ಇನ್ನೂ ಹಲವು ಅಭಿಮಾನಿಗಳು ಬೇರೆ ಬೇರೆ ರೀತಿಯ ಹರಕೆ ಹೊತ್ತು ಸಿದ್ದರಾಮಯ್ಯ ಅವರನ್ನು ಮುಖ್ಯಮಂತ್ರಿ ಮಾಡಿಯೇ ತೀರಬೇಕು ಎನ್ನುವ ಹಠದಲ್ಲಿದ್ದಾರೆ.

## ಬಿಜೆಪಿಯಂತಹ ಭ್ರಷ್ಟ ಸರ್ಕಾರ ಬರಲು ನಾನು ಕಾರಣ: ಹೆಚ್. ವಿಶ್ವನಾಥ್ ಬೇಸರ



ಮೈಸೂರು: ಬಿಜೆಪಿಯಂತಹ ಭ್ರಷ್ಟ ಸರ್ಕಾರ ಬರಲು ನಾನು ಕಾರಣವಾಗಿದ್ದಕ್ಕೆ ನನಗೆ ಅತೀವ ನೋವಿದೆ ಎಂದು ಬಿಜೆಪಿ ವಿಧಾನ ಪರಿಷತ್ ಸದಸ್ಯ ಹೆಚ್. ವಿಶ್ವನಾಥ್ ಬೇಸರ ವ್ಯಕ್ತಪಡಿಸಿದರು.

ಮೈಸೂರಿನ ನ್ಯಾಯಾಲಯದ ಮುಂಭಾಗ ಪಶ್ಚಾತಾಪ ಸತ್ಯಾಗ್ರಹ ಮಾಡಿ ಮಾತನಾಡಿದ ಅವರು, ಡಬಲ್ ಇಂಜಿನ್ ಸರ್ಕಾರ ಇದ್ದರೆ ರಾಜ್ಯಕ್ಕೆ ಒಳಿತೆಂದು ಸಮ್ಮಿಶ್ರ ಸರ್ಕಾರ ಬಿಳಿಸಿ ಬಿಜೆಪಿ ಸರ್ಕಾರ ತಂದೆವು. ಆದರೆ ಬಿಜೆಪಿ ಪರಮ ಭ್ರಷ್ಟ ಸರ್ಕಾರವಾಗಿದೆ.

ಇಂತಹ ಸರ್ಕಾರ ಬರಲು ನಾನು ಕಾರಣವಾಗಿದ್ದಕ್ಕೆ ನನಗೆ ಅತೀವ ನೋವಿದೆ. ನನಗೆ ಪಾಪ ಪ್ರಜ್ಞೆ ಕಾಡುತ್ತಿದೆ. ಪಾಪದ ಹೊರೆ ಇಳಿಸಿಕೊಳ್ಳಲು ಪಶ್ಚಾತಾಪ ಸತ್ಯಾಗ್ರಹ ಮಾಡುತ್ತಿದ್ದೇನೆ ಎಂದು ಹೇಳಿದರು.

ನಾನು ಬಿಜೆಪಿ ಪಕ್ಷದಿಂದ ವಿಧಾನ ಪರಿಷತ್ ಸದಸ್ಯನಾಗಿಲ್ಲ. ಸಾಹಿತ್ಯ ಕೋಟಾದಲ್ಲಿ ಎಂಎಲ್ಸಿ ಆಗಿದ್ದೇನೆ. ಈ ಚುನಾವಣೆಯಲ್ಲಿ ನಾನು ಕಾಂಗ್ರೆಸ್ ಬೆಂಬಲಿಸುತ್ತಿದ್ದೇನೆ ಎಂದು ಸ್ಪಷ್ಟಪಡಿಸಿದರು.

## ಮೂವರು ಯೋಧರಿಂದ ಇಬ್ಬರು ಮಹಿಳೆಯರ ಮೇಲೆ ಅತ್ಯಾಚಾರ; ಇಬ್ಬರ ಬಂಧನ




ಝಾನ್ಸಿ: ಆಘಾತಕಾರಿ ಘಟನೆಯೊಂದರಲ್ಲಿ ಭಾರತೀಯ ಸೇನೆಯ ಮೂವರು ಯೋಧರು ತಮ್ಮ ಮೇಲೆ ಅತ್ಯಾಚಾರ ಎಸಗಿದ್ದಾರೆ ಎಂದು ಆರೋಪಿಸಿ ಇಬ್ಬರು ಮಹಿಳೆಯರು ಉತ್ತರ ಪ್ರದೇಶದ ಝಾನ್ಸಿಯ ಜಿಆರ್‌ಪಿ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.

ಝಾನ್ಸಿ ರೈಲು ನಿಲ್ದಾಣದಲ್ಲಿ ನಿಲ್ಲಿಸಿದ್ದ ಸ್ಟೇಷನರಿ ಕೋಚ್‌ನಲ್ಲಿ ಮೂವರು ಯೋಧರು ತಮ್ಮ ಮೇಲೆ ಅತ್ಯಾಚಾರ ನಡೆಸಿದ್ದಾರೆ ಎಂದು ಮಹಿಳೆಯರು ಆರೋಪಿಸಿದ್ದಾರೆ.

ದೂರಿನ ಆಧಾರದ ಮೇಲೆ ಪ್ರಕರಣ ದಾಖಲಿಸಿಕೊಂಡ ಪೊಲೀಸರು, ಇಬ್ಬರು ಯೋಧರನ್ನು ಬಂಧಿಸಿದ್ದು, ಮತ್ತೊಬ್ಬ ಯೋಧ ತಲೆಮರೆಸಿಕೊಂಡಿದ್ದಾರೆ.

ಯೋಧರು ತಾವು ಫೋನ್ ಕಳೆದುಕೊಂಡಿದ್ದಾಗಿ ಹೇಳಿಕೊಂಡು ಮಹಿಳೆಯರ ಮೊಬೈಲ್ ಕೇಳಿದ್ದಾರೆ.

ನಂತರ ಆ ಮಹಿಳೆಯರನ್ನು ಪ್ಲಾಟ್‌ಫಾರ್ಮ್ 7 ರಲ್ಲಿ ನಿಲ್ಲಿಸಿದ್ದ ರೈಲ್ವೆ ಕೋಚ್‌ಗೆ ಕರೆದೊಯ್ದು ಅವರ ಮೇಲೆ ಅತ್ಯಾಚಾರ ಎಸಗಿದ್ದಾರೆ ಎಂದು ಜಿಆರ್‌ಪಿ ಸರ್ಕಲ್ ಅಧಿಕಾರಿ ಮೊಹಮ್ಮದ್ ನಯೀಮ್ ಅನ್ಸಾರಿ ತಿಳಿಸಿದ್ದಾರೆ.

ಜವಾನರಾದ ಸಂದೀಪ್, ರವೀಂದ್ರ ಮತ್ತು ಸುರೇಶ್ ವಿರುದ್ಧ ಪ್ರಕರಣ ದಾಖಲಿಸಿದ್ದು, ಅವರಲ್ಲಿ ಇಬ್ಬರನ್ನು ಬಂಧಿಸಲಾಗಿದೆ ಎಂದು ಅವರು ಹೇಳಿದ್ದಾರೆ.

ಜಿಆರ್‌ಪಿ ಠಾಣೆಯ ಪೊಲೀಸ್ ಅಧಿಕಾರಿಗಳು ರೈಲ್ವೆ ಕೋಚ್ ಅನ್ನು ಪರಿಶೀಲಿಸಿದ್ದಾರೆ ಮತ್ತು ಘಟನೆಯ ಬಗ್ಗೆ ಭಾರತೀಯ ಸೇನೆಗೆ ಮಾಹಿತಿ ನೀಡಿದ್ದಾರೆ.

## ಕೆಲಸಕ್ಕೆ ಗುಡ್ ಬೈ ರಾಜಕೀಯಕ್ಕೆ ಜೈ ಎಂದ ಪೊಲೀಸ್ ಅಧಿಕಾರಿ



ವಿಜಯಪುರ: ಸರ್ಕಾರಿ ಕೆಲಸಕ್ಕೆ ಗುಡ್ ಬೈ ಹೇಳಿ ಜಿಲ್ಲೆಯ ಅಧಿಕಾರಿಯೊಬ್ಬರು ರಾಜಕೀಯಕ್ಕೆ ಎಂಟ್ರಿ ಕೊಟ್ಟಿದ್ದಾರೆ. ಲೋಕಾಯುಕ್ತ ಇಲಾಖೆಯಲ್ಲಿ ಸಿಪಿಐ ಆಗಿದ್ದ ಮಾಜಿ ಅಧಿಕಾರಿ ಮಹೀಂದ್ರ ಕುಮಾರ್ ನಾಯಕ್ ಈ ಚುನಾವಣೆಯಲ್ಲಿ ಸ್ಪರ್ಧಿಸಲು ಸಿದ್ದರಾಗಿದ್ದಾರೆ.

ಜಿಲ್ಲೆಯ ನಾಗಠಾಣ ಮೀಸಲು ಮತಕ್ಷೇತ್ರದಿಂದ ಮಹೀಂದ್ರ ಕುಮಾರ್ ಕಣಕ್ಕಿಳಿಯಲು ತಯಾರಿ ನಡೆಸಿದ್ದಾರೆ. ಬಿಜೆಪಿ ಪಕ್ಷದ ಆಕಾಂಕ್ಷಿಯಾಗಿರುವ ಅವರು ಟಿಕೆಟ್ಗಾಗಿ ಕಾದಿದ್ದಾರೆ. ಈ ಮೊದಲು ಬಾಗಲಕೋಟೆ ಜಿಲ್ಲೆಯ ಲೊಕಾಯುಕ್ತ ಸಿಪಿಐ ಆಗಿ ಕಾರ್ಯನಿರ್ವಹಿಸುತ್ತಿದ್ದರು.

ತಮ್ಮ ಹುದ್ದೆಗೆ ಮಹೀಂದ್ರ ಕುಮಾರ್ ಮಾರ್ಚ್ ತಿಂಗಳಲ್ಲೇ ರಾಜೀನಾಮೆ ನೀಡಿದ್ದರು. ಆದರೆ ರಾಜೀನಾಮೆ ಅಂಗೀಕಾರವಾಗಿರಲಿಲ್ಲ. ಕಳೆದ 20 ದಿನಗಳ ಹಿಂದೆಯಷ್ಟೆ ಇವರನ್ನು ಬೆಂಗಳೂರು ಲೋಕಾಯುಕ್ತ ಡಿಜಿಪಿ ಕೇಂದ್ರ ಕಚೇರಿಗೆ ವರ್ಗಾಯಿಸಲಾಗಿತ್ತು. ಮಾ.31 ರಂದು ರಾಜೀನಾಮೆ ಅಂಗೀಕಾರವಾಗಿದೆ. ಇದೀಗ ಸಕ್ರಿಯ ರಾಜಕಾರಣಕ್ಕೆ ಮಾಜಿ ಪೊಲೀಸ್ ಅಧಿಕಾರಿ ಎಂಟ್ರಿ ಆಗಿದ್ದಾರೆ.

ನಾಗಠಾಣ ಮತಕ್ಷೇತ್ರದಿಂದ ಮಾಜಿ ಸಚಿವ ಬಿಜೆಪಿ ಪ್ರಭಾವಿ ನಾಯಕ ಗೋವಿಂದ ಕಾರಜೋಳ ಪುತ್ರ ಗೋಪಾಲ ಕಾರಜೋಳ ಕೂಡ ಟಿಕೆಟ್ ಆಕಾಂಕ್ಷಿ ಆಗಿದ್ದಾರೆ. ಬಿಜೆಪಿ ಟಿಕೆಟ್ ಯಾರಿಗಾದರೂ ಸಿಗಲಿ, ಕೆಲಸ ಮಾಡುವುದಾಗಿ ಮಹೀಂದ್ರ ಕುಮಾರ್ ಹೇಳಿದ್ದಾರೆ.

## ಸರ್ವರ್ ಡೌನ್:ಬ್ಯಾಂಕಿಂಗ್ ಸೇವೆ ವ್ಯತ್ಯಯ

ನವದೆಹಲಿ: ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಸೇರಿದಂತೆ ಹಲವು ಬ್ಯಾಂಕ್‌ಗಳಲ್ಲಿ ಸೋಮವಾರ ಸರ್ವರ್.ಸಮಸ್ಯೆಯಿಂದ ಗ್ರಾಹಕರು ಯುಪಿಐ, ನೆಟ್ ಬ್ಯಾಂಕಿಂಗ್.ಸೇವೆ ಸಿಗದೆ ಪರದಾಡಿದ ಪರಿಸ್ಥಿತಿ ನಿರ್ಮಾಣವಾಗಿತ್ತು. ಗ್ರಾಹಕರು ಸಾಮಾಜಿಕ ಜಾಲತಾಣಗಳಲ್ಲಿ ಆಕ್ರೋಶ ವ್ಯಕ್ತಪಡಿಸಿದರು. ಸೋಮವಾರ ಬೆಳಗ್ಗೆಯಿಂದಲೇ.ಎಸ್‌ಬಿಐ ಸರ್ವರ್ ಡೌನ್ ಆಗಿತ್ತು. ಬಳಕೆದಾರರು.ಟ್ವಿಟರ್ ಸೇರಿದಂತೆ ಸಾಮಾಜಿಕ ಜಾಲತಾಣಗಳ ಮೂಲಕ ಬೇಸರ ವ್ಯಕ್ತಪಡಿಸಿದರು.ದೇಶದ ಅತಿ ದೊಡ್ಡ ಬ್ಯಾಂಕ್‌ನಲ್ಲಿ ನೆಟ್ ಬ್ಯಾಂಕಿಂಗ್, ಯುಪಿಐ, ಯೂನೊ ಅಪ್ಲಿಕೇಶನ್ ಬೆಳಗ್ಗೆಯಿಂದಲೇ ಸಮರ್ಪಕವಾಗಿ ಕಾರ್ಯನಿರ್ವಹಿಸಲಿಲ್ಲ. ಕ್ರೆಡಿಟ್ ಕಾರ್ಡ್ ಪೇಮೆಂಟ್‌ಗಳು ಹಾಗೂ ಇತರ ಆನ್‌ಲೈನ್ ಸೇವೆಗಳಲ್ಲಿ ಅಡಚಣೆ ಕಂಡು ಬಂದಿತು. ಹಲವು ಕಡೆಗಳಲ್ಲಿ ಎಟಿಎಂಗಳಲ್ಲಿ ನಗದು ದೊರೆಯಲಿಲ್ಲ ಎಂದು ಗ್ರಾಹಕರು ದೂರಿದರು.

ಕೋಟಕ್ ಮಹೀಂದ್ರಾ ಬ್ಯಾಂಕ್‌ನಲ್ಲೂ ಸರ್ವರ್ ಸಮಸ್ಯೆಯಿಂದ ಗ್ರಾಹಕರಿಗೆ ಸೇವೆಗಳಲ್ಲಿ ಅಡಚಣೆಯಲ್ಲಿ ಉಂಟಾಯಿತು.

ಎಚ್‌ಡಿಎಫ್‌ಸಿ ಬ್ಯಾಂಕ್‌ನಲ್ಲೂ ಗ್ರಾಹಕರು ಮಾರ್ಚ್ 3 ಸೋಮವಾರ ಇಂಟರ್‌ನೆಟ್ ಬ್ಯಾಂಕಿಂಗ್ ಸೇವೆ ಸರಿಯಾಗಿ.ಸಿಗುತ್ತಿಲ್ಲ ಎಂದು ಆರೋಪಿಸಿದರು. ಮುಂಬಯಿ, ದಿಲ್ಲಿ ಬೆಂಗಳೂರು, ಚೆನ್ನೈ, ಹೈದರಾಬಾದ್, ಕೋಲ್ಕತಾ, ಸೂರತ್, ಚಂಡೀಗಢ ಮತ್ತಿತರ ನಗರಗಳಲ್ಲಿ.ತಾಂತ್ರಿಕ ಅಡಚಣೆ ಉಂಟಾಗಿತ್ತು. ಇದರಿಂದ ಗ್ರಾಹಕರು ಪರದಾಡುವ ಸ್ಥಿತಿ ನಿರ್ಮಾಣವಾಗಿತ್ತು.

# ಅಂಕಲಗಿ ಮಠದ ಶ್ರೀ ಗುರು ಸಿದ್ಧೇಶ್ವರ ಮಹಾಸ್ವಾಮಿಗಳ ಅಂತಿಮ ದರ್ಶನ ಪಡೆದ ಶಾಸಕ ಸತೀಶ ಜಾರಕಿಹೊಳಿ




ಗೋಕಾಕ್ : ತಾಲೂಕಿನ ಸುಕ್ಷೇತ್ರ ಅಂಕಲಗಿ ಅಡವಿ ಸಿದ್ಧೇಶ್ವರ ಮಠದ ಪೀಠಾಧಿಪತಿಯಾಗಿದ್ದ ಗುರು ಸಿದ್ಧೇಶ್ವರ ಮಹಾಸ್ವಾಮಿಗಳ ನಿಧನಕ್ಕೆ ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ ಜಾರಕಿಹೊಳಿ ಅವರು ಕಂಬನಿ ಮಿಡಿದಿದ್ದು, ಶ್ರೀಗಳ ಅಂತಿಮ ದರ್ಶನ ಪಡೆದರು.

ವಿಶಿಷ್ಠಾದ್ವೈತ ಸಿದ್ಧಾಂತ ತಳಹದಿಯ ಮೇಲೆ ರಚನೆಯಾಗಿ ಮೂರು ಶತಮಾನಗಳ ಇತಿಹಾಸ ಹೊಂದಿದ ಇಲ್ಲಿನ ಅಂಕಲಗಿಮಠ ಈ ಭಾಗದ ವಿವಿಧ ಭಕ್ತರಿಗೆ, ದೀನ ದಲಿತರ ಬೆಳಕಾಗಿದೆ. ಅಂಕಲಗಿ ಮಠವು ಬೆಳಗಾವಿ ನಾಡಿನಲ್ಲಿ ವಿಶಿಷ್ಟ ಇತಿಹಾಸ, ಭವ್ಯ ಪರಂಪರೆಯನ್ನು ಹೊಂದಿದೆ. ಮಠದ ಸರ್ವತೋಮುಖ ಬೆಳವಣಿಗೆಗಳಲ್ಲಿ ಶ್ರೀ ಗಳ ಪಾತ್ರ ಗಣನೀಯವಾಗಿತ್ತು. ಸಾಮಾಜಿಕ, ಧಾರ್ಮಿಕ, ಶೈಕ್ಷಣಿಕ ಸೇ-ರಿದಂತೆ ಹಲವು ಕ್ಷೇತ್ರಗಳಲ್ಲಿ ಅಪ್ರತಿಮ ಸೇವೆಯನ್ನು ಸಲ್ಲಿಸಿದ್ದರು. ಭಕ್ತರ ಪಾಲಿಗೆ ಪೂಜ್ಯನೀಯವಾಗಿತ್ತು.

ಶ್ರೀಮಠ ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ಹೆಸರು ವಾಸಿಯಾಗಿದೆ. ಮಠವು ಸಾವಿರಾರು ನಿರ್ಗತಿಕರ ಬಾಳಿಗೆ ಬೆಳಕು ನೀಡಿ ಮುನ್ನಡೆಸುತ್ತಿರುವ ಅಂಕಲಗಿ ಮಠ ಈ ಭಾಗದಲ್ಲಿ ಪ್ರಖ್ಯಾತಿ ಪಡೆದಿದೆ.

ನೇರ ನಡೆ-ನುಡಿಯ ಮೂಲಕ ಎಲ್ಲರ ಪ್ರೀತಿ-ಅಭಿಮಾನಕ್ಕೆ ಪಾತ್ರರಾಗಿದ್ದ ಶ್ರೀಗಳು.ಸದಾ ಹೊಸ ಆಲೋಚನೆಗಳ ಪ್ರಯೋಗ ಶೀಲ ಮನಸ್ಸು ಹೊಂದಿದರು. ಪೂಜ್ಯರು ಲಿಂಗೈಕ್ಯ ಎಂಬ ವಿಷಯ ತೀವ್ರ ಆಘಾತವನ್ನುಂಟುಮಾಡಿದೆ.

ಸಮಾಜದ ಅಸಮಾನತೆಗಳ ವಿರುದ್ಧ ಧ್ವನಿಯಾಗಿದ್ದ ಶ್ರೀಗಳ ಚಿಂತನೆಗಳು ನಮ್ಮೆಲ್ಲರಿಗೂ ಮಾದರಿ. ಶ್ರೀಗಳ ಭಕ್ತವೃಂದಕ್ಕೆ ಈ ದುಃಖ ಭ-ರಿಸುವ ಶಕ್ತಿಯನ್ನು ನೀಡಲಿ ಎಂದು ಶಾಸಕ ಸತೀಶ ಜಾರಕಿಹೊಳಿ ಅವರು ಸಂತಾಪ ಸೂಚಕದಲ್ಲಿ ತಿಳಿಸಿದ್ದಾರೆ.

## ಬೆಳಗಾವಿಯಲ್ಲಿ ಕೋರ್ ಕಮಿಟಿ ಮುಕ್ತಾಯ

# ಏಪ್ರಿಲ್ 8ಕ್ಕೆ ಬಿಜೆಪಿ ಮೊದಲ ಹಂತದ ಪಟ್ಟಿ ಬಿಡುಗಡೆ



ಬೆಳಗಾವಿ: ಕುಂದಾನಗ-ರಿಯಲ್ಲಿಂದು ದಿಢೀರ್ ಜಿಲ್ಲಾ ಮಟ್ಟದ ಬಿಜೆಪಿ ಕೋರ್ ಕಮಿಟಿ ಸಭೆ ಕರೆಯಲಾಗಿದ್ದು, ನಗರದ ಖಾಸಗಿ ಹೋಟೆಲ್ನಲ್ಲಿ ಕೇಂದ್ರ ಸಚಿವ ಪ್ರಹ್ಲಾದ ಜೋಶಿ, ಬಿಜೆಪಿ ಉಪಾಧ್ಯಕ್ಷ ನಿರ್ಮಲ್ ಕುಮಾರ್ ಸುರಾನಾ ನೇತೃತ್ವದಲ್ಲಿ ಬೆಳಗಾವಿ ನಗರ, ಗ್ರಾಮಾಂತರ ಹಾಗೂ ಚಿಕ್ಕೋಡಿ 3 ಸಂಘಟನಾತ್ಮಕ ಜಿಲ್ಲೆಗಳ ಪ್ರತ್ಯೇಕ ಕೋರ್ ಕಮೀಟಿ ಸಭೆ ನಡೆಯಿತು.

ಮಾಜಿ ಡಿಸಿಎಂ ಲಕ್ಷ್ಮಣ ಸವದಿ, ಮಾಜಿ ಸಚಿವ ರಮೇಶ್ ಜಾರಕಿಹೊಳಿ ಕೂಡ ಭಾಗಿಯಾಗಿದ್ರು. ಅಲ್ಲದೇ ಜಿಲ್ಲೆಯ 11 ಕ್ಷೇತ್ರದ ಹಾಲಿ ಬಿಜೆಪಿ ಶಾಸಕರು, ಇಬ್ಬರು ಸಂಸದರು, ಓರ್ವ ರಾಜ್ಯಸಭೆ ಸದಸ್ಯರು ಪಾಲ್ಗೊಂಡಿದ್ದು ಕೋರ್ ಕಮಿಟಿ ಸಭೆಯಲ್ಲಿ ಪ್ರತಿ ವಿಧಾನಸಭೆ ಕ್ಷೇತ್ರದಿಂದ ಮೂವರು ಆಕಾಂಕ್ಷಿಗಳ ಆಯ್ಕೆ ಆಗಲಿದೆ. ತಲಾ ಒಂದು ಕ್ಷೇತ್ರದಿಂದ ಮೂವರು ಆಕಾಂಕ್ಷಿಗಳನ್ನು ಆಯ್ಕೆ ಮಾಡಿ ರಾಜ್ಯ ಚುನಾವಣಾ ಸಮಿತಿಗೆ ಪಟ್ಟಿ ರವಾನೆ ಮಾಡಲಿದ್ದಾರೆ.

ಬೆಳಗಾವಿಯ 18 ಕ್ಷೇತ್ರಗಳ ಪೈಕಿ 15 ಕ್ಷೇತ್ರಗಳಲ್ಲಿ ಗೆಲುವಿನ ಗುರಿಯನ್ನು ಹೈಕಮಾಂಡ್ ಹೊಂದಿದೆ. ನಂತರ ಸಭೆಯನ್ನು ಮುಗಿಸಿ ಪ್ರಲ್ಹದ ಜೋಶಿ ಮಾಧ್ಯಮಗಳ ಜೊತೆ ಮಾತನಾಡಿ ಬೆಳಗಾವಿ ಎಲ್ಲ 18 ಕ್ಷೇತ್ರ ಗೆಲ್ಲಬೇಕು ಎನ್ನುವ ಹಿನ್ನಲೆಯಲ್ಲಿ ಎಲ್ಲರ ಜೊತೆ ಮುಖಾಮುಖಿಯಾಗಿ ಮಾತನಾಡಿದ್ದೇನೆ.

ಕೆಲವು ಗೊಂದಲವಿದ್ದು, ಅದನ್ನು ಸರಿ ಪಡಿಸಿ ನೇರವಾಗಿ ನನ್ನ ಜೊತೆ ಮಾತನಾಡಿ ಎಂದು ಸಲಹೆ ಕೊಟ್ಟಿದ್ದೇನೆ. ಏಪ್ರಿಲ್ 8ಕ್ಕೆ ಬಿಜೆಪಿ ಮೊದಲ ಹಂತದ ಪಟ್ಟಿ ಬಿಡುಗಡೆ ಮಾಡುತ್ತಿದ್ದೇವೆ.ಇಂದು ಸಂಜೆ ಬೆಂಗಳೂರಿನ ಕೋರ್ ಕಮಿಟಿ ಸಭೆಯಲ್ಲಿ ಮುಂದಿನ ನಿರ್ಧಾರ ಕೈಗೊಳ್ಳಲಾಗುವುದು.

# 500 ಕ್ಕೂ ಹೆಚ್ಚು ಕಾರ್ಯಕರ್ತರು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆ

ಬೈಲಹೊಂಗಲಳ: ಶಾಸಕ ಮಹಾಂತೇಶ ಕೌಜಲಗಿ ಅವರು ಮತಕ್ಷೇತ್ರದಲ್ಲಿ ಕೈಗೊಂಡ ಅಭಿವೃದ್ದಿ ಕಾರ್ಯಗಳನ್ನು ಮನಗಂಡು ಪುರಸಭೆ ಮಾಜಿ ಉಪಾಧ್ಯಕ್ಷ ಮಹಾಂತೇಶ ತುರಮರಿ ಅವರ ನೇತೃತ್ವದಲ್ಲಿ 500 ಕ್ಕೂ ಹೆಚ್ಚು ಕಾರ್ಯಕರ್ತರು ಶಾಸಕ ಮಹಾಂತೇಶ ಕೌಜಲಗಿ ಅವರ ಸಮ್ಮುಖದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಸೋಮವಾರ ಸೇರ್ಪಡೆಗೊಂಡರು.

ಅವರ ಗೃಹ ಕಚೇರಿಯಲ್ಲಿ ಶಾಸಕ ಮಹಾಂತೇಶ ಕೌಜಲಗಿ ಸರ್ವರನ್ನು ಕಾಂಗ್ರೆಸ್ ಪಕ್ಷದ ಶಾಲು ಹೊದಿಸಿ ಪಕ್ಷಕ್ಕೆ ಬರಮಾಡಿಕೊಂಡರು. ನಂತರ ಮಾತನಾಡಿದ ಅವರು ರಾಜ್ಯಕ್ಕೆ ಕಾಂಗ್ರೆಸ್ ಅನಿವಾರ್ಯ. ಕಾರಣ ಭಾರತೀಯ ಜನತಾ ಪಕ್ಷ ನುಡಿದಂತೆ ನಡೆದುಕೊಳ್ಳಲಿಲ್ಲ.

ಅಗತ್ಯ ವಸ್ತುಗಳ ಬೆಲೆ ಅರ್ಧ ಬೆಲೆಗೆ ಕೊಡುತ್ತೇವೆಂದು ಅಧಿಕಾರಕ್ಕೆ ಬಂದ ನಂತರ ಬೆಲೆ ಏರಿಕೆಯನ್ನು ಗಣನೀಯವಾಗಿ ಹೆಚ್ಚಳ ಮಾಡಿದರು. ಅಡುಗೆ ಅನಿಲ, ರಸ ಗೊಬ್ಬರ ಇನ್ನೂ ಅನೇಕ ವಸ್ತುಗಳ ಬೆಲೆ ಗಗನಕ್ಕೇರಿದ್ದು ಬಡ ಮತ್ತು ಮಧ್ಯಮ ವರ್ಗಕ್ಕೆ ಬರೆ ಎಳೆದಂತಾಗಿದೆ. ನನ್ನ ಅಧಿಕಾರ ಅವಧಿಯಲ್ಲಿ ಕ್ಷೇತ್ರದ ಸರ್ವಾಂಗೀಣ ಅಭಿವೃದ್ದಿಗೆ ಪ್ರಾಮಾಣಿಕವಾಗಿ ಪ್ರಯತ್ನ ಮಾಡಿದ್ದು ಜಾತಿ, ಮತ, ಪಂಥ ಎನ್ನದೆ ಎಲ್ಲ ಸಮುದಾಯಗಳಿಗೆ ಸರ್ಕಾರದ ಯೋಜನೆ, ಅನುದಾನಗಳನ್ನು ನೀಡಿದ್ದೇನೆ.

ಮತ್ತೇ ಈ ಬಾರಿ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ನನ್ನನ್ನು ಬೈಲಹೊಂಗಲ ಮತಕ್ಷೇತ್ರದ ಅಧಿಕೃತ ಅಭ್ಯರ್ಥಿಯನ್ನಾಗಿ ಘೋಷಣೆ ಮಾಡಿದ್ದು ಕ್ಷೇತ್ರದ ಜನ ಮತ್ತೊಮ್ಮೆ ಆಶೀರ್ವದಿಸಬೇಕೆಂದು ಮನವಿ ಮಾಡಿದರು.

# ಅಳೆದುತೂಗಿ ಹೈಕಮಾಂಡ್‌ಗೆ ಟಿಕೆಟ್ ಆಕಾಂಕ್ಷಿಗಳ ಪಟ್ಟಿ ಶಿಫಾರಸು: ಜೋಶಿ



ಬೆಳಗಾವಿ: ಎರಡು ದಿನಗಳಿಂದ ಎಲ್ಲಾ ಜಿಲ್ಲೆಯ ಕೋರ್ ಕಮಿಟಿ ಸದಸ್ಯರನ್ನು, ಪಕ್ಷದ ಅತ್ಯಂತ ಕೆಲ ಪ್ರಮುಖ ಮುಖಂಡರ ನೇತೃತ್ವದಲ್ಲೂ ಸಭೆ ಮಾಡಿದ್ದೇವೆ. ಅಳೆದುತೂಗಿ ರಾಷ್ಟ್ರೀಯ ಚುನಾವಣಾ ಸಮಿತಿ, ಸಂಸದೀಯ ಮಂಡಳಿಗೆ ಶಿಫಾರಸು ಮಾಡುತ್ತೇವೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಹೇಳಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇಡೀ ರಾಜ್ಯಾದ್ಯಂತ ಪದಾಧಿಕಾರಿಗಳು, ಕಾರ್ಯಕರ್ತರ ಅಭಿಪ್ರಾಯ ಸಂಗ್ರಹಿಸಿದ್ದೇವೆ.

ಇಂದಿನಿಂದ ಕಾರ್ಯಕರ್ತರ ಅಭಿಪ್ರಾಯ ಮತ್ತು ಕೋರ್ ಕಮಿಟಿ ಸದಸ್ಯರು ವ್ಯಕ್ತಪಡಿಸಿದ ಅಭಿಪ್ರಾಯಗಳನ್ನು ಅಳೆದು ತೂಗಿ ನೋಡಿ, ನಾವು ನಾಳೆ ಮತ್ತು ನಾಡಿದ್ದು ವಿಸ್ತೃತವಾಗಿ ಸಭೆ ಮಾಡಲಿದ್ದೇವೆ. ಅದಕ್ಕಿಂತ ಮೊದಲು ಕೆಲವು ಹೆಚ್ಚಿನ ವಿವರವನ್ನು ಪಡೆಯುತ್ತಿದ್ದೇವೆ ಎಂದು ತಿಳಿಸಿದರು.

ಬೆಳಗಾವಿ ಮತ್ತು ಬೆಂಗಳೂರು ಅತಿಹೆಚ್ಚು ಸ್ಥಾನ ಹೊಂದಿರುವ ಪ್ರದೇಶವಾಗಿದೆ. ಆದ್ದ-ರಿಂದ ಇನ್ನೂ ಕೆಲವು ಹೆಚ್ಚಿನ ವಿವರ ಸಂಗ್ರಹಿಸಿ ನಾಳೆ ಶಿಫಾರಸು ಮಾಡುತ್ತೇವೆ. ರಾಷ್ಟ್ರೀಯ ಚುನಾವಣಾ ಸಮಿತಿ, ಸಂಸದೀಯ ಮಂಡಳಿಗೆ ಶಿಫಾರಸು ಮಾಡುತ್ತೇವೆ. ಕೋರ್ ಕಮಿಟಿ ಸಭೆ ಮುಗಿಸಿಕೊಂಡು ಸೋಮವಾರ ಸಂಜೆ ಬೆಂಗಳೂರಿಗೆ ಹೋಗುತ್ತೇವೆ ಎಂದರು.

ಕೋರ್ ಕಮಿಟಿ ಸಭೆಯಲ್ಲಿ ಬೆಳಗಾವಿ ಜಿಲ್ಲೆಯ ನಾಯಕ-ರಿಂದ ಯಾವುದೇ ಗದ್ದಲ ಇಲ್ಲ. ಗಲಾಟೆ ಇಲ್ಲ. ಸ್ಪರ್ಧೆ ಜಾಸ್ತಿ ಇದ್ದಲ್ಲಿ, ಹೆಚ್ಚು ಸೀಟ್‌ಗಳಿದ್ದಲ್ಲಿ ಹೆಚ್ಚು ಗಮನ ಕೊಡಬೇಕಾಗುತ್ತದೆ. ರಮೇಶ್ ಜಾರಕಿಹೊಳಿ ಇಲ್ಲೇ ಇದ್ದಾರೆ. ಅವರನ್ನ ಕೇಳಿ ಯಾವ ಕಿತ್ತಾಟ ಇಲ್ಲ ಎಂದು ಬೆಳಗಾವಿ ಜಿಲ್ಲೆಯಲ್ಲಿ ಬಿಜೆಪಿ ಬಣ ಬಡಿದಾಟ ಅಲ್ಲಗಳೆದರು.

ಬೆಳಗಾವಿಯಲ್ಲಿ 18ಕ್ಕೆ 18 ಕ್ಷೇತ್ರ ಗೆಲ್ಲಲು ಒನ್ ಟೂ ಒನ್ ಮಾತನಾಡಿದ್ದೇನೆ. ಬರುವ ಏ.8 ಅಥ-ವಾ 9ರಂದು ಪಟ್ಟಿ ಬಿಡುಗಡೆ ಆಗುತ್ತದೆ. ಎಲ್ಲರೂ ಸನ್ನದ್ಧರಾಗಿ ಎಂದು ಸೂಚಿಸಿದ್ದೇನೆ. ಸಾಮಾನ್ಯವಾಗಿ 18ಕ್ಕೆ 16 ಗೆಲ್ಲುತ್ತೇವೆ ಎಂದು ಹೇಳುತ್ತಿದ್ದರು. ಈಗ 18 ಸ್ಥಾನ ಗೆಲ್ಲುತ್ತೇವೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

# ಬೈಕ್-ಕಾರು ಡಿಕ್ಕಿ: ತಂದೆ- ಮಗಳ ಸಾವು



ರಾಮನಗರ: ಶಾಲೆಗೆ ಮಗಳ ಬಿಟ್ಟು ಬರಲು ಹೋಗುತ್ತಿದ್ದಾಗ ಸಂಭವಿಸಿದ ಅಪಘಾತದಲ್ಲಿ ತಂದೆ-ಮಗಳು ಸಾವನ್ನಪ್ಪಿರುವ ದುರಂತ ಘಟನೆ ರಾಮನಗರದಲ್ಲಿ ನಡೆದಿದೆ.

ಬೈಕ್‌ಗೆ ಕಾರೊಂದು ಹಿಂಬದಿಯಿಂದ ಡಿಕ್ಕಿಯಾಗಿ ತಂದೆ ಮತ್ತು ಮಗಳು ಸ್ಥಳದಲ್ಲೇ ಪ್ರಾಣ ಕಳೆದುಕೊಂಡ ಘಟನೆ ರಾಮನಗರ ಜಿಲ್ಲೆಯ ಮಾಗಡಿ ಪಟ್ಟಣದ ಸಾಬರಪಾಳ್ಯ ಬಳಿ ನಡೆದಿದೆ. ಅಪಘಾತದಲ್ಲಿ ಯೋಗೇಶ್ (47 ವರ್ಷ) ಹಾಗೂ ಮಗಳು ಹರ್ಷಿತಾ(14 ವರ್ಷ) ಮೃತಪಟ್ಟಿದ್ದಾರೆ.

ಮೃತರು ಮಾಗಡಿಯ ಕಲ್ಯಾ ಗ್ರಾಮದ ನಿವಾಸಿಗಳಾಗಿದ್ದು, ತಂದೆ ಯೋಗೇಶ್ ತಮ್ಮ ಮಗಳಾದ ಹರ್ಷಿತಾರನ್ನು ಶಾಲೆಗೆ ಬಿಟ್ಟು ಬರಲೆಂದು ಹೋಗುತ್ತಿದ್ದಾಗ ಬೈಕ್‌ಗೆ ಹಿಂಬದಿಯಿಂದ ಕಾರು ಡಿಕ್ಕಿ ಹೊಡೆದಿದೆ. ಕಾರು ಡಿಕ್ಕಿ ಹೊಡೆದ ರಭಸಕ್ಕೆ ಯೋಗೇಶ್ ಮತ್ತು ಹರ್ಷಿತಾ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಕಾರಿನ ಅತಿ ವೇಗದ ಚಾಲನೆ ಮತ್ತು ಅಜಾಗರೂಕತೆಯೇ ದುರಂತಕ್ಕೆ ಕಾರಣವಾಗಿದ್ದು, ಅನ್ಯಾಯವಾಗಿ ತಂದೆ ಮತ್ತು ಮಗಳು ಪ್ರಾಣ ಕಳೆದುಕೊಂಡಿದ್ದಾರೆ.

ಪ್ರತಿನಿತ್ಯ ಶಾಲೆಗೆ ಬಿಡುತ್ತಿದ್ದಂತೆ ಮಗಳನ್ನು ಬೈಕ್‌ನಲ್ಲಿ ಕೂರಿಸಿಕೊಂಡು ತಂದೆ ಶಾಲೆಯತ್ತ ಸಾಬರಪಾಳ್ಯದ ಮಾರ್ಗವಾಗಿ ಹೋಗುತ್ತಿದ್ದಾಗ ಜವರಾಯನಾಗಿ ಹಿಂದಿನಿಂದ ಬಂದ ಕಾರು ಡಿಕ್ಕಿ ಹೊಡೆದು ಇಬ್ಬರು ಸ್ಥಳದಲ್ಲಿಯೇ ಸಾವನ್ನಪ್ಪಿದ್ದಾರೆ. ಸ್ಥಳೀಯರು ಬಂದು ಗಾಯಾಳುಗಳನ್ನು ರಕ್ಷಣೆ ಮಾಡಲು ಮುಂದಾದರೂ ಸ್ಥಳದಲ್ಲಿಯೇ ಇಬ್ಬರ ಪ್ರಾಣಪಕ್ಷಿ ಹಾರಿಹೋಗಿತ್ತು. ಘಟನೆಯ ಸುದ್ದಿ ತಿಳಿದ ತಕ್ಷಣವೇ ಸ್ಥಳಕ್ಕೆ ಮಾಗಡಿ ಠಾಣೆ ಪೊಲೀಸರು ಧಾವಿಸಿ ಪರಿಶೀಲನೆ ನಡೆಸಿ ಅಪಘಾತಕ್ಕೆ ಕಾರಣವಾದ ಕಾರನ್ನು ಪೊಲೀಸರು ಜಪ್ತಿಮಾಡಿದ್ದಾರೆ. ಕೃತ್ಯ ನಡೆಸಿ ಪರಾರಿಯಾಗಿರುವ ಕಾರು ಚಾಲಕನ ಬಂಧನಕ್ಕೆ ತೀವ್ರ ಶೋಧ ಕೈಗೊಳ್ಳಲಾಗಿದೆ.

# ಜಾರ್ಖಾಂಡ್‌'ನಲ್ಲಿ ಎನ್ಕೌಂಟರ್: ಐವರು ನಕ್ಸಲರ ಹೊಡೆದುರುಳಿಸಿದ ಭದ್ರತಾ ಪಡೆ



ರಾಂಚಿ (ಜಾರ್ಖಂಡ್): ಜಾರ್ಖಂಡ್ ರಾಜ್ಯದ ಛತ್ರದಲ್ಲಿ ಭದ್ರತಾ ಪಡೆಗಳು ಎನ್ಕೌಂಟರ್ ನಡೆಸಿದ್ದು, ಐವರು ನಕ್ಸಲರನ್ನು ಹೊಡೆದುರುಳಿಸಿದ್ದಾರೆ.

ಹತ್ಯೆಗೀಡಾದ ಐವರ ಪೈಕಿ ಇಬ್ಬರಿಗೆ ತಲಾ 25 ಲಕ್ಷ ರೂ ಹಾಗೂ ಮೂವರ ಪತ್ತೆಗೆ ತಲಾ 5 ಲಕ್ಷ ರೂ ಇನಾಮು ಘೋಷಣೆ ಮಾಡಲಾಗಿತ್ತು.

ಸಿಆರ್‌ಪಿಎಫ್ ಕೋಬ್ರಾ ಬೆಟಾಲಿಯನ್, ಜೆಎಪಿ ಮತ್ತು ಐಆರ್‌ಬಿ ಜೊತೆಗೆ ಪಲಾಮು ಮತ್ತು ಚತ್ರಾ ಜಿಲ್ಲೆಗಳ ಪೊಲೀಸ್ ಪಡೆಗಳು ಕಾರ್ಯಾಚರಣೆಯಲ್ಲಿ ಭಾಗಿಯಾಗಿದ್ದವು ಎಂದು ತಿಳಿದುಬಂದಿದೆ.

ಗೌತಮ್ ಪಾಸ್ವಾನ್ ಮತ್ತು ಚಾರ್ಲಿ ಇಬ್ಬರೂ ವಿಶೇಷ ಪ್ರದೇಶ ಸಮಿತಿಯ ಸದಸ್ಯರಾಗಿದ್ದು, ಇವರ ಬಂಧನಕ್ಕೆ ಈ ಹಿಂದೆ ಪೊಲೀಸರು ತಲಾ 25 ಲಕ್ಷ ರೂಪಾಯಿ ಬಹುಮಾನವನ್ನು ಘೋಷಿಸಿದ್ದರು. ನಂದು, ಅಮರ್ ಗಂಜು ಮತ್ತು ಸಂಜೀವ್ ಭುಯಾನ್ ಉಪ ವಲಯ ಕಮಾಂಡರ್‌ಗಳಾಗಿದ್ದು, ಇವರಿಗೆ ತಲಾ 5 ಲಕ್ಷ ರೂಪಾಯಿ ಬಹುಮಾನವನ್ನು ಘೋಷಿಸಲಾಗಿತ್ತು.

ಪಲಾಮು ಗಡಿಯಲ್ಲಿರುವ ಛಾತಾರಾದಲ್ಲಿನ ಲಾವಾಲಾಂಗ್ ಪೊಲೀಸ್ ಠಾಣೆ ವ್ಯಾಪ್ತಿಯ ಕಾಡಿನಲ್ಲಿ ಕೆಲವು ಮಾವೋವಾದಿ ಕಮಾಂಡರ್‌ಗಳಿರುವ ಕು-ರಿತು ಮಾಹಿತಿ ತಿಳಿದುಬಂದಿತ್ತು. ಮಾಹಿತಿ ಹಿನ್ನೆಲೆಯಲ್ಲಿ ಸಿಆರ್‌ಪಿಎಫ್ ಕೋಬ್ರಾ ಬೆಟಾಲಿಯನ್, ಜೆಎಪಿ ಮತ್ತು ಐಆರ್‌ಬಿ ಜೊತೆಗೆ ಪಲಾಮು ಮತ್ತು ಚತ್ರಾ ಜಿಲ್ಲೆಗಳ ಪೊಲೀಸ್ ಪಡೆಗಳುಕಾರ್ಯಾಚಣೆ ಆರಂಭಿಸಿತ್ತು. ಬೆಳಗ್ಗೆ 9 ಗಂಟೆ ಸುಮಾರಿಗೆ ಕಾರ್ಯಾಚರಣೆ ಆರಂಭವಾಗಿತ್ತು. ಈ ವೇಳೆ ಭದ್ರತಾ ಪಡೆಗಳನ್ನು ಕಂಡ ಮಾವೋವಾದಿಗಳು ಗುಂಡಿನ ದಾಳಿ ನಡೆಸಲು ಆರಂಭಿಸಿದರು. ಇದಕ್ಕೆ ಭದ್ರತಾ ಪಡೆಗಳು ದಿಟ್ಟ ಉತ್ತರ ನೀಡಿ, ಐವರು ನಕ್ಸಲರನ್ನು ಹತ್ಯೆ ಮಾಡಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಹತ್ಯೆಯಾದ ನಕ್ಸಲರಿಂದ ಇದೀಗ ಎಕೆ 47, ಇನ್ಸಾಸ್ ರೈಫಲ್ಸ್ ವಶಪಡಿಸಿಕೊಳ್ಳಲಾಗಿದ್ದು, ಸ್ಥಳದಲ್ಲಿ ಕಾರ್ಯಾಚರಣೆ ಮುಂದುವರೆದಿದೆ ಎಂದು ತಿಳಿದುಬಂದಿದೆ.

## ಕವಿಗೋಷ್ಠಿಗೆ ಕವನಗಳ ಆಹ್ವಾನ

ಬೈಲಹೊಂಗಲ: ತಾಲೂಕಿನ ದೊಡವಾಡ ಗ್ರಾಮದ ವಿದ್ಯಾನಗರದ ಸದ್ಗುರು ಶ್ರೀ ಸಿದ್ಧಾರೂಡರ 7 ನೇ ವರ್ಷದ ಜಾತ್ರಾ ಮಹೋತ್ಸವದ ಅಂಗವಾಗಿ ಹಾಗೂ ಭಾರತೀಯ ಸೃಜನಶೀಲ ಕನ್ನಡ ಸಾಹಿತ್ಯ ಬಳಗ ಇವರ ಸಹಯೋಗದಲ್ಲಿ ಪ್ರಪ್ರಥ-ಮ ಬಾರಿಗೆ ದೊಡವಾಡ ಗ್ರಾಮದ ಶ್ರೀ ಸಿದ್ಧಾರೂಡರ ಮಠದಲ್ಲಿ ಉಪನ್ಯಾಸ ಸಾಹಿತ್ಯ ಚಿಂತನ ಮಂಥನ ಹಾಗೂ ಪುಸ್ತಕ ಬಹುಮಾನ ಮತ್ತು ಜಿಲ್ಲಾ ಮಟ್ಟದ ಕವಿಗೋಷ್ಠಿಯನ್ನು ಏ.13 ರಂದು ಮಧ್ಯಾಹ್ನ 2-30 ಗಂಟೆಗೆ ಏರ್ಪಡಿಸಲಾಗಿದೆ.

ಹಲವಾರು ಪೂಜ್ಯರು, ಸಾಹಿತಿಗಳು ಕಾರ್ಯಕ್ರಮಕ್ಕೆ ಆಗಮಿಸಲಿದ್ದು ಆಸಕ್ತ ಕವಿಗಳು ತಮ್ಮ ಹೆಸರು ನೊಂದಾಯಿಸಿಕೊಳ್ಳಲು ನಾಗರಾಜ ಹಂಪಸಾಗರ ( 7349338561), ಶ್ರೀಧರ ಆಸಂಗಿಹಾಳ (7022718016), ರಮಜಾನ್ ಕೆರಿಮನಿ (8147476437) ಇವರನ್ನು ಸಂಪರ್ಕಿಸಲು ಪ್ರಕಟಣೆಯಲ್ಲಿ ಕೋರಲಾಗಿದೆ.

# ಸಾಲಬಾಧೆ ತಾಳಲಾರದೆ ರೈತ ಆತ್ಮಹತ್ಯೆ



ಬೀದರ್: ಸಾಲಬಾಧೆ ತಾಳಲಾರದೆ ರೈತನೋರ್ವ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾದ ಘಟನೆ ಬೀದರ್ ಜಿಲ್ಲೆಯ ಔರಾದ್ ತಾಲೂಕಿನ ಹೆಡಗಾಪೂರ ಗ್ರಾಮದಲ್ಲಿ ನಡೆದಿದೆ.

ನಾಗಪ್ಪ ಹಲಗೆ (43) ಆತ್ಮಹತ್ಯೆಗೆ ಶರಣಾದ ವ್ಯಕ್ತಿ. ಇವರು ಪಿಕೆಪಿಎಸ್ ಸೇರಿದಂತೆ ವಿವಿಧ ಬ್ಯಾಂಕ್‌ಗಳಲ್ಲಿ 2 ಲಕ್ಷಕ್ಕೂ ಅಧಿಕ ಸಾಲ ಮಾಡಿದ್ದರು. ಸಾಲ ಮರುಪಾವತಿ ಮಾಡಲಾಗದೆ ಮನನೊಂದು ತನ್ನ ಜಮೀನಿನ ಮರವೊಂದಕ್ಕೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.ವಿಷಯ ತಿಳಿದು ಠಾಣಾ ಕುಸುನೂರು ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಈ ಕುರಿತು ಠಾಣಾ ಕುಸುನೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ತಾಂತ್ರಿಕ ದೋಷ: ದುಬೈ ವಿಮಾನ ಕೆಂಪೇಗೌಡ ಏರ್ಪೋರ್ಟ್ನಲ್ಲಿ ತುರ್ತು ಭೂಸ್ಪರ್ಶ



ಬೆಂಗಳೂರು: ತಾಂತ್ರಿಕ ದೋಷದಿಂದ ದುಬೈ ವಿಮಾನ ಕೆಂಪೇಗೌಡ ಅಂತಾರಾಷ್ಟ್ರೀಯ ಏರ್ಪೋರ್ಟ್ನಲ್ಲಿ ತುರ್ತು ಭೂಸ್ಪರ್ಶಗೊಂಡ ಘಟನೆ ನಿನ್ನೆರಾತ್ರಿ 9.07ಕ್ಕೆ ನಡೆಸಿದ್ದು ಇದೀಗ ಬೆಳಕಿಗೆ ಬಂದಿದೆ.

ಕೆಂಪೇಗೌಡ ಅಂತಾರಾಷ್ಟ್ರೀಯ ಏರ್ಪೋರ್ಟ್ನಲ್ಲಿ ದುಬೈಗೆ ತೆರಳುತ್ತಿದ್ದ ಎತಿಹಾದ್ ವಿಮಾನ ಟೇಕ್ ಆಫ್ ಆದ ಕೆಲವೇ ನಿಮಿಷದಲ್ಲಿ ತಾಂತ್ರಿಕ ದೋಷದಿಂದ ತುರ್ತು ಭೂಸ್ಪರ್ಶಗೊಂಡಿದೆ.

ಈ ವಿಮಾನದಲ್ಲಿ ಸುಮಾರು 200 ಪ್ರಯಾಣಿಕರನ್ನ ದುಬೈಗೆ ಹೊತ್ತು ಸಾಗುತ್ತಿತ್ತು ಎಂದು ತಿಳಿಯಲಾಗಿದೆ. ಅಷ್ಟೇ ಅಲ್ಲದೇ ತಾಂತ್ರಿಕ ದೋಷ ಕಂಡ ಬರುತ್ತಿದ್ದಂತೆ ಪೈಲೆಟ್‌ನ ಸಮಯಪ್ರಜ್ಞೆಯಿಂದ ನಂದಿ ಬೆಟ್ಟ ಸುತ್ತು ಹಾಕಿಕೊಂಡು ತಕ್ಷಣವೇ ತುರ್ತು ಭೂಸ್ಪರ್ಶ ಮಾಡಿದೆ ಎಂದು ವರದಿಯಾಗಿದೆ. ವಿಮಾನದಲ್ಲಿದ್ದ ಪ್ರಯಾಣಿಕರಿಗೆ ಆತಂಕ ಸೃಷ್ಟಿಯಾಗಿತ್ತು ಎಂದು ತಿಳಿದು ಬಂದಿದೆ.

# ಕರಾಟೆ ತರಬೇತಿ ಪಡೆಯಲು ಮುಂದಾಗಿ: ರಾಘವೇಂದ್ರ ಕುಲಕರ್ಣಿ




ಬಳ್ಳಾರಿ: ಗುಣಮಟ್ಟದ ಶಿಕ್ಷಣದ ಜೊತೆಗೆ ಕ್ರೀಡೆಗಳಿಗೂ ಮಕ್ಕಳು ಆದ್ಯತೆ ನೀಡಬೇಕು ಎಂದು ಜೋತಿಷಿ ರಾಘವೇಂದ್ರ ಕುಲಕರ್ಣಿ ಹೇಳಿದರು.

ನಗರದ ಎಸ್.ಎನ್.ಪೇಟೆ, ಗಣೇಶ ಕಾಲೋನಿಯಲ್ಲಿ ಜ್ಞಾನಶ್ರೀ ಪ್ರತಿಷ್ಠಾನ, ಶ್ರೀಪಾಂಡುರಂಗ ಯಾತ್ರಾ ಪ್ರವಾಸ ಅವರ ಆಶ್ರಯದಲ್ಲಿ ಕಳೆದ14 ವರ್ಷಗಳಿಂದ ಮಕ್ಕಳಿಗಾಗಿ ಆಯೋಜಿಸಲಾಗುತ್ತಿರುವ ಉಚಿತ ಬೇಸಿಗೆ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಶ್ಲೋಕಗಳಿಂದ ಮಕ್ಕಳ ಜ್ಞಾನ ವೃದ್ದಿಯಾಗಲಿದೆ.

ಮಕ್ಕಳು ಶ್ಲೋಕದ ಜೊತೆಗೆ ಕರಾಟೆ ತರಬೇತಿಯನ್ನು ಪಡೆದುಕೊಳ್ಳಲು ಮುಂದಾಗಬೇಕು, ಕರಾಟೆ ಪಟು, ಪ್ರತಿಷ್ಠಾನದ ವಿಜಯ ವಿಠಲ ಅವರು, 1ನೇ ತರಗತಿಯಿಂದ ಡಿಗ್ರಿ ಓದುವ ಹೆಣ್ಣು ಮಕ್ಕಳಿಗೆ ಶಿಬಿರದಲ್ಲಿ ಉಚಿತವಾಗಿ ಕರಾಟೆ ಕಲಿಸಲು ಮುಂದಾಗಿರುವುದು ಸಂತಸ ಮೂಡಿಸಿದೆ.

ಇತ್ತೀಚಿನ ದಿನಗಳಲ್ಲಿ ಪ್ರತಿಯೊಬ್ಬ ಹೆಣ್ಣು ಮಕ್ಕಳು ಕರಾಟೆ ತರಬೇತಿ ಪಡೆಯುವುದು ಅಗತ್ಯವಾಗಿದೆ ಎಂದರು.

ಪತ್ರಕರ್ತ ನರಸಿಂಹ ಮೂರ್ತಿ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಪ್ರತಿಯೊಬ್ಬರೂ ಗುಣಮಟ್ಟದ ಶಿಕ್ಷಣ ಪಡೆಯುವುದು ಅಗತ್ಯವಾಗಿದೆ, ಇದನ್ನೇ ನೆಪವಾಗಿಟ್ಟುಕೊಂಡು ಶಾಲೆಗಳಲ್ಲಿ ವರ್ಷ ಪೂರ್ತಿ ಮಕ್ಕಳಿಗೆ ಸಾಕಷ್ಟು ಹೊರೆಯಾಗುವ ರೀತಿಯಲ್ಲಿ ಶಿಕ್ಷಣ ಪದ್ಧತಿ ಮುಂದುವರೆದಿದೆ.

ಅದರಲ್ಲೂ ಖಾಸಗಿ ಶಾಲೆಗಳಲ್ಲಿ ಓದುವ ಮಕ್ಕಳ ಗೋಳು ಹೇಳತೀರದಾಗಿದೆ, ನಿರಂತರ ಶಿಕ್ಷಣದ ಒತ್ತಡಕ್ಕೆ ಸಿಲುಕಿದ ಮಕ್ಕಳಿಗೆ ವಿಶ್ರಾಂತಿಯೂ ಅಗತ್ಯವಿದೆ. ಹಾಗೆಂದು ಮಕ್ಕಳನ್ನು ಪೂರ್ಣ ಫ್ರೀಯಾಗಿ ಬಿಡದೇ ಇಂತಹ ಬೇಸಿಗೆ ತರಬೇತಿ ಶಿಬಿರಗಳಲ್ಲಿ ಸೇ-ರಿಸಲು ಪಾಲಕರು ಮುಂದಾಗಬೇಕು.

ಕಳೆದ 14 ವರ್ಷಗಳಿಂದ ಕರಾಟೆ ಪಟು ವಿಜಯ ವಿಠಲ ಅವರು ಉಚಿತ ಬೇಸಿಗೆ ಶಿಬಿರವನ್ನು ಆಯೋಜಿಸುತ್ತಿದ್ದು, ಸಂತಸ ಮೂಡಿಸಿದೆ. ಮಕ್ಕಳು ಇದರ ಸದುಪಯೋಗ ಪಡೆದು ಕೊಳ್ಳಬಹುದು ಎಂದರು.

ಶ್ರೀ ಪಾಂಡುರಂಗ ಯಾತ್ರಾ ಪ್ರವಾಸದ ಮುಖ್ಯಸ್ಥ ವಿಜಯವಿಠಲ ಮಾತನಾಡಿ, ಏ. 1ರಿಂದ ಮೇ.7ರ ವರೆಗೆ ಮಕ್ಕಳಿಗಾಗಿ ಬೇಸಿಗೆ ಉಚಿತ ಶಿಬಿರವನ್ನು ಹಮ್ಮಿಕೊಂಡಿದ್ದು, ಶಿಬಿರದಲ್ಲಿ ಕರಾಟೆ, ಯೋಗ ತರಬೇತಿ, ಚಿತ್ರಕಲೆ, ಶ್ಲೋಕ ಪಠಣ ಸೇರಿದಂತೆ ಇತ್ಯಾದಿಗಳನ್ನು ಹೇಳಿಕೊಡಲಾಗುವುದು. ಅಗತ್ಯಬಿದ್ದ ಮಕ್ಕಳಿಗೆ ಉಚಿತ ವೈದ್ಯಕೀಯ ತಪಾಸಣೆ ವ್ಯವಸ್ಥೆ ಮಾಡಿಸಲಾಗುವುದು ಎಂದರು.

# ಕುರಿ ಮತ್ತು ಆಡು ಸಾಕಾಣಿಕೆ ತರಬೇತಿ: ಅರ್ಜಿ ಅಹ್ವಾನ

ಬೆಳಗಾವಿ: ಕೆನರಾ ಬ್ಯಾಂಕ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ ವತಿಯಿಂದ ಬೆಳಗಾವಿ ಜಿಲ್ಲೆಯ ಗ್ರಾಮೀಣ ಪ್ರದೇಶದ ಯುವಕ-ರಿಗೆ ನಿರುದ್ಯೋಗಿಗಳಿಗೆ, ಮತ್ತು ಮಹಿಳಾ ನಿರುದ್ಯೋಗಿಗಳಿಗೆ ಕುರಿ ಮತ್ತು ಆಡು ಸಾಕಾಣಿಕೆ 10 ದಿನಗಳ ತರಬೇತಿಗಾಗಿ ಅರ್ಜಿಗಳನ್ನು ಅಹ್ವಾನಿಸಲಾಗಿದೆ.

**ಅರ್ಹತೆ :**

18 ರಿಂದ 45 ವಯಸ್ಸಿನವರಾಗಿರಬೇಕು, ಗಾಮೀಣ ಪ್ರದೇಶದವರಾಗಿರಬೇಕು, ದಾಖಲೆಗಳು:

ಐಡಿ ಕಾರ್ಡ, ಆಧಾರ ಕಾರ್ಡ, ಬ್ಯಾಂಕ ಪಾಸ್ ಬುಕ್ಕ 2 ಭಾವಚಿತ್ರಗಳು ಹೊಂದಿರಬೇಕು. ತರಬೇತಿಯಲ್ಲಿ ಊಟ, ವಸತಿ ಸಂಪೂರ್ಣ ಉಚಿತವಾಗಿರುತ್ತದೆ.

ಆರ್ಜಿ ಸಲ್ಲಿಸುವ ಕೊನೆಯ ದಿನಾಂಕ ಏ. 8, 2023, ಆರ್ಜಿಯನ್ನು ಸಂಸ್ಥೆಯ ಆರ್ಜಿ ನಮೂನೆಯಲ್ಲಿ ಅಥ-ವಾ ಬಿಳಿಹಾಳಿಯಲ್ಲಿ ನೇರವಾಗಿ ಕಾರ್ಯಾಲಯಕ್ಕೆ, ಪೋಸ್ಟ್ ಮುಖಾಂತರ ಅಥವಾ ಗೂಗಲ್ ಪಾರ್ಮ ಲಿಂಕನಲ್ಲಿ https://docs.google.com/forms/d/e/1FAIpQLSdZEI9np-V5dVuQbdqFXUGc6yt__7daI02YrhyvRSLywjlFfKA/viewform?vc=0&c=0&w=1&flr=0 ಅರ್ಜಿಗಳನ್ನು ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ:- 0831-2440644, 8296792166, 9845750043, 8050406866, 8867388906, 9449860564 ಗೆ ಸಂಪರ್ಕಿಸಬಹುದು ಅಥವಾ ಕೆನರಾ ಬ್ಯಾಂಕ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ (ಸಿಬಿ ಆರ್‌ಸೆಟಿ), ಪ್ಲಾಟ ನಂ. ಸಿ ಎ -03 (ಪಾರ್ಟ) ಕಣಬರ್ಗಿ ಇಂಡಸ್ಟ್ರಿಯಲ್ ಎರಿಯಾ, ಆಟೋ ನಗರ. ಬೆಳಗಾವಿ - 590015. ಕಛೇರಿಗೆ ಭೇಟಿ ನೀಡಬಹುದು ಎಂದು ಕೆನರಾ ಬ್ಯಾಂಕ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೂತನ ಪ್ರಾದೇಶಿಕ ಆಯುಕ್ತರಾಗಿ ಡಾ.ಬಗಾದಿ ಗೌತಮ್ ಅಧಿಕಾರ ಸ್ವೀಕಾರ



ಬೆಳಗಾವಿ: ಬೆಳಗಾವಿ ವಿಭಾಗದ ನೂತನ ಪ್ರಾದೇಶಿಕ ಆಯುಕ್ತರಾಗಿ ಡಾ.ಬಗಾದಿ ಗೌತಮ್ ಅವರು ಸೋಮವಾರ(ಏ.3) ಅಧಿಕಾರ ಸ್ವೀಕರಿಸಿದರು.

ಅಪರ ಪ್ರಾದೇಶಿಕ ಆಯುಕ್ತರಾದ ನಜ್ಮಾ ಪೀರಜಾದೆ ಅವರು ನೂತನ ಪ್ರಾದೇಶಿಕ ಆಯುಕ್ತರನ್ನು ಬರಮಾಡಿಕೊಂಡರು.

ಡಾ.ಬಗಾದಿ ಗೌತಮ್ ಅವರು ಈ ಮುಂಚೆ ಬೆಳಗಾವಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯಾಗಿ ಕಾರ್ಯನಿರ್ವಹಿಸಿದ್ದರು.

# ಅಡವಿ ಸೋಮನಾಳದಲ್ಲಿ ಪೋಷಣ್ ಪಕ್ವಾಡ್ ಅಭಿಯಾನ: ಗಮನ ಸೆಳೆದ ಸಿರಿ ಧಾನ್ಯಗಳ ಮಾದರಿ



ನಾಲತವಾಡ: ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯವು ಮಾ.20 ರಿಂದ ಎಪ್ರಿಲ್ 3 2023 ರವರೆಗೆ 5ನೇ ಪೋಷಣ್ ಪಕ್ವಾಡ್‌ವನ್ನು ರಾಷ್ಟವ್ಯಾಪಿ ನಾನಾ ಚಟುವಟಿಕೆಗಳ ಮೂಲಕ ದೇಶಾದ್ಯಂತ ಎಲ್ಲಾ ಅಂಗನವಾಡಿ ಕೇಂದ್ರಗಳಲ್ಲಿ ಆಚರಿಸಲಾಗುತ್ತಿದ್ದು ಜನ-ರಿಗೆ ಪೋಷಕಾಂಶ ಆಹಾರಗಳ ಮಹತ್ವ ತಿಳಿಸುವ ಉದ್ದೇಶವಾಗಿದೆ ಎಂದು ಅಂಗನವಾಡಿ ಕಾರ್ಯಕರ್ತೆ ಸುನಂದಾ ಸೇಲಾರ್ ಹೇಳಿದರು.

ಇಲ್ಲಿಗೆ ಸಮೀಪದ ಅಡವಿ ಸೋಮನಾಳದಲ್ಲಿ ಪೋಷಣ ಪಕ್ವಾಡ್ ಕಾರ್ಯಕ್ರಮ ಹಾಗೂ ಅಭಿಯಾನದ ಜಾಥಾಗೆ ಚಾಲನೆ ನೀಡಿ ಮಾತನಾಡಿದರು.

ಪ್ರತಿ ವರ್ಷವೂ ಮಾರ್ಚ ತಿಂಗಳ ಸುಮಾರು 20 ದಿನಗಳ ಕಾಲ ಪೋಷಣ್ ಪಕ್ವಾಡ್ ಆಚರಿಸುತ್ತಿದ್ದು ಒಟ್ಟಾರೆ ಆರೋಗ್ಯದ ಕಡೆ ಭಾರತ ಎನ್ನುವ ಕೂಗು ಎಲ್ಲರಿಗೆ ಈ ಅಭಿಯಾನದ ಮೂಲಕ ತಲುಪಿಸಬೇಕಿದೆ ಎಂದರು. ಯಾವದೇ ಕಾರ್ಯಕ್ರಮಗಳಿಗೂ ಸ್ಥಳಿಯ ಸಮುದಾಯದ ಸಹಭಾಗಿ-ತ್ವದ ಅವಶ್ಯವಿದ್ದು, ಸಿರಿ ಧಾನ್ಯಗಳ ಸೇವನೆಯುತ್ತ ಪ್ರಮುಖ ಗಮನ ನಮ್ಮದಾಗಲಿ ಎಂದರು.

ಇದೇ ವೇಳೆ ಆರೋಗ್ಯ ಹಾಗೂ ನೈರ್ಮಲ್ಯ, ಸಿರಿಧಾನ್ಯ ರಾಗಿಯಿಂದ ನಾನಾ ಬಗೆಯ ತಿಂಡಿ ತಿನಿಸುಗಳನ್ನು ಸಿದ್ದಪಡಿಸಿ ಇದರ ಮಹತ್ವ ಅರಿವು ಮೂಡಿಸಲಾಯಿತು. ನಂತರ ಬಸಮ್ಮ ಕಡಿಯವರು ಪೋಷಣ ಪಕ್ವಾಡನ ಪ್ರತಿಜ್ಞಾವಿಧಿ ಬೋಧಿಸಿದರು, ಕಿಶೋ-ರಿಯರಿಗೆ ಯೋಗದ ಮಹತ್ವ ಹೇಳಿ ಕೊಡಲಾಯಿತು. ಬಾಲವಿಕಾಸ ಸಮೀತಿಯ ಅಧ್ಯಕ್ಷೆ ವಿಜಯಲಕ್ಷ್ಮೀ ಜೋಗಿನ ಉದ್ಘಾಟಿಸಿದರು, ಕಾರ್ಯಕ್ರಮ ಉದ್ಘಾಟನೆಗೂ ಮುಂಚೆ ಮಕ್ಕಳೊಂದಿಗೆ ಪೋಷಣ್ ಪಕ್ವಾಡ್ ಕುರಿತು ಜಾಗೃತಿ ಮೂಡಿಸುವ ಮಕ್ಕಳ ಕೈಯಲ್ಲಿದ್ದ ನಾಮ ಫಲಕಗಳ ಪ್ರದರ್ಶನ ಗಮನ ಸೆಳೆದವು.

ಕಾರ್ಯಕ್ರಮದಲ್ಲಿ ಸುನಂದಾ ಸೇಲಾರ್, ಬಸಮ್ಮ ಕಡಿ, ಅಂಜನಾದೇವಿ ಬಡಿಗೇರಿ, ಲಕ್ಷ್ಮೀ ಗಡಗುಂಟಿ, ರೇಣುಕಾ ಗುಂಡಕನಾಳ, ಸತ್ಯಮ್ಮ ನಾಗರಾಳ, ವಿಜಯಲಕ್ಷ್ಮೀ ಜೋಗಿನ, ಬಸಮ್ಮ ಹಂಗರಗಿ, ನಾಗಮ್ಮ ಚವನಬಾವಿ, ನಿಂಗಮ್ಮ ನಾಯಕೋಡಿ, ಸುಜಾತ ಸರೂರ, ಶೈಲಾ ಟಕ್ಕಳಕಿ, ರೇಖಾ ಪೂಜಾರಿ, ನಾಗಮ್ಮ ವಾಲಿಕಾರ, ಆಶಾ ಕಾರ್ಯಕರ್ತೆ ನಾಗಮ್ಮ ನರೂಡಿ ಇದ್ದರು.

## ವಿಧಾಸಭಾ ಚುನಾವಣೆ: ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ಸಹಾಯವಾಣಿ ಕೇಂದ್ರ (24/7)

ಬೆಳಗಾವಿ: ಕರ್ನಾಟಕ ವಿಧಾನಸಭಾ ಸಾರ್ವತ್ರಿಕ ಚುನಾವಣೆ-2023 ರ ಕುರಿತು 13-ಬೆಳಗಾವಿ ಗ್ರಾಮೀಣ ವಿಧಾನ ಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಸಾರ್ವಜನಿಕರಿಗೆ ಯಾವದೇ ಚುನಾವಣಾ ಸಂಬಂಧಿತ ದೂರುಗಳಿಗೆ, ಹಾಗೂ ಇತರ ಸಹಾಯಕ್ಕಾಗಿ ಚುನಾವಣಾಧಿಕಾರಿಯವರ ಕಛೇರಿ ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ಸಹಾಯವಾಣಿ ಕೇಂದ್ರ (24/7) ಸ್ಥಾಪಿಸಲಾಗಿದ್ದು ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬಹುದು.

ಸಹಾಯವಾಣಿ ಕೇಂದ್ರದ (24/7) ದೂರವಾಣಿ ಸಂಖ್ಯೆಗಳು 0831-2002878 ಮೋಬೈಲ್ ಸಂಖ್ಯೆ 7899672183 ಗೆ ಸಂಪರ್ಕಿಸಬಹುದು ಎಂದು 13-ಬೆಳಗಾವಿ ಗ್ರಾಮೀಣ ಮತಕ್ಷೇತ್ರದ ಚುನಾವಣಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಏ.5ರಂದು ಕಾಗವಾಡದಲ್ಲಿ ಸಹಾಯಕ ಚುನಾವಣಾ ಅಧಿಕಾರಿಗಳ ಕಛೇರಿ ಪ್ರಾರಂಭ

ಬೆಳಗಾವಿ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ಬುಧವಾರ (ಏ.05) ಡಾ. ಬಾಬು ಜಗಜೀವನ್ ರಾಮ್ ಉದ್ಯಾನವನ, ಸಂಗಮೇಶ್ವರ ನಗರದಲ್ಲಿ ಬೆಳಿಗ್ಗೆ 11 ಗಂಟೆಗೆ ಡಾ. ಬಾಬು ಜಗಜೀವನ್ ರಾಮ್ ಅವರ 116 ನೇ ಜನ್ಮದಿನಾಚರಣೆಯನ್ನು ಆಚರಿಸಲಾಗುವುದು.

ಕಾರ್ಯಕ್ರಮದ ಉದ್ಘಾಟಕರಾಗಿ ಪ್ರಾದೇಶಿಕ ಆಯುಕ್ತರಾದ ಡಾ. ಬಗಾದಿ ಗೌತಮ ಅವರು ಆಗಮಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಬೆಳಗಾವಿ ಉತ್ತರ ವಲಯ ಆರಕ್ಷಕ ಮಹಾನಿರೀಕ್ಷಕರಾದ ಎನ್ ಸತೀಶಕುಮಾರ ಅವರು ಆಗಮಿಸಲಿದ್ದಾರೆ. ಜಿಲ್ಲಾಧಿಕಾ-ರಿಗಳಾದ ನಿತೀಶ್ ಕೆ. ಪಾಟೀಲ್ ಅವರು ಅಧ್ಯಕ್ಷತೆಯನ್ನು ವಹಿಸಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ಡಾ. ಎಂ ಬಿ. ಬೋರ್ಲಿಂಗಯ್ಯ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾ-ರಿಗಳಾದ ಸಂಜೀವ ಎಂ. ಪಾಟೀಲ ,ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಹರ್ಷಲ್ ಭೋಯರ್ ಅವರು ಆಗಮಿಸಲಿದ್ದಾರೆ. ಹಾಗೂ ಉಪನ್ಯಾಸಕರಾಗಿ ಕೆ.ವಿ.ಜಿ. ಬ್ಯಾಂಕಿನ ನಿವೃತ್ತ ವ್ಯವಸ್ಥಾಪಕರಾದ ಬಸವರಾಜ ವಾಯ್.ಅರವಳ್ಳಿ ಅವರು ಉಪನ್ಯಾಸ ನೀಡಲಿದ್ದಾರೆ ಎಂದು ಮಹಾನಗರ ಪಾಲಿಕೆ ಆಯುಕ್ತರಾದ ರುದ್ರೇಶ ಘಾಳಿ ಅವರು ಪ್ರಕಣೆಯಲ್ಲಿ ತಿಳಿಸಿದ್ದಾರೆ.

## ವಿವಿಧ ತರಬೇತಿಗಾಗಿ ಅರ್ಜಿ ಆಹ್ವಾನ

ಕೊಪ್ಪಳ: ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟ್ ಸಂಸ್ಥೆ(ರಿ) ಹಳಿಯಾಳ ತರಬೇತಿ ಸಂಸ್ಥೆಯಿಂದ ಹೈನುಗಾ-ರಿಕೆ, ಎರೆಹುಳ ಗೊಬ್ಬರ ತಯಾರಿಕೆ ಹಾಗೂ ವಿವಿಧ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ.

ನಿರುದ್ಯೋಗಿ ಯುವಕ ಯುವತಿಯರಿಗಾಗಿ 10 ದಿನಗಳ ಹೈನುಗಾರಿಕೆ ಎರೆಹುಳ ಮತ್ತು ಗೊಬ್ಬರ ತಯಾರಿಕೆ ತರಬೇತಿಯು ಎಪ್ರೀಲ್ 17 ರಿಂದ ಪ್ರಾರಂಭವಾಗಲಿದೆ. 13 ದಿನಗಳ ಉಚಿತ ಸಿ.ಸಿ. ಟಿವಿ ಕ್ಯಾಮರಾ ಇನಸ್ಟಾಲೇಷನ್ ಹಾಗೂ ಸೆಕ್ಯೂರಿಟಿ ಅಲಾರಾಂಗಳ ದುರಸ್ತಿ ತರಬೇತಿಗಳು ಮೇ 01 ರಿಂದ ಪ್ರಾರಂಭವಾಗಲಿದೆ. ಅರ್ಜಿ ಸಲ್ಲಿಸಲು ಅಭ್ಯರ್ಥಿಗಳು 18 ರಿಂದ 45 ವರ್ಷದೊಳಗಿರಬೇಕು.

ತರಬೇತಿಯಲ್ಲಿ ಊಟ ವಸತಿಯೊಂದಿಗೆ ಸಂಪೂರ್ಣ ಉಚಿತವಾಗಿದ್ದು, ಮೊದಲು ಬಂದವರಿಗೆ ಹಾಗೂ ಗ್ರಾಮೀಣ ಭಾಗದವರಿಗೆ ಮೊದಲ ಆದ್ಯತೆ ನೀಡಲಾಗುವುದು. ಅಭ್ಯರ್ಥಿಗಳು ತಮ್ಮ ಹೆಸರು, ವಿಳಾಸಗಳನ್ನು ನೋಂದಾಯಿಸಲು ಕೊನೆಯ ದಿನಾಂಕ ಎಪ್ರೀಲ್ 16 ಆಗಿದ್ದು, ತರಬೇತಿಯಲ್ಲಿ ಕೌಶಲ್ಯ, ಸಾಫ್ಟ್ ಸ್ಕಿಲ್ಸ್, ಯೋಗ ತರಬೇತಿ ಹಾಗೂ ಬ್ಯಾಂಕಿನಿಂದ ಸಾಲ ಪಡೆದು ಸ್ವ ಉದ್ಯೋಗ ಪ್ರಾರಂಭಿಸಲು ಬೇಕಾಗುವ ಜ್ಞಾನ, ಸರಕಾರಿ ಯೋಜನೆಗಳು ಮತ್ತು ಯೋಜನಾ ವರದಿ ತಯಾರಿಕೆ ಇನ್ನೇತರ ಮಾಹಿತಿಗಳನ್ನು ಉಚಿತವಾಗಿ ನೀಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟ್ ಸಂಸ್ಥೆ(ರಿ) ಹಳಿಯಾಳ, ಉತ್ತರ ಕನ್ನಡ ಜಿಲ್ಲೆ, ಸಂಸ್ಥೆಯ ದೂರವಾಣಿ ಸಂಖ್ಯೆ: 9482188780, 9483485489, (ವೀರೇಶ) 8970145354, (ಮಹೇಶ) 9980510717 ಗೆ ಸಂಪರ್ಕಿಸಬಹುದಾಗಿದೆ ಎಂದು ಸಂಸ್ಥೆಯ ನಿರ್ದೇಶಕರಾದ ಪ್ರಸನ್ನಕುಮಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಷ್ಟ್ರೀಯ ಯುವ ಪಡೆ ಕಾರ್ಯಕರ್ತರ ಆಯ್ಕೆಗಾಗಿ ಅರ್ಜಿ ಆಹ್ವಾನ

ಕೊಪ್ಪಳ: ಭಾರತ ಸರಕಾರದ ನೆಹರು ಯುವ ಕೇಂದ್ರ ಕೊಪ್ಪಳ ವತಿಯಿಂದ ರಾಷ್ಟ್ರೀಯ ಯುವ ಪಡೆ ಕಾರ್ಯಕರ್ತರ ಆಯ್ಕೆಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಸಲ್ಲಿಸುವ ಅರ್ಹ ಯುವಕ ಯುವತಿಯರು 2023ರ ಏಪ್ರೀಲ್ 1ಕ್ಕೆ 18 ರಿಂದ 29 ವರ್ಷದೋಳಗಿರಬೇಕು. ವಿದ್ಯಾರ್ಹತೆ 10ನೇ ತರಗತಿ ಪಾಸ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಪಾಸಾಗಿರಬೇಕು.

ಯುವ ಸಂಘದ ಪದಾಧಿಕಾರಿಗಳು, ಎನ್.ಎಸ್. ಎಸ್, ಎನ್.ಸಿ.ಸಿ., ಹೆಚ್ಚಿನ ವಿದ್ಯಾರ್ಹತೆ ಹೊಂದಿದವ-ರಿಗೆ ಪ್ರಾಧಾನ್ಯತೆ ಕೋಡಲಾಗುವುದು. ಶಾಲೆ ಕಾಲೇಜಿಗೆ ಹೋಗುತ್ತಿರಬಾರದು ಹಾಗೂ ವಿದ್ಯಾರ್ಥಿಗಳಾಗಿರಬಾರದು. ಸಂಬಂದಪಟ್ಟ ತಾಲೂಕಿನ ಅಭ್ಯರ್ಥಿಗಳಿಗೆ ಆದ್ಯತೆ. ರಾಷ್ಟ್ರೀಯ ಯುವ ಪಡೆ ಕಾರ್ಯಕರ್ತರ ಅವಧಿಯು 1 ವರ್ಷವಾಗಿದ್ದು, ಚೆನ್ನಾಗಿ ಕೆಲಸ ಮಾಡಿದವರಿಗೆ ಎರಡನೆ ವರ್ಷಕ್ಕೆ ಮುಂದುವರಿಸಲಾಗುವುದು.

ಆಯ್ಕೆಯಾದವರಿಗೆ ಮಾಸಿಕ ರೂ. 5000 ಗಳ ಗೌರವ ಧನ ನೀಡಲಾಗುವುದು. ಗ್ರಾಮೀಣ ಯುವ ಅಭಿವೃದ್ಧಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು. ಯುವ ಸಂಘಗಳನ್ನು ರಚಿಸುವುದು, ಸಾಮಾಜಿ-ಕ ಜನಪರ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು ಹಾಗೂ ಇತರೆ ಕೆಲಸಕಾರ್ಯಗಳನ್ನು ನಿರ್ವಹಿಸುವುದಾಗಿದೆ. ಅರ್ಜಿ ನಮೂನೆ ವೆಬ್‌ಸೈಟ್ nyks.nic.in ಮೂಲಕ ಪಡೆಯಬಹುದು ಅಥವಾ ನೆಹರು ಯುವ ಕೇಂದ್ರ ಕೊಪ್ಪಳ ಕಛೇರಿಯಲ್ಲಿಯೂ ಪಡೆಯಬಹುದು. ಆನ್‌ಲೈಲ್ ಮೂಲಕ ಸಲ್ಲಿಸಿದ ಅರ್ಜಿಯ ಪ್ರಿಂಟ ಪ್ರತಿಯನ್ನು ನೆಹರು ಯುವ ಕೇಂದ್ರಕ್ಕೆ ಸಲ್ಲಿಸಬೇಕು.

ಅರ್ಜಿ ಸಲ್ಲಿಸಲು ಏಪ್ರೀಲ್ 03 ಕೊನೆಯ ದಿನವಾಗಿದ್ದು, ಅರ್ಜಿ ನಮೂನೆ ಹೆಚ್ಚಿನ ಮಾಹಿತಿಗಾಗಿ ಯುವ ಅಧಿಕಾ-ರಿಗಳು, ನೆಹರು ಯುವ ಕೇಂದ್ರ, ಬನ್ನಿಕಟ್ಟಿ, ಗದಗ ರಸ್ತೆ, ಕೊಪ್ಪಳ-583231, ದೂರವಾಣಿ-08539-230116, ಇಲ್ಲಿಗೆ ಸಂಪರ್ಕಿಸಲು ಜಿಲ್ಲಾ ಯುವ ಅಧಿಕಾರಿಗಳಾದ ಮೊಂಟು ಪಾತರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದೋರ್ ದೇಗುಲ ದುರಂತ ಪ್ರಕರಣ: ಅಧಿಕಾರಿಗಳಿಂದ ದೇವಸ್ಥಾನದ ಅಕ್ರಮ ನಿರ್ಮಾಣ ತೆರವು




ಇಂದೋರ್: ಕೆಲ ದಿನಗಳ ಹಿಂದೆಯಷ್ಟೇ ಮೆಟ್ಟಿಲುಬಾವಿ ಕುಸಿದು 36 ಜನರ ಸಾವಿಗೆ ಕಾರಣವಾಗಿದ್ದ ಬಲೇಶ್ವರ್ ಮಹಾದೇವ್ ದೇವಸ್ಥಾನದ ಅಕ್ರಮ ನಿರ್ಮಾಣವನ್ನು ಇಂದೋರ್ ನಗರ ಪಾಲಿಕೆಯು ಸೋಮವಾರ ತೆರವು ಮಾಡಿದೆ.

ಇಂದು ಬೆಳಗ್ಗೆಯಿಂದಲೇ ಅಕ್ರಮ ತೆರವು ಕಾರ್ಯಾಚರಣೆ ನಡೆಯುತ್ತಿದ್ದು, ಪಾಲಿಕೆ ಹಾಗೂ ಪೊಲೀಸ್ ಅಧಿಕಾರಿಗಳು ಭಾರೀ ಸಂಖ್ಯೆಯಲ್ಲಿ ನೆರೆದಿರುವುದ-ರಿಂದ ಯಾವುದೇ ಪ್ರತಿರೋಧ ವ್ಯಕ್ತವಾಗಿಲ್ಲ.

ಸಂಭಾವ್ಯ ಪ್ರತಿರೋಧವನ್ನು ತಡೆಯಲು ನಾಲ್ಕು ಪೊಲೀಸ್ ಠಾಣೆಗಳ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಸ್ಥಳದಲ್ಲಿ ಮಹಾನಗರ ಪಾಲಿಕೆಯ ಉಪ ಆಯುಕ್ತರು, ಜಿಲ್ಲಾಧಿಕಾರಿ ಹಾಗೂ ಇತರೆ ಅಧಿಕಾರಿಗಳು ಇದ್ದಾರೆ.

ಏತನ್ಮಧ್ಯೆ, ಸ್ಥಳದಲ್ಲಿದ್ದ ದೇವಾಲಯದ ಅರ್ಚಕರೊಬ್ಬರು ಮಾತನಾಡಿ, ದೇವಾಲಯದಲ್ಲಿದ್ದ ಮೂರ್ತಿಗಳಿಗೆ ವಿಧಿ ವಿಧಾನಗಳ ಪ್ರಕಾರ ಪ್ರಾರ್ಥನೆ ಸಲ್ಲಿಸಲಾಗಿದ್ದು, ಅವುಗಳನ್ನು ಕಂಟಫೋಡ್ ದೇವಾಲಯಕ್ಕೆ ಸ್ಥಳಾಂತರಿಸಲಾಗಿದೆ ಎಂದು ಹೇಳಿದ್ದಾರೆ.

ಕೆಲ ದಿನಗಳ ಹಿಂದೆ ಈ ದೇವಸ್ಥಾನದ ಒಳಗಡೆ ಕುಸಿತವಾಗಿ 36 ಜನರು ಅಸುನೀಗಿದ್ದರು. ಕುಸಿದ ದೇವಾಲಯದ ಪ್ರದೇಶವು ಅಕ್ರಮ ರಚನೆಯಾಗಿದೆ ಎಂದು ಅದನ್ನು ಮೆಟ್ಟಿಲುಬಾವಿಯ ಹೊದಿಕೆಯನ್ನು ನೆಲಸಮ ಮಾಡಲು ಇಂದೋರ್ ಮುನ್ಸಿಪಲ್ ಕಾರ್ಪೊರೇಷನ್ ಕಳೆದ ವರ್ಷ ಸೂಚಿಸಿತ್ತು. ಆದರೆ, ದೇವಾಲಯದ ಟ್ರಸ್ಟ್ ಧಾರ್ಮಿಕ ಭಾವನೆಗಳಿಗೆ ಧಕ್ಕೆಯಾಗುತ್ತದೆ ಎಂದು ಎಚ್ಚರಿಸಿದ ನಂತರ ಮುನಿಸಿಪಾಲಿಟಿ ಅದರಿಂದ ಹಿಂದೆ ಸರಿದಿತ್ತು.

ರಾಮ ನವಮಿಯಂದು ಜನಸಂದಣಿಯ ಭಾರದಿಂದ ಮೆಟ್ಟಿಲುಬಾವಿಯ ಮೇಲ್ಛಾವಣಿ ಒಡೆದು ಹೋಗಿತ್ತು. ಘಟನೆ ನಡೆದಾಗ ದೇವಸ್ಥಾನದಲ್ಲಿ ಹೋಮ ಹವನ ನಡೆಯುತ್ತಿತ್ತು.

ದುರಂತದ ನಂತರ, ಭಾರತೀಯ ದಂಡ ಸಂಹಿತೆ ಸೆಕ್ಷನ್ 304 (ಅಪರಾಧ ನರಹತ್ಯೆ ಕೊಲೆಯಲ್ಲ) ಅಡಿಯಲ್ಲಿ ಬಲೇಶ್ವರ್ ಮಹಾದೇವ್ ಜುಲೇಲಾಲ್ ದೇವಸ್ಥಾನ ಟ್ರಸ್ಟ್ ಅಧ್ಯಕ್ಷ ಸೇವಾರಾಮ್ ಗಲಾನಿ ಮತ್ತು ಕಾರ್ಯದರ್ಶಿ ಮುರಳಿ ಕುಮಾರ್ ಸಬ್ನಾನಿ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಜುನಿ ಇಂದೋರ್ ಪೊಲೀಸ್ ಠಾಣೆಯ ಉಸ್ತುವಾರಿ ನೀರಜ್ ಮೇದಾ ತಿಳಿಸಿದ್ದಾರೆ.

ಇಬ್ಬರು ಆರೋಪಿಗಳು ಮೆಟ್ಟಿಲುಬಾವಿಯ ಮೇಲೆ ಮೇಲ್ಛಾವಣಿಯನ್ನು ಹಾಕುವ ಮೂಲಕ ಅಸುರಕ್ಷಿತ ನಿರ್ಮಾಣ ಕಾರ್ಯವನ್ನು ಮಾಡಿದ ಆರೋಪವನ್ನು ಎದುರಿಸುತ್ತಿದ್ದಾರೆ, ಅಸುರಕ್ಷಿತ ನಿರ್ಮಾಣದಿಂದಾಗಿ 36 ಜನರು ಪ್ರಾಣ ಕಳೆದುಕೊಂಡಿದ್ದಾರೆ ಎಂದು ಅಧಿಕಾರಿ ತಿಳಿಸಿದ್ದಾರೆ.

ಇಂದೋರ್ ಮುನ್ಸಿಪಲ್ ಕಾರ್ಪೊರೇಷನ್ ದೇವಾಲಯದ ಸಂಕೀರ್ಣದಲ್ಲಿನ ಅಕ್ರಮ ನಿರ್ಮಾಣವನ್ನು ತೆಗೆದುಹಾಕಲು ಟ್ರಸ್ಟ್‌ಗೆ ಆದೇಶ ನೀಡಲಾಗಿ-ತ್ತು, ಆದರೆ ಟ್ರಸ್ಟ್ ಆದೇಶವನ್ನು ಪಾಲಿಸಿರಲಿಲ್ಲ ಎಂದು ಅವರು ಹೇಳಿದ್ದಾರೆ.

## 5 ರೂ. ಕೇಳಿದ್ದಕ್ಕೆ ಬಾಲಕನ ಕೊಲೆಗೈದ ಪಾಪಿ




ಹುಬ್ಬಳ್ಳಿ: ಐದು ರೂ. ಕೇಳಿದನೆಂಬ ಕಾರಣ-ಕ್ಕೆ ಬಾಲಕನೊಬ್ಬನನ್ನು ಕೊಲೆ ಮಾಡಲಾಗಿರುವ ಘಟನೆ ಹುಬ್ಬಳ್ಳಿಯ ಮಿಲ್ಲತ್ ನಗರದಲ್ಲಿ ನಡೆದಿದೆ. ನದೀಮ್ ಕೊಲೆಯಾದ ಬಾಲಕನಾಗಿದ್ದಾನೆ. ಸೆಟ್ಲಮೆಂಟ್ ನಿವಾಸಿ ರವಿ ವೆಂಕಟೇಶ ಬಳ್ಳಾರಿ ಎಂಬಾತ ಬಾಲಕನ ಹತ್ಯೆ ಮಾಡಿರುವ ವ್ಯಕ್ತಿ. ಬೆಂಡಿಗೇರಿ ಠಾಣೆ ಪೊಲೀಸರು ಆರೋಪಿಯನ್ನು ಬಂಧಿಸಿದ್ದಾರೆ. ಮಿಲ್ಲತ್ ನಗರದ ಆಟದ ಮೈದಾನದ ಬಳಿ ನದೀಮ್ ಆಟವಾಡುತ್ತಿದ್ದು, ಈ ವೇಳೆ ಅಲ್ಲಿಗೆ ಬಂದ ರವಿ ಬಳಿ ಐದು ರೂಪಾಯಿ ಕೇಳಿದ್ದಾನೆ. ಇದನ್ನು ನೀಡಿದ ಬಳಿಕವೂ ನದೀಮ್ ಮತ್ತೆ ಐದು ರೂಪಾಯಿಗೆ ಬೇಡಿಕೆ ಇಟ್ಟಿದ್ದು, ಇದರಿಂದ ಸಿಟ್ಟಿಗೆದ್ದ ರವಿ ಆತನ ಕೆನ್ನೆಗೆ ಹೊಡೆದಿದ್ದಾನೆ. ಇದರ ಪರಿಣಾಮ ಬಾಲಕ ಸ್ಥಳದಲ್ಲಿಯೇ ಮೃತಪಟ್ಟಿದ್ದು, ಇದರಿಂದ ಹೆದರಿದ ರವಿ ಶವವನ್ನು ಪೊದೆ ಬಳಿ ಎಸೆದಿದ್ದು, ಬಳಿಕ ಅನುಮಾನ ಬರಬಾರದೆಂದು ತಲೆ ಮೇಲೆ ಕಲ್ಲು ಎತ್ತಿ ಹಾಕಿದ್ದಾನೆ. ಪ್ರಕರಣ ದಾಖಲಿಸಿಕೊಂಡಿದ್ದ ಪೊಲೀಸರು ಕೇವಲ 48 ಗಂಟೆಗಳಲ್ಲಿ ಆರೋಪಿಯನ್ನು ಬಂಧಿಸಿದ್ದಾರೆ.

## ಸುಸೂತ್ರವಾಗಿ ನಡೆದ ಗಣಿತ ಪರೀಕ್ಷೆ



ನಾಲತವಾಡ: ಸೋಮವಾರ ಇಲ್ಲಿಯ ಬಸವೇಶ್ವರ ಹಾಗೂ ವೀರೇಶ್ವರ ಪ್ರೌಢ ಶಾಲೆಯಲ್ಲಿ ಗಣಿತ ಪರೀಕ್ಷೆಯು ಸಿಸಿ ಕ್ಯಾಮೆರಾ ಕಣ್ಗಾವಲಿನಲ್ಲಿ ಸುಸೂತ್ರವಾಗಿ ನಡೆದಿದ್ದು ಪರೀಕ್ಷಾ ಪಾಲಕ ಎ.ಸಿ.ಕೆರೂರ(ಮುದ್ದೇಬಿಹಾಳ) ಹಾಗೂ ಎಲ್.ಎಸ್.ನಾಯಕ ಕಟ್ಟನಿಟ್ಟಿನ ನಿಯಮ ಪಾಲಿಸುವ ಮೂಲಕ ತಾವೇ ಪೋಲೀಸ್ ಲಾಠಿ ಹಿಡಿದು ಶಾಂತಿಯುತ ಪರೀಕ್ಷೆಗೆ ಅನುವು ಮಾಡಿಕೊಟ್ಟರು.

ಬಸವೇಶ್ವರ ಪ್ರೌಢ ಶಾಲೆಯ ಕೇಂದ್ರದ ಒಟ್ಟು 161 ವಿದ್ಯಾರ್ಥಿಗಳ ಪೈಕಿ 3 ವಿದ್ಯಾರ್ಥಿಗಳು ಮಾತ್ರ ಪರೀಕ್ಷೆಯಿಂದ ದೂರ ಉಳಿದಿದ್ದರೆ ವೀರೇಶ್ವರ ಪ್ರೌಢ ಶಾಲೆಯ ಕೇಂದ್ರದಲ್ಲೂ ಸಹ 256 ವಿದ್ಯಾರ್ಥಿಗಳ ಪೈಕಿ 3 ವಿದ್ಯಾರ್ಥಿ ದೂರ ಉಳಿದಿದ್ದರು. ಪೋಲೀಸ್ ಬಂದೋಬಸ್ತನಲ್ಲಿ ಗಣಿತ ಪರೀಕ್ಷೆಯ ನಡೆದಿದೆ.

ಪಟ್ಟಣದ ಎರಡೂ ಕೇಂದ್ರಗಳಲ್ಲಿ ವಿದ್ಯಾರ್ಥಿಗಳಿಗೆ ಸಂಪೂರ್ಣ ಆಸನಗಳ ವ್ಯವಸ್ಥೆ ಮಾಡಿದ್ದು ವಿಶೇಷವಾಗಿದ್ದು ಈ ನಿಟ್ಟಿನಲ್ಲಿ ಪರೀಕ್ಷಾ ಕೇಂದ್ರಗಳ ವ್ಯವಸ್ಥಾಪಕರ ಕಟ್ಟು ನಿಟ್ಟಿನ ಕ್ರಮಕ್ಕೆ ಮೆಚ್ಚುಗೆ ವ್ಯಕ್ತವಾಗಿದೆ.

## ನಿಧನ ವಾರ್ತೆ



ಶಿಕ್ಷಕಿ ತೇಜಾವತಿ

ಹುಳಿಯಾರು: ಹುಳಿಯಾ-ರಿನ ಶಿಕ್ಷಕಿ ಸಿ.ಡಿ.ತೇಜಾವತಿ (58) ಅವರು ಬ್ರೈನ್ ಸ್ಟ್ರೋಕ್ ಆಗಿ ಸೋಮವಾರ ಬೆಳಗ್ಗೆ ನಿಧನರಾಗಿದ್ದಾರೆ.

ಹುಳಿಯಾರು ಹೋಬಳಿಯ ಬೋರನಕಣಿವೆ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆಯ ಶಿಕ್ಷಕಿಯಾಘಿ ಕರ್ತವ್ಯ ನಿರ್ವಹಿಸುತ್ತಿದ್ದರು. ಮೃತರು ಪತಿಯಾದ ಥಿಯಾಸಾಫಿಕಲ್ ಸೊಸೈಟಿ ಅದ್ಯಕ್ಷ ಬಸವರಾಜು ಹಾಗೂ ಪುತ್ರ ವಿಜಯಕರ್ನಾಟಕದ ಪುರವಣಿ ಸಂಪಾದಕ ಹರೀಶ್ ಹಾಗೂ ಪುತ್ರಿಯನ್ನು ಅಗಲಿದ್ದಾರೆ. ಹುಳಿಯಾರಿನ ಮುಕ್ತಿಧಾಮದಲ್ಲಿ ಅಂತ್ಯಕ್ರಿಯೆ ನೆರವೇರಿತು.

# ಬೆಂಗಳೂರು: ಆಲೂರು ಬಿಡಿಎ ನಿವಾಸಿಗಳಿಗೆ ವಂಚನೆ; ದೂರು ದಾಖಲು




ಬೆಂಗಳೂರು: ಐಎಂಎ ಪೊಂಜಿ ಹಗರಣದಂತೆ ಆಲೂರು ಬಿಡಿಎ ಹಂತ-2 ವಸತಿ ಯೋಜನೆಯ ಕೆಲವು ನಿವಾಸಿಗಳಿಗೂ ವಂಚನೆಯಾಗಿದ್ದು, 5 ರಿಂದ 6 ಕೋಟಿ ರೂಪಾಯಿಗಳವರೆಗೆ ಹಣ ಕಳೆದುಕೊಂಡಿದ್ದಾರೆ.

ಈ ಘಟನೆ ನಿವಾಸಿಗಳ ನಡುವೆ ದ್ವೇಷಕ್ಕೂ ಕಾರಣವಾಗಿದೆ. ಏಕೆಂದರೆ ಅವರಲ್ಲಿ ಕೆಲವರು ತಮ್ಮ ನೆರೆಹೊರೆಯವರ ಸಲಹೆಯಂತೆ ಯೋಜನೆಯಲ್ಲಿ ಹೂಡಿಕೆ ಮಾಡಿದ್ದಾರೆ. ಇಲ್ಲಿನ ನಿವಾಸಿ ಕಿರಣ್ ಕುಮಾರ್ ಮಿಸ್ರೋ ಮತ್ತು ಅವರ ಕುಟುಂಬದ ಹಲವರು ಹೂಡಿಕೆ ಮಾಡಿ ಬೀದಿಗೆ ಬಿದ್ದಿದ್ದು, ಇದೀಗ ಅವರು ಸಿಸಿಬಿಗೆ ದೂರು ನೀಡಿದ್ದಾರೆ. ಸೋಮವಾರ ರಾಜಾಜಿ ನಗರ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಲಿದ್ದಾರೆ.

ಹಗರಣದ ಕಿಂಗ್‌ಪಿನ್‌ಗಳಾದ ಜೋಜಿಪಾಲ್ ಮತ್ತು ಅಶೋಕ್ ವಿಟಲ್ವಾಡಿ - 2019 ರಲ್ಲಿ ಸ್ಥಾಪಿಸಲಾದ ಸ್ಯಾನ್‌ಜೋಸ್ ವೆಲ್ತ್ ಮ್ಯಾನೇಜ್‌ಮೆಂಟ್ ಪ್ರೈವೇಟ್ ಲಿಮಿಟೆಡ್ ಮೂಲಕ ಜನರನ್ನು ವಂಚಿಸಿದ ಆರೋಪದ ಮೇಲೆ ಕಳೆದ ತಿಂಗಳು ಬಂಧಿಸಲಾಗಿತ್ತು. ನಂತರ ವಂಚನೆ ಪ್ರಕರಣ ಬೆಳಕಿಗೆ ಬಂದಿತ್ತು.

ಬಂಡವಾಳ ಹೂಡಲು ಪ್ರೋತ್ಸಾಹಿಸಿದ ಬಿಡಿಎ ಕಾಂಪ್ಲೆಕ್ಸ್‌ನಲ್ಲಿ ವಾಸವಾಗಿರುವವರ ಅನೇಕರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಧ್ವಂಸಗೊಂಡಿರುವ ಹಲವು ನಿವಾಸಿಗಳು ಒತ್ತಾಯಿಸಿದ್ದಾರೆ. ಕಂಪನಿಯು ಠೇವಣಿ ಮಾಡಿದ ದಿನಾಂಕದಿಂದ ಪ್ರತಿ 35 ದಿನಗಳಿಗೊಮ್ಮೆ ಶೇ.10 ರಂತೆ ಬಡ್ಡಿದರ ಪಾವತಿಸುವುದಾಗಿ ಭರವಸೆ ನೀಡಿತ್ತು. 3 ಬಿಹೆಚ್ ಕೆ ಮತ್ತು 2 ಬಿಹೆಚ್ ಕೆ ನಿವಾಸಿಗಳಿಗೆ ಕೆಲವು ತಿಂಗಳು ಪಾವತಿ ಮಾಡಿದ ನಂತರ ಸ್ಥಗಿತಗೊಳಿಸಲಾಯಿತು ಎಂದು ನಿವಾಸಿಯೊಬ್ಬರು ಹೇಳಿದರು.

ಮಿಶ್ರೋ, 2021 ಮಾರ್ಚ್ 28 ರಿಂದ 2022 ರ ಜನವರಿ 18 ರವರೆಗೆ ತಮ್ಮ ಕುಟುಂಬದ ಎಂಟು ಸದಸ್ಯರು ಸುಮಾರು 55 ಲಕ್ಷ ರೂಪಾಯಿಗಳನ್ನು ಹೂಡಿಕೆ ಮಾಡಿರುವುದಾಗಿ ತಿಳಿಸಿದರು. ಅವರ ದೂರಿನಲ್ಲಿ ವಸಂತಕುಮಾರ್ ಮತ್ತು ನಾಗ ಜ್ಯೋತಿ, ಆಕೆಯ ಸೋದರ ಮಾವ ರಾಘವೇಂದ್ರ ಹೆಬ್ಬಾಳ್ ಮತ್ತು ಅವರ ಹಳೆಯ ಗೆಳೆಯರಾದ ವಿಟಲವಾಡಿ ಮತ್ತು ಜೋಜಿಪಾಲ್ ಅವರ ಹೆಸರನ್ನು ಉಲ್ಲೇಖಿಸಿದ್ದಾರೆ.

ದೂರಿನಲ್ಲಿ ಉಲ್ಲೇಖಿಸಲಾದ ನಾಲ್ವರು ಕೂಡಾ ಹಣ ಕಳೆದು ಕೊಂಡಿರುವುದಾಗಿ ಕೆಲವರು ಹೇಳಿದ್ದಾರೆ. ಅವರು ಉತ್ತಮ ಆದಾಯ ಗಳಿಸುತ್ತಿದ್ದನ್ನು ನಮ್ಮೊಂದಿಗೆ ಹಂಚಿಕೊಂಡಿದ್ದ-ರಿಂದ ನಾವು ಕೂಡಾ ಹೂಡಿಕೆ ಮಾಡಿದ್ದೇವು ಎಂದು ಸಂತ್ರಸ್ತರೊಬ್ಬರು ಹೇಳುತ್ತಾರೆ. ವಸಂತ್ ಕುಮಾರ್ ತಮ್ಮ ಮೇಲಿನ ಆರೋಪಗಳನ್ನು ಅಲ್ಲಗಳೆದಿದ್ದು, ಮಿಸ್ರೋ ಅವರೊಂದಿಗೆ ವೈಯಕ್ತಿಕ ದ್ವೇಷವಿದ್ದು, ತನ್ನ ವರ್ಚಸ್ಸು ಕುಂದಿಸಲು ಅವರು ಪ್ರಯತ್ನಿ ಸುತ್ತಿರುವುದಾಗಿ ಹೇಳಿದ್ದಾರೆ.

## ರಾತ್ರೋರಾತ್ರಿ ಸರ್ಕಾರಿ ಮರಗಳ ತೆರವು

### ಕಂದಾಯ ತನಿಖಾಧಿಕಾರಿಗಳಿಂದ ಸ್ಥಳ ತನಿಖೆ



ಹುಳಿಯಾರು: ರಾತ್ರೋರಾತ್ರಿ ಅಕ್ರಮವಾಗಿ ಸರ್ಕಾರಿ ಜಮೀನಿನಲ್ಲಿದ್ದ ಮರ ಗಳನ್ನು ಕಡಿದಿದ್ದಾರೆಂದು ದೂರು ಬಂದ ಹಿನ್ನೆಲೆಯಲ್ಲಿ ಕಂದಾಯ ತನಿಖಾಧಿಕಾ-ರಿಗಳ ಸಮ್ಮುಖದಲ್ಲಿ ಸೋಮವಾರ ಸ್ಥಳ ತನಿಖೆ ಮಾಡಲಾಯಿತು.

ಹುಳಿಯಾರು ಹೋಬಳಿಯ ಗೌಡಗೆರೆ ಸರ್ವೆ ನಂಬರ್ 21 ರಲ್ಲಿನ ಸರ್ಕಾರಿ ಜಮೀನ್ನಲ್ಲಿ ಇರುವ ಹೊಂಗೆ, ಬೇವು, ಬೆಲವತೆ, ಯರದೇ, ಈಚಲ ಮರ ಸೇರಿದಂತೆ ಒಟ್ಟು 20 ಮರಗಳನ್ನು ಹೊನ್ನಪ್ಪ ಮತ್ತು ಕುರಿನಿಂಗಪ್ಪ ಎಂಬುವವರು ರಾತ್ರೋರಾತ್ರಿ ಅನುಮತಿ ಇಲ್ಲದೆ ಜೆಸಿಬಿ ಮೂಲಕ ತೆರವುಗೊಳಿಸಿದ್ದರು.

ಅಲ್ಲದೆ ಸರ್ಕಾರಿ ಜಮೀನಿನಲ್ಲಿ ಅಕ್ರಮವಾಗಿ ಕಾಲುವೆ ಸಹ ತೋಡಿದ್ದರು. ಈ ಬಗ್ಗೆ ದೂರು ಬಂದ ಹಿನ್ನೆಲೆಯಲ್ಲಿ ಕಂದಾಯ ತನಿಖಾಧಿಕಾರಿ ನಟ-ರಾಜು, ಗ್ರಾಮ ಲೆಕ್ಕಾಧಿಕಾರಿ ನಳೀನಾಕ್ಷಿ ಹಾಗೂ ಸರ್ಕಾರಿ ಸರ್ವೆಯರ್ ಪುಟ್ಟರಾಜು ಅವರ ತಂಡ ಸ್ಥಳ ತನಿಖೆಯನ್ನು ಮಾಡಿದರು.

ಸ್ಥಳ ತನಿಖೆಯ ಸಂದರ್ಭದಲ್ಲಿ ಕಡಿದಿರುವ ಮರಗಳೆಲ್ಲವೂ ಸರ್ಕಾರಿ ಜಾಗದಲ್ಲಿರುವುದು ಖಾತರಿಯಾಗಿದೆ.

ಹಾಗಾಗಿ ಇವರ ಮೇಲೆ ಕ್ರಮ ಕೈಗೊಳ್ಳಲು ಅರಣ್ಯ ಇಲಾಖೆಗೆ ಪತ್ರ ಬರೆಯಲು ಅಧಿಕಾರಿಗಳು ನಿರ್ಧರಿಸಿದ್ದಾರೆ.

ಆದಾಗ್ಯೂ ಮರ ಕಡಿದವರ ಬಳಿ ಮರವಿದ್ದ ಭೂಮಿ ಅವರಿಗೆ ಸೇರಿರುವ ಬಗ್ಗೆ ದಾಖಲಾತಿಗಳಿದ್ದರೆ ಹಾಜರು ಪಡಿಸಲು ಸೂಚಿಸಿದ್ದಾರೆ.

## ಸಿರುಗುಪ್ಪ ಬಿಜೆಪಿಯಲ್ಲಿ ಬಿನ್ನಮತ ಸ್ಫೋಟ



ಸಿರುಗುಪ್ಪ : ತಾಲೂಕಿನಲ್ಲಿ ರಣ ಬಿಸಿಲಿನಂತೆ ಚುನಾವಣೆ ಕಾವು ದಿನೇ ದಿನೇ ಹೆಚ್ಚುತ್ತಿದ್ದು, ಹಾಲಿ ಶಾಸಕ ಎಂ.ಎಸ್.ಸೋಮಲಿಂಗಪ್ಪನವರ ವಿರುದ್ಧ ಬಿಜೆಪಿಯಲ್ಲಿ ಬಿನ್ನಮತ ಭುಗಿಲೆದ್ದಿದೆ. ಪಕ್ಷದಲ್ಲಿನ ಕೆಲವು ಹಿರಿಯ ಕಾರ್ಯಕರ್ತರು ಟಿಕೆಟ್ ನೀಡದಂತೆ ಹೈಕಮಾಂಡಿಗೆ ಒತ್ತಡ ಹೇರುವುದಾಗಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಮಹಾವೀರ ನಗರ ಲೇಔಟ್‌ನಲ್ಲಿ ಮದ್ಯಾಹ್ನ ಬಿನ್ನಮತೀಯರು ಪತ್ರಿಕಾಗೋಷ್ಠಿ ನಡೆಸಿದ್ದಾರೆ. ಕಳೆದ ಹದಿನೈದು ವರ್ಷಗಳಿಂದ ಪಕ್ಷ ಬಲವರ್ಧನೆಯಲ್ಲಿಎಲ್ಲಾಕಾರ್ಯಕರ್ತರ ಶ್ರಮವಿದೆ. ಆದರೆ ಇಡೀ ತಾಲೂಕಿನ ಅಧಿಕಾರವು ಒಂದೇ ಕುಟುಂಬದಲ್ಲಿ ಕೇಂದ್ರಿಕೃತವಾಗಿದ್ದರಿಂದ ಸಾಮಾನ್ಯ ಕಾರ್ಯಕರ್ತರಿಗೆ ಬೇಸರ ಮೂಡಿಸಿದೆ.

ಕುಟುಂಬ ರಾಜಕೀಯಕ್ಕೆ ಪಕ್ಷದಲ್ಲಿ ಅವಕಾಶವಿಲ್ಲ ಆದ್ದರಿಂದ ಬೇರೆಯವರಿಗೆ ಅವಕಾಶ ಮಾಡಿಕೊಡಬೇಕೆಂದು ಎಸ್.ಸಿ ಮೋರ್ಚಾದ ಮಾಜಿ ಜಿಲ್ಲಾಧ್ಯಕ್ಷ ಕೊಡ್ಲೆ ಮಲ್ಲಿಕಾರ್ಜುನ, ಒತ್ತಾಯಿಸಿದರು.

ಸೋಮಲಿಂಗಪ್ಪನವರು ಕಾರ್ಯಕರ್ತರ ಶ್ರಮದಿಂದಾಗಿ ಶಾಸಕರಾಗಿದ್ದಾರೆ. ಆದರೆ ಈಗ ಕುಟುಂಬ ರಾಜಕಾರಣದಲ್ಲಿ ತೊಡಗಿರುವ ಶಾಸಕರು ಮತ್ತುಅವರ ಮಕ್ಕಳು ಪ್ರಾಮಾಣಿಕ ಕಾರ್ಯಕರ್ತರನ್ನು ಅಲ್ಲದೆ ಮುಖಂಡರನ್ನು ನಿರ್ಲಕ್ಷ್ಯ ಮಾಡುತ್ತಿದ್ದಾರೆ.

ಎಲ್ಲದಕ್ಕೂ ತಾವು ಮತ್ತು ತನ್ನ ಮಕ್ಕಳು ಸರ್ವಾಧಿಕಾರಿಯಾಗಿ ವರ್ತಿಸುತ್ತಿದ್ದಾರೆ. ಇದರಿಂದಾಗಿ ಕ್ಷೇತ್ರದಾದ್ಯಂತ ಬಿಜೆಪಿ ಕಾರ್ಯಕರ್ತರಲ್ಲಿ ಅಸಮಾಧಾನವಿದೆ. ಆದ-್ದರಿಂದ ಪಕ್ಷದ ಹಿತಕ್ಕಾಗಿ ಈ ಮೂಲಕ ಪಕ್ಷದ ಹಿರಿಯರು ಮತ್ತು ಹೈಕಮಾಂಡಿಗೂ ಸಹ ವಿನಂತಿಸುತ್ತಿದ್ದೇನೆ ಎಂದು ಬಿಜೆಪಿ ಎಸ್.ಟಿ.ಮೋರ್ಚ್ ರಾಜ್ಯಕಾರ್ಯಕಾರಣಿ ಮಾಜಿ ಸದಸ್ಯ ಜಿ.ಸಿದ್ದಪ್ಪ ತಿಳಿಸಿದರು.

ಕೇಂದ್ರ ಮತ್ತು ರಾಜ್ಯದಲ್ಲಿ ಉತ್ತಮ ಆಡಳಿತ ನೀಡುತ್ತಿರುವ ನಮ್ಮ ಪಕ್ಷವು ಮತ್ತೆ ಸಿರುಗುಪ್ಪ ವಿಧಾನಸಭಾ ಪರಿಶಿಷ್ಟ ಪಂಗಡ ಮೀಸಲು ಕ್ಷೇತ್ರದಲ್ಲಿ ಅಧಿಕಾರದಲ್ಲಿ ಇರಬೇಕಾದರೆ ಯಾವುದೇ ಕಾರಣಕ್ಕೂ ಸಿರುಗುಪ್ಪ ವಿಧಾನಸಭಾಕ್ಷೇತ್ರ ಕಳೆದುಕೊಳ್ಳಲು ಅವಕಾಶ ನೀಡಬಾರದು.

ಒಂದು ವೇಳೆ ಸೋಮಲಿಂಗಪ್ಪರಿಗೆ ಪಕ್ಷಟಿ-ಕೆಟ್ ನೀಡಿದರೆಇಲ್ಲಿ ಬಿಜೆಪಿ ಪಕ್ಷ 30,000ಕ್ಕೂ ಅಧಿಕ ಮತಗಳಿಂದ ಸೋಲುವುದು ನಿಶ್ಚಿತವಾಗಿದ್ದು ಈ ಬಾರಿಯ ಚುನಾವಣೆಯಲ್ಲಿ ತಮ್ಮ ಪಾತ್ರ ಏನು ಎಂಬುದನ್ನು ತೋ-ರಿಸುತ್ತೇವೆಂದು ಹಲವು ಮುಖಂಡರುಎಚ್ಚರಿಕೆ ನೀಡಿದರು.

ಈ ಸುದ್ದಿಗೋಷ್ಠಿ ವೇಳೆ ನಗರಸಭೆ ಮಾಜಿ ಸದಸ್ಯ ವಿರುಪಾಕ್ಷಿ, ಅಖಿಲ ಕರ್ನಾಟಕ ವಾಲ್ಮೀಕಿ ಮಹಾ ಸಭಾಜಿಲ್ಲಾಧ್ಯಕ್ಷಯರೆಪ್ಪ, ತಾಲ್ಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಮುದ್ದು ವೀರಪ್ಪ, ಉಪಾಧ್ಯಕ್ಷ ಶಾಂತನಗೌಡ, ತಾ.ಪಂ ಮಾಜಿ ಸದಸ್ಯರಾದ ದೇವೇಂದ್ರ, ಫಕೀರಪ್ಪ, ಶಾನವಾಸಪುರಗ್ರಾಮ ಪಂಚಾಯಿತಿಅಧ್ಯಕ್ಷ ಪಂಪಾಪತಿ ಮುಖಂಡರಾದ ಬೆಳಗಲ್ ಮಂಜು, ಹುಸೇನ್ ಸಾಬ್, ಚೌದ್ರಿ ಬಾಷಾ ಸೇರಿದಂತೆ ಅನೇಕರಿದ್ದರು.

## ಡಾ.ಗಂಜಿಹಾಳ, ಡಾ.ಹಂಡಿಗಿಗೆ 'ಸಾರ್ವಭೌಮ ಪ್ರಶಸ್ತಿ'



ಹುಬ್ಬಳ್ಳಿ: ಕರ್ನಾಟಕ ಚಲನಚಿತ್ರ ಮತ್ತು ಕಿರುಚಿತ್ರ ಕಲಾವಿದರ ಕ್ಷೇಮಾಭಿವೃದ್ಧಿ ಮಂಡಳಿ ಹಾಗೂ ಚೇತನ ಫೌಂಡೇಷನ್ ಹುಬ್ಬಳ್ಳಿ ಇವರ ಸಹಯೋಗದೊಂದಿಗೆ ಧಾರವಾಡದ ರಂಗಾಯಣದಲ್ಲಿ ಮೂರುದಿನಗಳ ಕಾಲ ನಡೆದ ಕರ್ನಾಟಕ ಚಲನಚಿತ್ರೋತ್ಸವದಲ್ಲಿ ಸಿನಿಮಾ ಪತ್ರಿಕೋದ್ಯಮ ಹಾಗೂ ಪ್ರಚಾರ ಸೇವೆಗಾಗಿ ಪುನಿತರಾಜ್‌ಕುಮಾರ ನೆನಪಿಗಾಗಿ ನೀಡುವ 'ಸಾರ್ವಭೌಮ ಪ್ರಶಸ್ತಿ'ಯನ್ನು ಗದಗ ನಗರದ ಡಾ.ಪ್ರಭು ಗಂಜಿಹಾಳ, ಹುಬ್ಬಳ್ಳಿಯ ಡಾ.ವೀರೇಶ ಹಂಡಗಿ ಅವರಿಗೆ ನೀಡಿ ಗೌರವಿಸಲಾಯಿತು.

ಚಂದ್ರಶೇಖರ ಮಾಡಲಗೇ-ರಿಯವರು ಮಾತನಾಡಿ ಉತ್ತರ ಕರ್ನಾಟಕದವರೇ ಅದ ಇವರು ಕೇವಲ ಎರಡು-ಮೂರು ವರ್ಷಗಳ ಅವಧಿಯಲ್ಲಿ ಕನ್ನಡ, ತಮಿಳು, ತೆಲಗು ಸೇ-ರಿದಂತೆ ಇಪ್ಪತ್ತೈದಕ್ಕೂ ಹೆಚ್ಚು ಚಲನಚಿತ್ರಗಳು, ಕಿರುಚಿತ್ರಗಳು, ಸಾಕ್ಷಚಿತ್ರಗಳಿಗೆ ಪ್ರಚಾರ ನೀಡಿದ್ದು, ಉತ್ತರ ಕರ್ನಾಟಕದ ಪತ್ರಿಕಾ ಸಂಪರ್ಕ, ಚಲನಚಿತ್ರ ಪ್ರಚಾರಕಲೆ, ಪಿ.ಆರ್.ಓ ಆಗಿ ಜೊತೆಯಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಪ್ರಚಾರಕಾರ್ಯದಲ್ಲಿ ಅತಿ ಕಡಿಮೆ ಅವಧಿಯಲ್ಲಿ ಚಿತ್ರತಂಡಗಳಿಂದ ಯಾವ ಫಲಾಫೇಕ್ಷೆ ಇಲ್ಲದೆ ರಾಜ್ಯ, ಹೊರರಾಜ್ಯಗಳಲ್ಲೂ ಚಲನಚಿತ್ರಗಳ ಸುದ್ದಿಯನ್ನು ಮುಟ್ಟಿಸುವ ಕಾರ್ಯವನ್ನು ಮಾಡುತ್ತಿದ್ದು ಕಲಾವಿದರು ,ತಂತ್ರಜ್ಞರು, ನಿರ್ಮಾಪಕ, ನಿರ್ದೇಶಕರನ್ನು ಪ್ರೋತ್ಸಾಹಿಸುತ್ತಿದ್ದಾರೆ. ಇದಕ್ಕಾಗಿ ನಾವು 'ಸಾರ್ವಭೌಮ ಪ್ರಶಸ್ತಿ'ಗೆ ಆಯ್ಕೆ ಮಾಡಿದ್ದೇವೆ ಎಂದರು.

ಡಾ.ಗಂಜಿಹಾಳ ಮಾತನಾಡಿ ರಾಜ್ಯದ ಎಲ್ಲ ಮಾಧ್ಯಮದ ಬಂಧುಗಳು ನಮ್ಮ ಸುದ್ದಿಯನ್ನು ಪ್ರಕಟಿಸಿ ಪ್ರೋತ್ಸಾಹಿಸುತ್ತಿದ್ದಾರೆ. ಇದು ನಮಗೆ ಸಲ್ಲಬೇಕಾದ ಪ್ರಶಸ್ತಿ ಅಲ್ಲ. ಆ ಎಲ್ಲ ಸಂಪಾದಕರು, ಮಾಧ್ಯಮದ ಬಂಧು, ಮಿತ್ರ-ರಿಗೆ ಸಲ್ಲಬೇಕಾದದ್ದು ಎಂದರು. ಡಾ.ವೀರೇಶ ಅವರು ಸಿನಿಮಾಕ್ಕೆ ಪ್ರಚಾರ ಹೆಚ್ಚು ಅಗತ್ಯ. ಇನ್ನೂ ಕೆಲವರಿಗೆ ಅದರ ಬಗ್ಗೆ ನಿರ್ಲಕ್ಷವಿದೆ.

ಚಲನಚಿತ್ರದ ಕುರಿತು ಅಬಿಮಾನಿಗಳು, ಪ್ರೇಕ್ಷಕ-ರಿಗೆ ಸುದ್ದಿ ತಲುಪಿಸಿ ಅವರನ್ನು ಚಿತ್ರಮಂದಿರಗಳತ್ತ ಸೆಳೆಯುವಂತ ಕಾರ್ಯ ಅಗಬೇಕಿದೆ ಎಂದರು. ಕಲಾಪೋಷಕರಮಠ ಸಿದ್ಧನಕೊಳ್ಳದ ಶಿವಕುಮಾರ ಸ್ವಾಮೀಜಿಯವರು ಸಾನಿಧ್ಯ ವಹಿಸಿ ಉತ್ತರ ಕರ್ನಾಟಕದ ಈ ಇಬ್ಬರೂ ಪ್ರಚಾರಕರಿಂದ ಇನ್ನೂ ಹೆಚ್ಚಿನ ಚಲನಚಿತ್ರಗಳು ಪ್ರಚಾರ ಪಡೆದುಕೊಳ್ಳಲಿ.

ಅವರ ಕಾರ್ಯವನ್ನೂ ಚಿತ್ರನಿರ್ಮಾಪಕರು, ನಿರ್ದೇಶಕರು ಬಳಸಿಕೊಳ್ಳಲಿ ಎಂದರು. ಜನಪ್ರಿಯ ಯುವ ನಾಯಕರು, ಉತ್ತರ ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ(ರಿ) ಕಾರ್ಯದರ್ಶಿ ಮಂಜುನಾಥ ಹಗೇದಾರ, ಚಲನಚಿತ್ರ ನಿರ್ದೇಶಕ ಸುರೇಶ ಹೆಬ್ಳೀಕರ್, ಚಿತ್ರಸಾಹಿತಿ ಮನ್ವರ್ಷಿ ನವಲಗುಂದ, ಚಿತ್ರ ನಿರ್ದೇಶಕ ಅರವಿಂದ ಮುಳಗುಂದ, ನಟಿ ಲಕ್ಷಿತಾ, ಚಿತ್ರನಿರ್ದೇಶಕ ಮಂಜು ಪಾಂಡವಪುರ, ಕಾದಂಬರಿಕಾರ ನಟ ರಾಜು ಗಡ್ಡಿ, ನಿಂಗರಾಜ ಸಿಂಗಾಡಿ, ಮಲ್ಯ ಬಾಗಲಕೋಟ, ಸೇರಿದಂತೆ ಅನೇಕ ಕಿರುಚಿತ್ರ, ಚಲನಚಿತ್ರಗಳಿಗೆ ಸಂಬಂಧಿಸಿದ ಕಿರುಚಿತ್ರಗಳ ನಟ ನಟಿಯರು, ನಿರ್ದೇಶಕರು, ತಂತ್ರಜ್ಞರು ಉಪಸ್ಥಿತರಿದ್ದರು.

## ಶರೀರದೊಳಗೆ ಕಬ್ಬಿಣದ ರಾಡ್ ಸಿಲುಕಿದರೂ ಸ್ಥಿರ ಕುಳಿತ ಭೂಪ



ಥಾಣೆ: ಬದ್ಲಾಪುರದಲ್ಲಿ ಆಘಾತ ಕಾರಿ ಘಟನೆ ಯೊಂದರಲ್ಲಿ, ನಿರ್ಮಾಣ ಹಂತದ ಕಟ್ಟಡದಿಂದ ಕಬ್ಬಿಣದ ರಾಡ್ ಬಿದ್ದು, 26 ವರ್ಷದ ಕಾರ್ಮಿಕನ ಮೇಲೆ ಬಿದ್ದಿದ್ದು, ಆತನ ಶರೀರದೊಳಗೆ ಅದು ಹಾದು ಹೋಗಿತ್ತು. ಈಗ ಅವರ ಸ್ಥಿರವಾಗಿದೆ.

ಕಾರ್ಮಿಕ 'ರು ಕಟ್ಟಡವೊಂದರಲ್ಲಿ ಮುಂಬರುವ ಶಾಪಿಂಗ್ ಮಾರ್ಟ್‌ನಲ್ಲಿ ಸಿಸಿಟಿವಿ ಅಳವಡಿಸುತ್ತಿದ್ದಾಗ ಶನಿವಾರ ಈ ಘಟನೆ ನಡೆದಿದೆ. ಬದ್ಲಾಪುರ್ ಪೊಲೀಸ್ ಠಾಣೆಯ ಹಿರಿಯ ಪೊಲೀಸ್ ಇನ್ಸ್‌ಪೆಕ್ಟರ್ ಅನಿಲ್ ಪಡ್ವಾಲ್, 'ಠಾಣೇಕರ್ ಪಲಾಸಿಯೋ ವಸತಿ ಕಾಮಗಾರಿ ಪ್ರದೇಶದಲ್ಲಿ ಈ ಘಟನೆ ವರದಿಯಾಗಿದೆ.

26 ವರ್ಷದ ಕಾರ್ಮಿಕ ಸತ್ಯಪ್ರಕಾಶ್ ತಿವಾರಿ ಶನಿವಾರ ಸಂಜೆ 4:30 ರ ಸುಮಾರಿಗೆ ಮಾರ್ಟ್‌ನ ಹೊರಗೆ ಸಿಸಿಟಿವಿ ಕ್ಯಾಮೆರಾ ಅಳವಡಿಸುತ್ತಿದ್ದರು.

8ನೇ ಮಹಡಿಯಿಂದ ಕಬ್ಬಿಣದ ರಾಡ್ ಬಿದ್ದು ಆತನನ್ನು ಚುಚ್ಚಿದಾಗ ತಿವಾರಿ ಅವರನ್ನು ತಕ್ಷಣ ದಾರಿಹೋಕರು ಚಿಕಿತ್ಸೆಗಾಗಿ ನಿರ್ಮಲ್ ಆಸ್ಪತ್ರೆಗೆ ಕರೆದೊಯ್ದರು. ತಿವಾರಿ ಅವರ ಸ್ಥಿತಿ ಈಗ ಸ್ಥಿರವಾಗಿದೆ' ಎಂದು ಹೇಳಿದರು.




**ಗೋಕಾಕ:** ಸೋಮವಾರದಂದು ಲಿಂಗೈಕ್ಯರಾದ ತಾಲೂಕಿನ ಅಂಕಲಗಿಯ ಶ್ರೀ ಅಡವಿಸಿದ್ಧೇಶ್ವರ ಮಠದ ಶ್ರೀ ಗುರುಸಿದ್ಧ ಮಹಾಸ್ವಾಮೀಜಿಯವರ ಪಾರ್ಥಿವ ಶರೀರದ ಅಂತಿಮ ದರ್ಶನವನ್ನು ಕೆಪಿಸಿಸಿ ಕಾರ್ಯಾಧ್ಯಕ್ಷ,ಯಮಕನಮರಡಿ ಶಾಸಕ ಸತೀಶ್ ಜಾರಕಿಹೊಳಿ ಅವರು ಪಡೆದು, ಅಪಾರ ಭಕ್ತ ಸಮೂಹವನ್ನು ಹೊಂದಿದ್ದ ಶ್ರೀಗಳ ಭಕ್ತ ವೃಂದಕ್ಕೆ ಅವರ ಅಗಲಿಕೆಯ ದುಃಖ ಭರಿಸುವ ಶಕ್ತಿ ಸಿಗಲಿ ಎಂದು ಸಂತಾಪ ಸೂಚಿಸಿದರು.

# ಈರಣ್ಣ ಕಡಾಡಿ ವಿರುದ್ಧ ಶಾಸಕ ರಮೇಶ್ ಜಾರಕಿಹೊಳಿ ವಾಗ್ದಾಳಿ



ಬೆಳಗಾವಿ: ಜಿಲ್ಲೆಯಲ್ಲಿ ಪ್ರಾಬಲ್ಯ ಹೊಂದಿರುವ ಜಾರಕಿಹೊಳಿ ಕುಟುಂಬ ಹಾಗೂ ಬಿಜೆಪಿ ಲಿಂಗಾಯತ ನಾಯಕರ ನಡುವೆ ಟಿಕೆಟ್ ಪೈಪೋಟಿ ನಡೆದಿದ್ದು, ಉಭಯ ಬಣಗಳೂ ಸಹ ತಮ್ಮ ತಮ್ಮ ಬೆಂಬಲಿಗರಿಗೆ ಟಿಕೆಟ್ ಕೊಡಿಸಲು ಪ್ರಯತ್ನ ನಡೆಸಿದ್ದಾರೆ. ಅದರಲ್ಲೂ ಅಥಣಿ ಕ್ಷೇತ್ರದ ಟಿಕೆಟ್ ಅನ್ನು ತಮ್ಮ ಆಪ್ತ ಮಹೇಶ್ ಕುಮಟಳ್ಳಿ ಅವ-ರಿಗೇ ನೀಡಬೇಕೆಂದು ರಮೇಶ್ ಜಾರಕಿಹೊಳಿ ಪಟ್ಟು ಹಿಡಿದಿದ್ದಾರೆ ಎನ್ನಲಾಗಿದೆ.

ಈ ಬಿಕ್ಕಟ್ಟು ಭಾನುವಾರದಂದು ಬೆಂಗಳೂರು ಹೊರವಲಯದ ರೆಸಾರ್ಟ್ ನಲ್ಲಿ ನಡೆದ ಬಿಜೆಪಿ ಕೋರ್ ಕಮಿಟಿ ಸಭೆಯಲ್ಲೂ ಪ್ರತಿ-ಧ್ವನಿಸಿದ್ದು, ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ ವಿರುದ್ಧ ಮಾಜಿ ಸಚಿವ ರಮೇಶ್ ಜಾರಕಿಹೊಳಿ, ಏಕವಚನದಲ್ಲಿ ವಾಗ್ದಾಳಿ ನಡೆಸಿದ್ದಾರೆ ಎಂದು ಹೇಳಲಾಗಿದೆ.

ಈ ಸಭೆಯಲ್ಲಿ ಮಾತನಾಡಿದ ಈರಣ್ಣ ಕಡಾಡಿ, ಗೋಕಾಕ್ ಮತ್ತು ಅರಭಾವಿ ಕ್ಷೇತ್ರದಲ್ಲಿ ಪಂಚಮಸಾಲಿ ಸಮಾಜ ಹೆಚ್ಚಿನ ಸಂಖ್ಯೆಯಲ್ಲಿದ್ದು, ಈ ಪೈಕಿ ಒಂದು ಕ್ಷೇತ್ರ ಪಂಚಮಸಾಲಿ ಅಭ್ಯರ್ಥಿಗೆ ಟಿಕೆಟ್ ನೀಡಿ ಮೀಸಲು ಕ್ಷೇತ್ರವಾಗಿರುವ ಯಮಕನಮರಡಿಯಲ್ಲಿ ಬಾಲಚಂದ್ರ ಜಾರಕಿಹೊಳಿಯವರನ್ನು ಕಣಕ್ಕಿಳಿಸುವುದು ಸೂಕ್ತ ಎಂದರು ಎನ್ನಲಾಗಿದೆ.

ಇದರಿಂದ ಸಿಡಿದೆದ್ದ ರಮೇಶ್ ಜಾರಕಿಹೊಳಿ, ನಾವು ಎಲ್ಲಿ ನಿಲ್ಲಬೇಕೆಂದು ಹೇಳಲು ನೀನ್ಯಾರು. ಜಾರಕಿಹೊಳಿ ಸಹೋದರರ ಕುರಿತು ಮಾತನಾಡಬೇಡ. ಪಕ್ಷದ ವಿಚಾರ ಮಾತ್ರ ಮಾತನಾಡು ಎಂದರಂತೆ. ಈ ಸಂದರ್ಭದಲ್ಲಿ ಯಡಿಯೂರಪ್ಪ ಹಾಗೂ ಧರ್ಮೇಂದ್ರ ಪ್ರಧಾನ್ ಮಧ್ಯಪ್ರವೇಶಿಸಿ ಇಬ್ಬರನ್ನೂ ಸಮಾಧಾನಪಡಿಸಿದ್ದಾರೆ ಎಂದು ಮೂಲಗಳು ಹೇಳಿವೆ.

# ವಿದ್ಯುತ್ ತಂತಿ ತಗುಲಿ ಟ್ರ್ಯಾಕ್ಟರ್ ಭಸ್ಮ



ಬೆಳಗಾವಿ: ಟ್ರ್ಯಾಕ್ಟರ್ ಸಾಗಿಸುತ್ತಿದ್ದ ಅಪಾರ ಪ್ರಮಾಣದ ಮೇವಿಗೆ ವಿದ್ಯುತ್ ತಂತಿ ತಗುಲಿ ಸುಟ್ಟು ಭಸ್ಮವಾದ ಘಟನೆ ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲೂಕಿನ ಹುಲ್ಲೋಳಿಹಟ್ಟಿ ಗ್ರಾಮದಲ್ಲಿ ನಡೆದಿದೆ.

ಹುಲ್ಲೋಳಿಹಟ್ಟಿ ಗ್ರಾಮದ ಮುಖ್ಯ ರಸ್ತೆಯಲ್ಲಿ ಅಪಾಯ ಮಟ್ಟ ಮೀರಿ ಟ್ರ್ಯಾಕ್ಟರ್ ಟ್ರಾಲಿಯಲ್ಲಿ ಮೇವು ತುಂಬಿಕೊಂಡು ಹೋಗುತ್ತಿದ್ದ ಸಂದರ್ಭ ವಿದ್ಯುತ್ ತಂತಿ ತಗುಲಿದೆ. ಪರಿಣಾಮ ಟ್ರಾಲಿಯಲ್ಲಿ ಇದ್ದ ಮೇವು ನೋಡು ನೋಡುತ್ತಿದ್ದಂತೆಯೇ ರಸ್ತೆ ಮಧ್ಯೆ ಸುಟ್ಟು ಭಸ್ಮವಾಗಿದೆ. ಅದೃಷ್ಟವಶಾತ್ ಚಾಲಕ ಪ್ರಾಣಾಪಾಯದಿಂದ ಪಾರಾಗಿದ್ದಾನೆ.

ಕೂಡಲೇ ಸ್ಥಳೀಯರು ಅಗ್ನಿಶಾಮಕ ಠಾಣೆಗೆ ಕರೆ ಮಾಡಿ ವಿಷಯ ತಿಳಿಸಿದ್ದಾರೆ. ಕೂಡಲೇ ಅಗ್ನಿಶಾಮಕ ಸಿಬ್ಬಂದಿ ಸ್ಥಳಕ್ಕೆ ಆಗಮಿಸಿ ಬೆಂಕಿ ನಂದಿಸುವಲ್ಲಿ ಯಶಸ್ವಿಯಾಗಿದ್ದಾರೆ. ಹುಕ್ಕೇರಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ.

# ಟಿಕೆಟ್ ಹಂಚಿಕೆ ಹೈಕಮಾಂಡ್ ನಿರ್ಧಾರಕ್ಕೆ ಬದ್ಧ: ಮಹೇಶ್ ಕುಮಟಳ್ಳಿ



ಬೆಳಗಾವಿ: ಅಥಣಿ ಕ್ಷೇತ್ರದ ಟಿಕೆಟ್ ಹಂಚಿಕೆಯಲ್ಲಿ ಯಾವುದೇ ಗೊಂದಲ ಇಲ್ಲ. ಪಕ್ಷ ಸೂಕ್ತ ಸಮಯದಲ್ಲಿ ಸರಿಯಾದ ನಿರ್ಧಾರ ಕೈಗೊಳ್ಳಲಿದೆ. ಟಿಕೆಟ್ ಹಂಚಿಕೆಯಲ್ಲಿ ಪಕ್ಷದ ಹೈಕಮಾಂಡ್ ತೆಗೆದುಕೊಳ್ಳುವ ನಿರ್ಧಾರಕ್ಕೆ ಬದ್ಧ ಎಂದು ಮಹೇಶ್ ಕುಮಟಳ್ಳಿ ಹೇಳಿದರು.

ಅಥಣಿ ಬಿಜೆಪಿ ಟಿಕೆಟ್ಗಾಗಿ ಲಕ್ಷ್ಮಣ ಸವದಿ ಹಾಗೂ ಮಹೇಶ್ ಕುಮಟಳ್ಳಿ ನಡುವೆ ಪೈಪೋಟಿ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಪಕ್ಷ ಸೂಕ್ತ ನಿರ್ಧಾರ ಕೈಗೊಳ್ಳಲಿದೆ. ಲಕ್ಷ್ಮಣ ಸವದಿ ಅಥಣಿ ಟಿಕೆಟ್ ಕೇಳಿದ್ದಾರೆ ಎಂಬ ವರದಿಯನ್ನು ನಾನೂ ಗಮನಿಸಿದ್ದೇನೆ. ಆದ-ರೆ ಅಥಣಿ ಟಿಕೆಟ್ ಬೇಕು ಎಂದು ಲಕ್ಷ್ಮಣ ಸವದಿ ಮಾಧ್ಯಮದ ಎದುರು ಹೇಳಿಲ್ಲ. ಲಕ್ಷ್ಮಣ ಸವದಿ ಟಿಕೆಟ್ ಕೇಳಿರುವ ವಿಚಾರವೂ ನನ್ನ ಗಮನಕ್ಕೆ ಬಂದಿಲ್ಲ ಎಂದರು.

ಅಥಣಿ ಕ್ಷೇತ್ರದಲ್ಲಿ ಲಕ್ಷ್ಮಣ ಸವದಿ ಜಾತಿವಾರು ಅಭಿಪ್ರಾಯ ಸಂಗ್ರಹ ವಿಚಾರವಾಗಿ, ಬಿಜೆಪಿ ಚಿಹ್ನೆ ಮೇಲೆಯೇ ಲಕ್ಷ್ಮಣ ಸವದಿ ಸಭೆ ಮಾಡುತ್ತಿದ್ದಾರೆ. ಅಥ-ಣಿಯಲ್ಲಿ ಬಿಜೆಪಿ ಸಂಘಟನೆಗಾಗಿ ಲಕ್ಷ್ಮಣ ಸವದಿ ಶ್ರಮಿಸುತ್ತಿದ್ದಾರೆ. ನಾನೂ ಜನರನ್ನು ಕೂಡಿಸಿ ಪಕ್ಷ ಸಂಘಟನೆಗಾಗಿ ಸಭೆ ಮಾಡುತ್ತಿದ್ದೇನೆ. ಇದಕ್ಕೆ ಬೇರೆ ಅರ್ಥ ಕಲ್ಪಿಸುವುದು ಬೇಡ ಎಂದು ಮಹೇಶ್ ಕುಮಟಳ್ಳಿ ಮನವಿ ಮಾಡಿದರು.

# ಜಯಮೃತ್ಯುಂಜಯ ಶ್ರೀಗೆ ಧಮ್ಕಿ: ಅರವಿಂದ ಬೆಲ್ಲದ್ ಗಂಭೀರ ಆರೋಪ



ಬೆಂಗಳೂರು: ಮೀಸಲಾತಿಗಾಗಿ ಹೋರಾಟ ಮಾಡಿದ ಜಯಮೃತ್ಯುಂ-ಜಯ ಸ್ವಾಮೀಜಿಗೆ ಹೋರಾಟದಲ್ಲಿ ಭಾಗವಹಿಸಿದ್ದ ಕೆಲ ನಾಯಕರೇ ಕುಡಿದು ಕರೆ ಮಾಡಿ ಧಮ್ಕಿ ಹಾಕುತ್ತಿದ್ದಾರೆ ಎಂದು ಬಿಜೆಪಿ ಶಾಸಕ ಅರವಿಂದ್ ಬೆಲ್ಲದ್ ಗಂಭೀರ ಆರೋಪ ಮಾಡಿದ್ದಾರೆ.

ನಗರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಬಸವ ಜಯಮೃತ್ಯುಂಜಯ ಸ್ವಾಮೀಜಿ ಈ ಕುರಿತಾಗಿ ನೋವನ್ನು ತೋಡಿಕೊಂಡಿದ್ದಾರೆ. ಯಾರು ಧಮ್ಕಿ ಹಾಕುತ್ತಿದ್ದಾರೆಂದು ನಮ್ಮ ಇಡೀ ಸಮುದಾಯಕ್ಕೆ ಗೊತ್ತಿದೆ.

ಮತ್ತೆ ಧಮ್ಕಿ ಹಾಕಿದರೆ ಏನು ಮಾಡಬೇಕು ಅನ್ನೋದು ನಮಗೆ ಗೊತ್ತಿದೆ. ಮೀಸಲಾತಿ ವಿಚಾರದಲ್ಲಿ ಮೂಗಿಗೆ ತುಪ್ಪ ಸವರುವ ಕೆಲಸ ಮಾಡಿಲ್ಲ ಎಂದರು.

# ಕತ್ತಿ ಕುಟುಂಬದಲ್ಲಿ ಬಿರುಕಿಲ್ಲವೆಂದು ಕಣ್ಣೀರಿಟ್ಟ ಉಮೇಶ್ ಕತ್ತಿ ಪುತ್ರ ನಿಖೀಲ್



ಚಿಕ್ಕೋಡಿ: ಚುನಾವಣೆಗೆ ದಿನಗಣನೆ ಆರಂಭವಾಗಿದೆ. ಆದರೆ ಹುಕ್ಕೇರಿ ಮತಕ್ಷೇತ್ರದ ದಿ. ಉಮೇಶ್ ಕತ್ತಿ ಅವರ ಉತ್ತರಾಧಿಕಾರಿ ಯಾರು ಎನ್ನುವ ಬಹು ದೊಡ್ಡ ಪ್ರಶ್ನೆ ಕ್ಷೇತ್ರದ ಜನರನ್ನು ಕಾಡುತ್ತಿದೆ. ಅಲ್ಲದೇ ಕ್ಷೇತ್ರದ ಜನರ ಜೊತೆಗೆ ಬಿಜೆಪಿ ವರಿಷ್ಠರಿಗೂ ಹುಕ್ಕೇರಿಯಲ್ಲಿ ಯಾರಿಗೆ ಟಿಕೆಟ್ ನೀಡಬೇಕು ಎನ್ನುವ ಗೊಂದಲ ಸೃಷ್ಟಿಯಾಗಿದೆ.

ಕೆಲ ತಿಂಗಳುಗಳ ಹಿಂದೆ ನಿಧನರಾದ ಸಚಿವ ಉಮೇಶ್ ಕತ್ತಿ ನಂತರ ಹುಕ್ಕೇರಿ ಕ್ಷೇತ್ರ ಯಾ-ರಿಗೆ ಎನ್ನುವ ಕುತೂಹಲ ಜನರಲ್ಲಿದೆ. ಒಂದು ಕಡೆ ಕತ್ತಿ ಸಹೋದರ ರಮೇಶ್ ಕತ್ತಿ ರೇಸ್ನಲ್ಲಿದ್ದರೆ ಮತ್ತೊಂದೆಡೆ ಕತ್ತಿಯವರ ಪುತ್ರ ನಿಖೀಲ್ ಕತ್ತಿ ಸಹ ಚುನಾವಣೆಗೆ ತಯಾರಿ ನಡೆಸಿದ್ದಾರೆ.

ಇಬ್ಬರೂ ತಮ್ಮದೇ ಆದ ಅಭಿಮಾನಿ ಬಳಗವನ್ನು ಹೊಂದಿರುವ ಕಾರಣ ಸಹಜವಾಗಿ ಬಿಜೆಪಿ ವ-ರಿಷ್ಠರಲ್ಲಿ ಟಿಕೆಟ್ ಯಾರಿಗೆ ನೀಡಬೇಕು ಎನ್ನುವ ಗೊಂದಲ ನಿರ್ಮಾಣವಾಗಿದೆ.

ಇದರ ಮಧ್ಯೆ ಕತ್ತಿ ಮನೆತನದಲ್ಲಿ ಟಿಕೆಟ್ಗಾಗಿ ಒಡಕು ಏರ್ಪಟ್ಟಿದೆ ಎನ್ನುವ ಊಹಾಪೋಹಗಳು ಹ-ರಿದಾಡುತ್ತಿವೆ. ಯಾವುದೇ ಒಡಕು ಕುಟುಂಬದಲ್ಲಿ ಇಲ್ಲ ಎನ್ನುವ ಸಂದೇಶ ಸಾರುವ ಕಾರ್ಯವನ್ನು ಮಾಜಿ ಸಂಸದ ಹಾಗೂ ಡಿಸಿಸಿ ಬ್ಯಾಂಕ್ ಅಧ್ಯಕ್ಷ ರಮೇಶ್ ಕತ್ತಿ ಮಾಡುತ್ತಿದ್ದಾರೆ.

ಟಿಕೆಟ್ಗಾಗಿ ಚಿಕ್ಕಪ್ಪ ಹಾಗೂ ಪುತ್ರನ ನಡುವೆ ಫೈಟ್ ನಡೆದಿದೆ ಎನ್ನುವ ಸುದ್ದಿಗಳು ಕ್ಷೇತ್ರದಲ್ಲಿ ಹ-ರಿದಾಡುತ್ತಿರುವುದಕ್ಕೆ ಉಮೇಶ್ ಕತ್ತಿ ಪುತ್ರ ಕೂಡ ಸ್ಪಷ್ಟನೆ ನೀಡಿದ್ದಾರೆ. ಬಿಜೆಪಿಯಿಂದ ಯಾರಿಗೆ ಟಿಕೆಟ್ ನೀಡಿದರೂ ಕತ್ತಿ ಮನೆತನ ಅವರ ಪರ ಕೆಲಸ ಮಾಡುತ್ತದೆ. ನಮ್ಮ ಮನೆಯಲ್ಲಿ ಯಾವುದೇ ಬಿರುಕು ಇಲ್ಲ ಎಂದು ನಿಖಿಲ್ ಕತ್ತಿ ಕಣ್ಣೀರು ಹಾಕಿದ್ದಾರೆ. ಕ್ಷೇತ್ರದಲ್ಲಿ ಇದುವರೆಗೂ ಯಾರು ಅಭ್ಯರ್ಥಿ ಎನ್ನುವ ನಿರ್ಣಯವಾಗದ ಕಾರಣ ಕತ್ತಿ ಅಭಿಮಾನಿಗಳಲ್ಲಿ ಗೊಂದಲ ಸೃಷ್ಟಿಯಾಗಿದೆ.

## ಹುಲ್ಲೋಳಿ ಅರಿಹಂತ ಬ್ಯಾಂಕ್‌ನಿಂದ ಜನಸ್ನೇಹಿ ಸೇವೆ: ಚೌಗಲಾ

# ಗ್ರಾಹಕ-ಸದಸ್ಯರು ಆಧಾರಸ್ತಂಭ, ಬ್ಯಾಂಕ್‌ಗೆ 4.55 ಕೋಟಿ ಲಾಭ



ಹುಕ್ಕೇರಿ: ಜಿಲ್ಲೆಯ ಜನರ ಜೀವನಾಡಿಯಾಗಿ, ಜನಸ್ನೇಹಿ ಆಡಳಿತಕ್ಕೆ ಹೆಸರುವಾಸಿಯಾಗಿ ಸೇವೆ ಸಲ್ಲಿಸುತ್ತಿರುವ ಪ್ರತಿಷ್ಠಿತ ಹುಕ್ಕೇರಿ ತಾಲೂಕಿನ ಹುಲ್ಲೋಳಿ ಅರಿಹಂತ ಸೌಹಾರ್ದ ಸಹಕಾರಿ ಸಂಘ ಕಳೆದ 2022-23 ನೇ ಸಾಲಿನ ಆರ್ಥಿಕ ವರ್ಷದಲ್ಲಿ 4.55 ಕೋಟಿ ರೂ ನಿವ್ವಳ ಲಾಭ ಗಳಿಸಿದೆ ಎಂದು ಬ್ಯಾಂಕಿನ ನಿರ್ದೇಶಕರೂ ಆದ ಹಿರಿಯ ನ್ಯಾಯವಾದಿ ಪಿ.ಆರ್.ಚೌಗಲಾ ಹೇಳಿದರು.

ತಾಲೂಕಿನ ಹುಲ್ಲೋಳಿ ಗ್ರಾಮದಲ್ಲಿ ಸೋಮವಾರ ಸಂಘದ ಪ್ರಧಾನ ಕಚೇರಿ ಸಭಾಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬ್ಯಾಂಕ್‌ನ ಸೇವೆಯನ್ನು ಗ್ರಾಹಕರ ಮನೆ ಬಾಗಿಲಿಗೆ ತಲುಪಿಸಲು, ಆಧುನಿಕ ತಂತ್ರಜ್ಞಾನವನ್ನು ಅಳವಡಿಸಲು ಆದ್ಯತೆ ನೀಡಲಾಗಿದೆ ಎಂದರು.

ಈ ಭಾಗದ ಜನರ ಆರ್ಥಿಕ ಸುಧಾರಣೆಗೆ ಕಳೆದ ಎರಡು ದಶಕಗಳ ಹಿಂದೆ ಜನ್ಮತಳೆದ ಸಂಸ್ಥೆ ಇಂದು ಹೆಮ್ಮರವಾಗಿ ಬೆಳೆದಿದೆ. ಗ್ರಾಹಕ ಸದಸ್ಯರು-ಆಡಳಿತ ಮಂಡಳಿ ಸಿಬ್ಬಂದಿ ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ. ಗ್ರಾಹಕರೇ ಬ್ಯಾಂಕಿನ ಆಧಾರಸ್ತಂಭ. ಸಾಲ ಕೊಡುವುದು ಸಲೀಸು. ಆದರೆ ಮರುಪಾವತಿ ಶ್ರಮದ ಕೆಲಸ ಎಂದು ಅವರು ಹೇಳಿದರು.

ಬ್ಯಾಂಕ್ ಅಧ್ಯಕ್ಷ ಜಯಪಾಲ ಚೌಗಲಾ ಮಾತನಾಡಿ, ಪ್ರಧಾನ ಕಚೇರಿ ಸೇರಿ ಸಂಘ ಒಟ್ಟು 10 ಶಾಖೆಗಳನ್ನು ಹೊಂದಿದೆ. 2022-23 ನೇ ಸಾಲಿನ ಆರ್ಥಿಕ ವರ್ಷದಲ್ಲಿ ಬ್ಯಾಂಕ್ ಒಟ್ಟು 1652 ಕೋಟಿ ರೂ ವಹಿವಾಟು ನಡೆಸಿದ್ದು 99 ಲಕ್ಷ ರೂ ಶೇರು ಬಂಡವಾಳವಿದೆ. 21 ಕೋಟಿ ಕಾಯ್ದಿಟ್ಟ ಹಾಗೂ ಇತರೆ ನಿಧಿಗಳಿದ್ದು 239 ಕೋಟಿ ದುಡಿಯುವ ಬಂಡವಾಳವಿದೆ. 170 ಕೋಟಿ ರೂ ಸಾಲ ವಿತರಿಸಲಾಗಿದ್ದು 217 ಕೋಟಿ ರೂ ಠೇವುಗಳಿವೆ. 68 ಕೋಟಿ ಗುಂತಾವಣೆಗಳಿದ್ದು 4.55 ಕೋಟಿ ರೂ ಲಾಭ ಗಳಿಸಿದೆ. ಶೇ.25 ರಷ್ಟು ಲಾಭಾಂಶ ವಿತರಿಸಲಾಗಿದ್ದು ಶೇ.99 ರಷ್ಟು ಸಾಲ-ಬಡ್ಡಿ ವಸೂಲಾಗಿದೆ. 15110 ಜನ ಸದಸ್ಯರಿದ್ದಾರೆ ಎಂದು ಅವರು ಮಾಹಿತಿ ನೀಡಿದರು.

ಪ್ರಧಾನ ವ್ಯವಸ್ಥಾಪಕ ಆನಂದ ಚೌಗಲಾ ಮಾತನಾಡಿ, ಸಹಕಾರಿ ತತ್ವದ ಮೂಲಕ ಬ್ಯಾಂಕಿಂಗ್ ವಲಯದಲ್ಲಿರುವ ಈ ಸಂಸ್ಥೆ ಬೆಳ್ಳಿ ಮಹೋತ್ಸವ ಹೊಸ್ತಿಲಲ್ಲಿದೆ. ಗ್ರಾಹಕ-ಸದಸ್ಯರ ಏಳಿಗೆಯಲ್ಲಿ ಬ್ಯಾಂಕ್‌ನ ಉನ್ನತಿಯಿದೆ ಎಂಬ ಭಾವನೆ ಮತ್ತು ಧ್ಯೇಯದೊಂದಿಗೆ ಕಾರ್ಯನಿರ್ವಹಿಸಲಾಗುತ್ತಿದೆ ಎಂದರು.

ಉಪಾಧ್ಯಕ್ಷೆ ಶೃತಿ ಅಶೋಕ ಪಾಟೀಲ, ನಿರ್ದೇಶಕರಾದ ಬಾಬು ಚೌಗಲಾ, ಮಾಯಪ್ಪಾ ಹೊಳೆಪ್ಪಗೋಳ, ಜಿನ್ನಪ್ಪಾ ಸಪ್ತಸಾಗರ, ಅಶೋಕ ಚೌಗಲಾ, ಬಸವರಾಜ ಪಾಟೀಲ, ಭರಮಪ್ಪಾ ಚೌಗಲಾ, ಬಾಳಪ್ಪಾ ಸಂಕೇಶ್ವರಿ, ಭೂಪಾಲ ಚೌಗಲಾ, ರಾಮಪ್ಪಾ ಗೋಟೂರಿ, ರವೀಂದ್ರ ಚೌಗಲಾ, ಬಾಹುಬಲಿ ನಾಗನೂರಿ, ಪುಷ್ಪಾ ಚೌಗಲಾ, ರಾಯಣ್ಣಾ ಭಂಗಿ, ಪ್ರಧಾನ ವ್ಯವಸ್ಥಾಪಕ ಆನಂದ ಚೌಗಲಾ ಮತ್ತಿತರರು ಉಪಸ್ಥಿತರಿದ್ದರು.

# ಮೇ 10 ತಪ್ಪದೇ ಮತ ಚಲಾಯಿಸಿ: ಪಿಡಿಒ ಅನೀಲ್ ಸಂತೆ




ಬೆಳಗಾವಿ: ಮತದಾನ ಚಲಾವನೆ ಪ್ರತಿಯೊಬ್ಬರ ಹಕ್ಕಾಗಿದ್ದು, ಮೇ 10 ರಂದು ತಪ್ಪದೇ ಪ್ರತಿಯೊಬ್ಬರು ಮತ ಚಲಾಯಿಬೆಕು ಎಂದು ಪಿಡಿಒ ಅನೀಲ್ ಸಂತೆ ಅವರು ತಿಳಿಸಿದರು.

ಕಾಗವಾಡ ಮತಕ್ಷೇತ್ರ ವ್ಯಾಪ್ತಿಯ ಶಿರೂರು ಗ್ರಾಮದ ಹೊರವಲಯದಲ್ಲಿ ನಾಲಾ ಹೂಳೆತ್ತುವ ಕಾಮಗಾರಿ ಸ್ಥಳದಲ್ಲಿ ಕೂಲಿಕಾರರಿಗೆ ಸೋಮವಾರ (ಏ.03) ಮತದಾನ ಜಾಗೃತಿ ಅಭಿಯಾನ ನಡೆಸಿ ಮಾತನಾಡಿದರು.

18 ವರ್ಷ ಮೇಲ್ಪಟ್ಟವರು ಕಡ್ಡಾಯವಾಗಿ ಮತದಾನ ಮಾಡಬೇಕು, ಜೊತೆಗೆ 80 ವರ್ಷ ಮೇಲ್ಪಟ್ಟವರಿಗೆ ಮನೆಯಿಂದಲೇ ಮತ ಚಲಾಯಿಸುವ ಸೌಲಭ್ಯ ನೀಡಲಾಗಿದ್ದು, ಅಂಗವಿಕಲರು ಸಹ ಇದರ ಸೌಲಭ್ಯ ಪಡೆದುಕೊಳಬೇಕು.

ಕೂಲಿಕಾರರು, ನನ್ನ ಮತ ಮಾರಾಟಕ್ಕಿಲ್ಲ, ನನ್ನ ಮತ ನನ್ನ ಹಕ್ಕು ಮುಂತಾದವ ಮತದಾನ ಜಾಗೃತಿ ಸಂಬಂಧಿಸಿದ ನಾಮ ಫಲಕ ಹಿಡಿದು ಪ್ರದರ್ಶಿಸಿದರು.

# ರಾಯಭಾಗ ಪಟ್ಟದಲ್ಲಿ ಶಕ್ತಿ ಪ್ರದರ್ಶಿಸಿದ ಜನಾರ್ಧನ ರೆಡ್ಡಿ




ರಾಯಭಾಗ: 27ನೇ ವಯಸ್ಸಿನಲ್ಲಿ ಬಳ್ಳಾರಿಯಿಂದ ರಾಜಕೀಯಕ್ಕೆ ಎಂಟ್ರಿ ಕೊಟ್ಟಿದ್ದೆ ಎಂದು ಹೇಳಿದ ಜನಾರ್ಧನ ರೆಡ್ಡಿ ಬಿಜೆಪಿ ಯ ಶ್ರೀರಾಮುಲುರವರನ್ನು ನೆನೆದು ,ಸೋನಿಯಾ ಗಾಂಧಿ ವಿರುದ್ಧ ನಿಂತ ಶುಷ್ಮಾ ಸ್ವರಾಜ್ಯ ಪರ ಬ್ಯಾಟ್ ಬಿಸಿದ್ದೆ ನಾನು ಎಂದು ಹೇಳಿದ್ದಾರೆ.

2008ರಲ್ಲಿ ಬಿಜೆಪಿ ಕರ್ನಾಟಕ ಚುಕ್ಕಾಣಿ ಹಿಡಿಯಲು ರೆಡ್ಡಿ ಕಾರಣ ಎಂದು ಇಡಿ ದೇಶ ಮಾತನಾಡುತ್ತಿದೆ ಎಂದು ಹೇಳಿದ್ದಾರೆ.

ಹೆಲಿಕ್ಯಾಪ್ಟರ್ ಟೂ-ರಿಸಂ ಸ್ಟಾರ್ಟ್ ಮಾಡಿದ್ದೂ ನಾನು ಹೇಳಿದ್ದಾರೆ,ಗುಲ್ಬರ್ಗಾದಲ್ಲಿ ವಿಮಾನ ಶ್ರಯ ನಾನೆ ಪ್ರಾರಂಭ ಮಾಡಿದ್ದು ನಾನು ಎಂದು ರೆಡ್ಡಿ ಹೇಳಿದ್ದಾರೆ.

ಕುಡಿಯುವ ನೀರು ಮತ್ತು ರೈತರ ಪರ ಅನೇಕ ಅಭಿವೃದ್ಧಿ ಕೆಲಸ ಕೈಕೊಂಡಿದ್ದು ನಾನೆ ಎಂದು ಹೇಳಿದ್ದಾರೆ,ನನ್ನನ್ನು ಬಲೆಗೆ ಹಾಕಿ ರಾಜಕೀಯ ಮತ್ತು ಜನರಿಂದ ದೂರ ಇರುವಂತೆ ಮಾಡಿದ್ದು ನನ್ನ ಜೊತೆ ಇದ್ದವರೇ ಎಂದು ರೆಡ್ಡಿ ಹೇಳಿದ್ದಾರೆ.

ಭಗವಾನ ಶ್ರೀರಾಮರನ್ನು ನೆನೆದು ಬಸವಣ್ಣವರ ವಚನದ ಮೂಲಕ ಜನರ ಮನ ಗೆದ್ದ ರೆಡ್ಡಿ,ಕಷ್ಟದಲಿರುವ ಜನರಿಗೆ ಸಹಾಯ ಮಾಡುವ ವ್ಯಕ್ತಿ ರೆಡ್ಡಿ ಎಂದು ಹೇಳಿದ್ದಾರೆ.

ಆಡಳಿತ ಪಕ್ಷದ ವಿರುದ್ಧ ಕಿಡಿಕಾರಿದ ರೆಡ್ಡಿ , ವೋಟ್ ಕೇಳಲು ಅವರಿಗೆ ನಾಚಿಕೆ ಆಗಬೇಕು ಎಂದು ಹೇಳಿದ್ದಾರೆ.

5 ಕೋಟಿ ವೆಚ್ಚದಲ್ಲಿ ಟ್ರೈನಿಂಗ್ ಕೊಡುವ ಯೋಜನೆ ಬಗ್ಗೆ ತಿಳಿಸಿದ ರೆಡ್ಡಿ ,ಪಿ ರಾಜು ಕೈ ಹಿಡಿದಂತೆ ಮಾಜಿ ಸೈನಿಕ ಭಜಂತ್ರಿ ಯವರ ಕೈ ಕಿಡಿಯಿರಿ ಎಂದು ರೆಡ್ಡಿ ಹೇಳಿದ್ದಾರೆ.

ಭಜಂತ್ರಿಯವರನ್ನು ಗುಣಗಾನ ಮಾಡಿದ ರೆಡ್ಡಿ ,ದೇಶ ಕಾಯುವ ಸೈನಿಕ ಈಗ ಕುಡಚಿ ಕಾಯುತ್ತಾನೆ ಎಂದು ಹೇಳಿದ್ದಾರೆ.ಕಲ್ಯಾಣ ರಾಜ್ಯ ಪ್ರಗತಿ ಪಕ್ಷದ ಪ್ರಣಾಳಿಕೆಯನ್ನು ಬಿಡಿ ಬಿಡಿಯಾಗಿ ಜನರಿಗೆ ತಿಳಿಹೇಳಿದ ರೆಡ್ಡಿ ಜನರನ್ನು ಆಕರ್ಶಿಸಿದ್ದಾರೆ.

## ಕಾಗವಾಡ ಶಾಸಕರ ಆಪ್ತನಿಂದ

# ಲಕ್ಷಾಂತರ ರೂ. ಡಿಲ್: ವಿಡಿಯೋ ವೈರಲ್



ಬೆಳಗಾವಿ: ರಾಜ್ಯ ಚುನಾವಣೆಯ ಘೋಷಣೆಗುತ್ತಿದ್ದಂತೆ ನೀತಿ ಸಂಹಿತೆ ಜಾರಿಯಾಗಿದೆ. ಇಂಥ ಸಂದರ್ಭದಲ್ಲಿ ಶಾಸಕರೊಬ್ಬರ ಆಪ್ತ ಲಂಚ ಪಡೆದ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ.

ಕಾಗವಾಡ ಬಿಜೆಪಿ ಶಾಸಕ ಶ್ರೀಮಂತ ಪಾಟೀಲ್ ಆಪ್ತ ವಲಯದಲ್ಲಿ ಗುರುತಿಸಿಕೊಂಡ ನಾನಾಸಾಬ್ ಅವತಾಡೆಯಿಂದ ಹಣ ಪಡೆದ ವಿಡಿಯೋ ಸದ್ದು ಮಾಡುತ್ತಿದೆ.

ಗುತ್ತಿಗೆದಾರ ಆಗಿರುವ ನಾನಾಸಾಬ್ ಅವತಾಡೆಯಿಂದ ಡೀಲ್ ಮಾಡಲಾಗಿದೆ. ಕಾಮಗಾರಿಯೊಂದರ ಟೆಂಡರ್ ನಲ್ಲಿ ಲಂಚ ಪಡೆದ ನಾನಾಸಾಬ್ ಎರಡು ಲಕ್ಷ ನಗದು ಹಣ ಪಡೆದು ಕಾರಿನಲ್ಲಿಡುವ ವಿಡಿಯೋ ವೈರಲ್ ಆಗಿದೆ.

ಉಪಗುತ್ತಿಗೆದಾರನಿಂದ ಹಣ ಪಡೆದು ಚುನಾವಣೆ ಜೋರು ಮಾಡೋಣ ಎಂದ ನಾನಾಸಾಬ್ ಹೇಳಿಕೆ ಕೂಡ ವಿಡಿಯೋದಲ್ಲಿದೆ. ಕೆಲ ದಿನಗಳ ಹಿಂದೆ ನಾನಾಸಾಬ್ ಅವತಾಡೆ ಕಚೇ-ರಿಯಲ್ಲಿ ಮಾತುಕತೆ ನಡೆದಿತ್ತು ಎನ್ನಲಾಗಿದೆ. ಮಾತುಕತೆ ಬಳಿಕ ಕಚೇರಿ ಮುಂದೆ ಹಣ ಪಡೆದುಕೊಂಡ ನಾನಾಸಾಬ್. ವಿಡಿಯೋ ಮಾಡಿದವರಿಂದ ನಾನಾಸಾಬ್ ಬಳಿಯೂ ಹಣ-ಕ್ಕೆ ಡಿಮ್ಯಾಂಡ್ ಮಾಡಿದ್ದರು ಎನ್ನಲಾಗಿದೆ.

ವಿಡಿಯೋ ತೋರಿಸಿ ಹಣಕ್ಕೆ ಡಿಮ್ಯಾಂಡ್ ಮಾಡಿದ್ದ ವಿಡಿಯೋ ಮಾಡಿದ ಉಪಗುತ್ತಿಗೆದಾರ. ನಾನಾಸಾಬ್ ಹಣ ಕೊಡುವುದಿಲ್ಲ ಅಂದಿದ್ದಕ್ಕೆ ವಿಡಿಯೋ ವೈರಲ್ ಮಾಡಿದ್ದಾರೆ ಎನ್ನುವ ಆರೋಪವು ಕೇಳಿ ಬಂದಿದೆ.

# ನೋ ಬಾಲ್' ಕೊಟ್ಟ ಅಂಪೈರ್‌ನ ಚಾಕುವಿನಿಂದ ಕೊಂದ ಆಟಗಾರ




ಭುವನೇಶ್ವರ್: ಕ್ರಿಕೆಟ್ ಆಡುವಾಗ ಸಣ್ಣಪುಟ್ಟ ವಿಚಾರಕ್ಕೆ ವಾಗ್ವಾದ ನಡೆಯುವುದು ಸಾಮಾನ್ಯ. ಆದರೆ ಇಲ್ಲೊಂದು ಘಟನೆ ಒಡಿಶಾ ರಾಜ್ಯವನ್ನು ಬೆಚ್ಚಿ ಬೀಳಿಸಿದೆ.

ಒಡಿಶಾದ ಕಟಕ್ ನಲ್ಲಿ ಬ್ರಹ್ಮಪುರ ಮತ್ತು ಶಂಕರಪುರ ಎಂಬ ಎರಡು ತಂಡಗಳ ನಡುವೆ ಕ್ರಿಕೆಟ್ ಮ್ಯಾಚ್ ನಡೆಯುತ್ತಿತ್ತು. ಈ ಪಂದ್ಯಕ್ಕೆ 22 ವರ್ಷದ ಲಕ್ಕಿ ರಾವುತ್ ತೀಪುಗಾರನಾಗಿ ನಿಂತಿದ್ದರು. ಪಂದ್ಯ ನಡೆಯುತ್ತಿದ್ದ ವೇಳೆ ಎಸೆತವೊಂದಕ್ಕೆ 'ನೋ ಬಾಲ್' ಎಂದು ಅಂಪೈರ್ ತೀಪು ನೀಡಿದ್ದಾರೆ. ಈ ವೇಳೆ ಇದು ನೋ ಬಾಲ್ ಅಲ್ಲ ಎಂದು ಸ್ಮೃತಿ ರಂಜನ್ ರೌತ್ ಎಂಬಾತ ಅಂಪೈರ್ ನೊಂದಿಗೆ ವಾದಕ್ಕೆ ಇಳಿದಿದ್ದಾನೆ. ವಾದ ಜಗಳಕ್ಕೆ ತಿರುಗಿ ಚೂ-ರಿಯಿಂದ ತೀಪುಗಾರನಾಗಿ ನಿಂತಿದ್ದ ಲಕ್ಕಿ ರಾವುತ್ ಗೆ ಇರಿದಿದ್ದಾನೆ. ಗಂಭೀರವಾಗಿ ಗಾಯಗೊಂಡಿದ್ದ ಲಕ್ಕಿ ರಾವುತ್ ನನ್ನು ಆಸ್ಪತ್ರೆಗೆ ದಾಖಲಿಸಲಾಗಿದ್ದು, ಆಸ್ಪತ್ರೆಗೆ ದಾಖಲಿಸುವಾಗಲೇ ಆತ ಮೃತಪಟ್ಟಿದ್ದಾನೆ ಎಂದು ವರದಿ ತಿಳಿಸಿದೆ.

ಆರೋಪಿಯನ್ನು ಜನ ಪೊಲೀಸರಿಗೆ ಒಪ್ಪಿಸಿದ್ದಾರೆ. ಘಟನೆಯಿಂದ ಗ್ರಾಮದಲ್ಲಿ ಉದ್ವಿಗ್ನತೆ ಉಂಟಾಗಿದ್ದು, ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಪೊಲೀಸ್ ಬಂದೋಬಸ್ತ್ ಮಾಡಲಾಗಿದೆ.

# ಸುರೇಶಯಾದವ ಪೌಂಡೇಶನ್ ಕಾರ್ಯ ಶ್ಲಾಘನಿಯ



ಬೆಳಗಾವಿ: ಪ್ರತಿ ವರ್ಷ ಪವಿತ್ರಮಾಸವಾದ ರಂಜಾನ ತಿಂಗಳನಲ್ಲಿ ಮುಸ್ಲಿಂ ಸಮಾಜದ ನಮ್ಮ ಸಹೋದರ ಸಹೋದರಿಯರು ಬಹಳ ಶ್ರುದ್ದಾ ಭಕ್ತಿಯಿಂದ ಉಪವಾಸ ಮಾಡುತ್ತಾರೆ. ಬಹು ಧರ್ಮ ಹಾಗೂ ಸಂಸ್ಕೃತಿಯ ಜಗತ್ತಿನಲ್ಲೇ ನಮ್ಮ ಭಾರತದೇಶಕ್ಕೆ ವಿಶಿಷ್ಟ ಸ್ಥಾನವಿದೆ ಎಂದು KMDC ಮಾಜಿ ಅಧ್ಯಕ್ಷರಾದ ಶ್ರೀ ಮುಕ್ತಾರ ಪಠಾಣ ಅವರು ಹೇಳಿದರು.

ಬೆಳಗಾವಿಯ ಸುರೇಶಯಾದವ ಪೌಂಡೇಶನ್ ವತಿಯಿಂದ ಪ್ಯಾರಡೈಸ್ ಹಾಲನಲ್ಲಿ ಜರುಗಿದ ಇಫ್ತಾರ- ಕೂಟ ಕಾರ್ಯಕ್ರಮದಲ್ಲಿ ಪಾಲಗೊಂಡು ಮಾತನಾಡಿದಅವರು ನಾಗ-ರೀಕತೆತೊಟ್ಟಿಲಲ್ಲಿ ಮಾನುವ ಸಮೂಹ ಜೀವನ ನಡೆಸಲು ಕೆಲವು ಕಟ್ಟಳೆಗಳನ್ನು ಮಾಡಿಕೊಂಡರು.

ಅವೇ ಮುಂದೆ ವಿವಿಧ ಧರ್ಮಗಳಾಗಿ ಮಾರ್ಪಟ್ಟವು.ಹೀಗೆ ಸುಖಮಯಜೀವನ ನಡೆಸಲು ಹುಟ್ಟಿದ ಧರ್ಮಗಳೇ ಇಂದು ನಮ್ಮ ನಡುವೆಕಂದಕ ಮೂಡಿಸುತ್ತಿರುವುದು ವಿಷಾ ಧೀನೀಯ. ಅಂಥ ವಿಷ ವರ್ತೂಲದಿಂದ ಪಾರಾಗಲು ಇಂಥ ಸಾಮರಸ್ಯ ಸಾರಬಲ್ಲ ಇಫ್ತಾರ-ಕೂಟಗಳು ಸಹಕರಿಯಾಗಬಲ್ಲವು.ಈ ನಿಟ್ಟಿನಲ್ಲಿ "ಸುರೇಶಯಾದವ ಪೌಂ-ಡೇಶನ್‌ಕಾರ್ಯ ಶ್ಲಾಘನಿಯ " ಎಂದರು.ಸುರೇಶಯಾದವ ಅವರನ್ನು ಅವರ ಗೆಳೆಯ ಬಳಗದವರು ಸತ್ಕಾರಿಸಿ ಗೌರವಿಸಿದರು.

ಸತ್ಕಾರ ಸ್ವೀಕರಿಸಿ ಮಾತನಾಡಿದ ಸುರೇಶಯಾದವ ಅವರು ಆಟೋನಗರ ಕೈಗಾರಿಕೆ ಪ್ರದೇಶದಲ್ಲಿ ವಿವಿಧ ಸಮುದಾಯದ ಉದ್ಯಮಿಗಳಿದ್ದು ಮೊದಲಿನಿಂದ ಎಲ್ಲರೂ ಒಂದೇ ಕುಟುಂಬದ ಸದಸ್ಯರಂತೆ ಬದುಕುತಿ-ದ್ದೇವೆಎಂದರು.

ಈ ಕಾರ್ಯಕ್ರಮದಲ್ಲಿ ಸಲೀಮ್ ಮುಲ್ಲಾ, ರಿಯಾಜ, ಆಯುಭ. ಮಹಮ್ಮದಶರೀಫ್ ಪಟೇಲ್, ಏಕನಾಥ್ ಅಗಸಿಮಣಿ, ಮಹದೇವಟೊಣ್ಣಿ. ದಿಕ್ಷಿತ NS ಬಿರಾದಾರ ಮುಂತಾದವರು ಉಪಸ್ಥಿತರಿದ್ದರು.

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089